ಸಂಪುಟ : 13 Volume ಸಂಚಿಕೆ : 255 Issue ಪುಟಗಳು : 08 Pages ಗುರುವಾರ 27 ನವೆಂಬರ 2025 ₹6 PRGINO. 120927(RNINO:KARKAN/2011/48371) BDR/054/2026-2027 www.mallammanudi.in mallammanudi@gmail.com 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

**ಬೆಳಗು**
ನನ್ನ ಅನುಮತಿಯಿಲ್ಲದೆ ಯಾರೂ ನನ್ನನ್ನು ನೋಯಿಸಲು ಸಾಧ್ಯವೇ ಇಲ್ಲ.
ಮಹಾತ್ಮ ಗಾಂಧಿ

# ಮಲ್ಲಮ್ಮ ನುಡಿ

ಕನ್ನಡ ಕಿರಣ
ಸಂಪಾದಕರು: ರಮೇಶ ರೆಡ್ಡಿ
Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

2 ಪ್ರತಿಯೊಬ್ಬ ಪ್ರಜೆಗೆ ಸಂವಿಧಾನ ದಾರಿದೀಪ
3 ಮಹಿಳಾ ದೌರ್ಜನ್ಯ ಸಮಿತಿಗೆ ದೂರು ನೀಡಿ
4 ಕೇಂದ್ರ ಸರ್ಕಾರ ಕಾರ್ಮಿಕ ವಿರೋಧಿ
8 ಕಾರ್ಮಿಕ ಸಂಘಟನೆಗಳೊಂದಿಗೆ ಸಭೆ

# ಸಿಎಂ ಡಿಸಿಎಂ ಸಂಧಾನ ಸೂತ್ರ ಫಿಕ್ಸ್

## ದಿಲ್ಲಿಯಲ್ಲಿ ರಾಹುಲ್, ಸೋನಿಯಾ ಬಳಿ ಚರ್ಚಿಸಿ ಸಮಸ್ಯೆ ಇತ್ಯಾರ್ಥ: ಖರ್ಗೆ

### ಸೌಹಾರ್ದಯುತ ಪರಿಹಾರಕ್ಕೆ ಯತ್ನ

ಸೌಹಾರ್ದಯುತವಾಗಿಬಗೆಹರಿಸಲುಕಾಂಗ್ರೆಸ್‌ವರಿಷ್ಠರುಶೀಘ್ರದಲ್ಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ನ.28 ಅಥವಾ 29 ರಂದು ದೆಹಲಿಗೆ ಕರೆಸಿ ಮಾತುಕತೆ ನಡೆಸಬಹುದು. ಸಿದ್ದರಾಮಯ್ಯ ಮತ್ತು ಡಿ ಕೆ ಶಿವಕುಮಾರ್ ಬಣಗಳನಡುವಿನಕಲಹಮತ್ತುನಾಯಕತ್ವದಸಮಸ್ಯೆಗಳನ್ನುಬಗೆಹರಿಸಲು ತೊಡಗಿಸಿಕೊಂಡಿರುವ ಪಕ್ಷದ ಉಸ್ತುವಾರಿಗಳ ಶಿಫಾರಸುಗಳ ಆಧಾರದ ಮೇಲೆಹೈಕಮಾಂಡ್‌ಮಧ್ಯಪ್ರವೇಶಿಸುವನಿರ್ಧಾರತೆಗೆದುಕೊಳ್ಳಲಾಗಿದೆ.

### ವರಿಷ್ಠರಜೊತೆಚರ್ಚಿಸಿಸಮಸ್ಯೆ ಇತ್ಯರ್ಥ:ಖರ್ಗೆ

ಸಿದ್ದರಾಮಯ್ಯಮತ್ತುಡಿಕೆಶಿವಕುಮಾರ್‌ಅವರೊಂದಿಗೆಬೆಂಗಳೂರಿನಲ್ಲಿ ಸಭೆ ನಡೆಸಿದ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಸೋನಿಯಾ ಗಾಂಧಿಮತ್ತುರಾಹುಲ್‌ಗಾಂಧಿಜೊತೆಇಂದುಚರ್ಚಿಸಲಿದ್ದಾರೆ. ವರಿಷ್ಠರ ಜೊತೆ ಮಾತನಾಡಿ ಕರ್ನಾಟಕದ ಪ್ರಸ್ತುತ ರಾಜಕೀಯ ಪರಿಸ್ಥಿತಿಯನ್ನು ತಿಳಿಗೊಳಿಸಲಿದ್ದೇವೆ. ಇದು ಪಕ್ಷದ ಆಂತರಿಕ ವಿಚಾರ. ಎಲ್ಲವುದಕ್ಕೂ ಪರಿಹಾರಸಿಗಲಿದೆಎಂದುಮಲ್ಲಿಕಾರ್ಜುನಖರ್ಗೆ ದಿಲ್ಲಿಯಲ್ಲಿ ವಿವರಿಸಿದ್ದಾರೆ.

### ಸಿಎಂ ಆಪ್ತರ ಜೊತೆ ಡಿಕೆಶಿ ಮಾತು

ಮುಖ್ಯಮಂತ್ರಿಸಿದ್ದರಾಮಯ್ಯ ಅವರಆಪ್ತಒಲಯದಲ್ಲಿಪ್ರಭಾವಿಗಳಾಗಿರುವ ಸಚಿವರಾದಸತೀಶ್‌ಜಾರಕಿಹೊಳಿ, ಜಮೀರ್ ಅಹ್ಮದ್‌ಖಾನ್, ಕೆ.ಜಿ. ಜಾರ್ಜ್ ಸೇರಿ ಅನೇಕರನ್ನು ಭೇಟಿ ಆಗಿ ಮಾತುಕತೆ ನಡೆಸಿರುವುದು ಕುತೂಹಲಕ್ಕೆ ಕಾರಣವಾಗಿದೆ. ಸಿದ್ದರಾಮಯ್ಯನವರ ಮನವೊಲಿಸಬೇಕು. ಹೈಕಮಾಂಡ್ ಸಿಎಂ ಆಗಲು ಒಪ್ಪಿದರೆ,ಸುಗಮ ಆಡಳಿತಕ್ಕೆ ಸಹಕರಿಸಬೇಕು ಎಂದು ಜಾರಕಿ ಹೊಳಿ ಬಳಿ ಡಿಕೆಶಿ ಅವರು ಚರ್ಚಿಸಿದ್ದು, ಎಲ್ಲವದಕ್ಕೂ ಹೈಕಮಾಂಡ್ ಮಾಹಿತಿ ನೀಡಿದ ಬಳಿಕ ನೋಡೋಣ ಎಂದು ಜಾರಕಿ ಹೊಳಿ ಉತ್ತರಿಸಿರುವುದಾಗಿ ಮೂಲಗಳು ಖಚಿತ ಪಡಿಸಿವೆ.

### ಭಾಗವತ್‌ಗೆ ಭೇಟಿ ಮಾಡಬೇಕೆ?: ಪ್ರಿಯಾಂಕ್

ರಾಹುಲ್‌ಗಾಂಧಿಯಲ್ಲದಿದ್ದರೆನಾನುಮೋಹನ್‌ಭಾಗವತ್(ಆರೆಸ್ಸೆಸ್ ಮುಖ್ಯಸ್ಥ) ಅವರನ್ನು ಭೇಟಿ ಮಾಡಬೇಕೆ? ನನ್ನ ಸಭೆಯ ಬಗ್ಗೆ ಸಿಎಂ ಮತ್ತು ಉಪ ಮುಖ್ಯಮಂತ್ರಿಗೆ ವರದಿ ಮಾಡದೆ ನಾನು ಕೇಶವ ಕೃಪಾ (ಆರೆಸ್ಸೆಸ್‌ರಾಜ್ಯಪ್ರಧಾನಕಚೇರಿ)ಗೆವರದಿಮಾಡಲೇ?ಎಂದುಸಚಿವ ಪ್ರಿಯಾಂಕ್ ಖರ್ಗೆ ಪ್ರಶ್ನಿಸಿದ್ದಾರೆ.ರಾಹುಲ್ ಬಳಿ ರಾಜ್ಯ ವಿದ್ಯಾಮಾನ ವರದಿ ನೀಡಿದ ಕುರಿತು ಪ್ರಶ್ನಿಸಿದ್ದಕ್ಕೆ ಅವರು ಮೇಲಿನಂತೆ ಉತ್ತರಿಸಿದ್ದಾರೆ. ಸಮಯ ಬಂದಾಗ ವರಿಷ್ಠರು ಎಲ್ಲ ಗೊಂದಲ ಪರಿಹರಿಸುತ್ತಾರೆ ಎಂದು ಪ್ರಶ್ನೆಯೊಂದಕ್ಕೆ ವಿವರಿಸಿದ್ದಾರೆ.

**ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:**

ರಾಜ್ಯ ಕಾಂಗ್ರೆಸ್‌ನಲ್ಲಿ ಸಿಎಂ ಕುರ್ಚಿ ಸಂಬಂಧ ಉಂಟಾಗಿದ್ದ ಬಿಕ್ಕಟ್ಟು ಬಹುತೇಕ ಅಂತಿಮ ಹಂತಕ್ಕೆ ಬಂದು ತಲುಪಿದೆ. ಡಿಸಿಎಂ-ಸಿಎಂ ನಡುವಿನ ಸಂಧಾನಕ್ಕೆ ಖುದ್ದು ರಾಹುಲ್ ವೇದಿಕೆ ಕಲ್ಪಿಸಲಿದ್ದಾರೆ.

**ರಾಹುಲ್ ಖರ್ಗೆ ಭೇಟಿ:** ಇದಕ್ಕೂ ಮುನ್ನ ಇಂದು (ಗುರುವಾರ) ಎಐಸಿಸಿಅಧ್ಯಕ್ಷಮಲ್ಲಿಕಾರ್ಜುನಖರ್ಗೆ ಅವರುರಾಹುಲ್‌ಗಾಂಧಿಅವರನ್ನು ಭೇಟಿಯಾಗಿ ರಾಜ್ಯದ ರಾಜಕೀಯ ಬೆಳವಣಿಗೆ ಬಗ್ಗೆ ವಿವರ ನೀಡಲಿದ್ದಾರೆ ಎಂದು ಮೂಲಗಳು ಖಚಿತ ಪಡಿಸಿವೆ.

ಏತನ್ಮಧ್ಯೆ ವಿದೇಶ ಪ್ರವಾಸದಿಂದ ವಾಪಸ್ ಆಗಿರುವ ರಾಹುಲ್ ಗಾಂಧಿ ದೆಹಲಿಯಲ್ಲಿ ರಾಜ್ಯದ ಕಾಂಗ್ರೆಸ್ ಹಿರಿಯ ನಾಯಕರ ಜೊತೆಗೂ ಒನ್ ಟು ಒನ್ ಮಾತುಕತೆ ನಡೆಸಿದ್ದಾರೆ.

**ಸಿಎಂ ಅನಿವಾರ್ಯತೆ..?** ರಾಜ್ಯದ ನಾಯಕರು, ಸಿಎಂ ಸಿದ್ದರಾಮಯ್ಯ ಅವರ ಅನಿವಾರ್ಯತೆ ಕಾಂಗ್ರೆಸ್ ಪಕ್ಷಕ್ಕೆ ಹೇಗಿದೆ ಎಂಬ ವಿವರಣೆಯನ್ನು ನೀಡಿದ್ದಾರೆ. ಜಾತಿವಾರು ಲೆಕ್ಕಾಚಾರ, ಜನರ ಮೇಲೆ ಸಿದ್ದರಾಮಯ್ಯ ಅವರ ಪ್ರಭಾವ ಹಾಗೂ ನಾಡಿಗೆ ಅವರ ಅನಿವಾರ್ಯತೆ ಕುರಿತು ವಿವರಿಸಿದ್ದಾರೆ ಎಂದು ತಿಳಿದು ಬಂದಿದೆ.



### ಸಿಎಂ ಹುದ್ದೆಗೆ ಕಾಮಿತಿ ಷರತ್ತಿರಲಿಲ್ಲ:ಜಾರ್ಜ್

ಸರ್ಕಾರ ರಚನೆಯ ಸಮಯದಲ್ಲಿ ಕಾಂಗ್ರೆಸ್ ಶಾಸಕಾಂಗ ಪಕ್ಷ (ಸಿಎಲ್ಪಿ) ಸಿದ್ದರಾಮಯ್ಯ ಅವರನ್ನುಸಿಎಂ ಆಗಿಸರ್ವಾನುಮತದಿಂದಆಯ್ಕೆಮಾಡಿತ್ತು. ಆದರೆ ಯಾವುದೇ ಕಾಲಮಿತಿಯ ಷರತ್ತನ್ನು ವಿಧಿಸಲಾಗಿರಲಿಲ್ಲ ಎಂದು ಇಂಧನ ಸಚಿವ ಕೆ.ಜಿ. ಜಾರ್ಜ್ ಅವರು ಸ್ಪಷ್ಟಪಡಿಸಿದ್ದಾರೆ. ಹೊಸಪೇಟೆಯಲ್ಲಿ ಸುದ್ದಿಗಾರರಜೊತೆಮಾತನಾಡಿ, ಸರ್ಕಾರರಚನೆಯಸಮಯದಲ್ಲಿಕಾಂಗ್ರೆಸ್ ಶಾಸಕಾಂಗಪಕ್ಷಪ್ರಮುಖಪಾತ್ರವಹಿಸಿದ್ದು, ಅದರನಾಯಕರುಸಿದ್ದರಾಮಯ್ಯ. ಹೀಗಾಗಿ ಮುಖ್ಯಮಂತ್ರಿ ಸ್ಥಾನ ಖಾಲಿ ಇಲ್ಲ ಎಂದಿದ್ದಾರೆ.

### ಬೆಂಗಳೂರಿಗೆ ಖರ್ಗೆ, ಇಂದು ಮತ್ತೆ ದಿಲ್ಲಿಗೆ

ಅಧಿಕಾರಹಂಚಿಕೆಕಲಹತೀವ್ರಗೊಳ್ಳುತ್ತಿದ್ದಂತೆಯೇದೆಹಲಿಯಲ್ಲಿದ್ದಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರು ಬುಧವಾರ ರಾತ್ರಿ ಬೆಂಗಳೂರಿಗೆ ಆಗಮಿಸಿದ್ದಾರೆ. ಸಿಎಂ-ಡಿಸಿಎಂ ಅವರನ್ನು ಕರೆಸಿ ಚರ್ಚಿಸಿದ್ದು, ದೆಹಲಿಯಲ್ಲೇ ಖರ್ಗೆಯನ್ನು ಭೇಟಿಯಾಗಿ ಸಿದ್ದರಾಮಯ್ಯ ಸಂಪುಟ ಪುನಾರಚನೆ ಸೂತ್ರ ಮುಂದಿಟ್ಟಿದ್ದರು. ಆದರೆ, ಖರ್ಗೆ ಮಾತ್ರ ರಾಹುಲ್ ಗಾಂಧಿ ಜೊತೆ ಚರ್ಚಿಸಿ ತಿಳಿಸುವುದಾಗಿ ಹೇಳಿದ್ದರು. ರಾಹುಲ್ ಅವರು ಆ ಕೆಲಸ ತಾವೇ ಮಾಡಿ ಅಂತ ಖರ್ಗೆ ಅವರಿಗೆ ಸೂಚಿಸಿರುವುದಾಗಿ ತಿಳಿದು ಬಂದಿದೆ.

## ಧರ್ಮದ ಆಧಾರದ ಮೇಲೆ ದೇಶ ವಿಭಜಿಸುವ ಕಾರ್ಯ ಸಲ್ಲದು: ಮಾವಳ್ಳಿ ಶಂಕರ



**ಮಲ್ಲಮ್ಮ ನುಡಿವಾರ್ತೆ,ಬೀದರ್:** ಧರ್ಮದಆಧಾರದಮೇಲೆದೇಶವನ್ನು ವಿಭಜನೆಮಾಡುವಕಾರ್ಯಸಲ್ಲದು ಎಂದು ದಲಿತ ಸಂಘರ್ಷ ಸಮಿತಿ (ಅಂಬೇಡ್ಕರ್ ವಾದ)ಯ ರಾಜ್ಯ ಪ್ರಧಾನಸಂಚಾಲಕಮಾವಳ್ಳಿಶಂಕರ ತಿಳಿಸಿದರು. ನಗರದಜಿಲ್ಲಾಪತ್ರಿಕಾ ಭವನದಲ್ಲಿಬುಧವಾರಕರೆದಸುದ್ದಿಗೋಷ್ಠಿ ಉದ್ದೇಶಿಸಿಮಾತನಾಡಿದಅವರು, ಇಂದುದೇಶದಲ್ಲಿಉದಾರಿಕರಣ, ಜಾಗತಿಕರಣದಿಂದ ಎಲ್ಲವೂ ಖಾಸಗೀಕರಣಗೊಳಿಸುವಹುನ್ನಾರ ನಡೆಯುತ್ತಿದೆ.

ದಲಿತರ, ಹಿಂದುಳಿದವರಮತ್ತು ಶೋಷಿತರಹಕ್ಕುಗಳನ್ನುಕಸಿಯುವ ವ್ಯವಸ್ಥಿತಷಡ್ಯಂತನಡೆಯುತ್ತಿದೆ. ಆರ್‌ಎಸ್‌ಎಸ್‌ಸಂಘಟನೆಮಾಡುವ ತಾರತಮ್ಯನೀತಿಗೆನಮ್ಮಬೆಂಬಲವಿಲ್ಲ. ಆರ್‌ಎಸ್‌ಎಸ್‌ಮುಖಂಡಮೋಹನ ಭಾಗವತ್ ಅವರು ವಿಷಕಾರಿ ಮಾತುಗಳನ್ನುಆಡುತ್ತಿರುತ್ತಾರೆ.ಆದರೆ ದಲಿತರ, ರೈತರಮತ್ತುಮಹಿಳೆಯರ ಮೇಲೆ ಆಗುವ ದೌರ್ಜನ್ಯದ ಬಗ್ಗೆ ಮಾತನಾಡುವುದಿಲ್ಲ. ಇದು ಹೀಗೆ ಮುಂದುವರೆದರೆ

2ನೇ ಪುಟನೋಡಿ

## ಅಪ್ರಾಪ್ತೆ ಮೇಲೆ ಅತ್ಯಾಚಾರ ಆರೋಪಿಗೆ 20 ವರ್ಷ ಕಠಿಣ ಶಿಕ್ಷೆ



**ಮಲ್ಲಮ್ಮ ನುಡಿ ವಾರ್ತೆ ,ಕಲಬುರಗಿ:** ಅಪ್ರಾಪ್ತವಯಸ್ಸಿನ ಬಾಲಕಿಯಮೇಲೆಅತ್ಯಾಚಾರವೆಸಗಿದ ಆರೋಪಿಗೆಇಲ್ಲಿನಜಿಲ್ಲಾಮತ್ತುಸತ್ರ ವಿಶೇಷಪೋಕ್ಸೋ ನ್ಯಾಯಾಲಯವು 20 ವರ್ಷಗಳ ಕಠಿಣ ಶಿಕ್ಷೆ ಮತ್ತು 1.75 ಲಕ್ಷದಂಡಹಾಗೂಎಸಿ/ಎಟಿ ಕಾಯ್ದೆಅಡಿಯಲ್ಲಿ1 ವರ್ಷಸಾಧಾ ಶಿಕ್ಷೆವಿಧಿಸಿದೆ.ಚಿತ್ತಾಪುರದಆಶ್ರಯ ಕಾಲೋನಿಯ ಮಹಮ್ಮದ್ ಗೌಸ್ ತಂದೆಮಹಮ್ಮದ್‌ಯೂಸುಫ್‌ಗೌಂಡಿ ಶಿಕ್ಷೆಗೆಗುರಿಯಾದಆರೋಪಿ. ಈತ 2024ರಲ್ಲಿ ಅಪ್ರಾಪ್ತ ವಯಸ್ಸಿನ ಬಾಲಕಿಯಮೇಲೆಅತ್ಯಾಚಾರವೆಸಗಿದ ಬಗ್ಗೆ ಚಿತ್ತಾಪುರ ಪೊಲೀಸ್ ಠಾಣೆಯಲ್ಲಿ ಪೋಕ್ಸೋ ಕಾಯ್ದೆ ಅಡಿಯಲ್ಲಿಪ್ರಕರಣದಾಖಲಾಗಿತ್ತು.

ತನಿಖಾಧಿಕಾರಿಶಂಕರಗೌಡಪಾಟೀಲ ಅವರು ಪ್ರಕರಣದ ತನಿಖೆ ನಡೆಸಿ ನ್ಯಾಯಾಲಯಕ್ಕೆದೋಷಾರೋಪಣೆ ಪಟ್ಟಿ ಸಲ್ಲಿಸಿದ್ದರು. ಪ್ರಕರಣದ ವಿಚಾರಣೆನಡೆಸಿದಜಿಲ್ಲಾಮತ್ತುಸತ್ರ ವಿಶೇಷಪೋಕ್ಸೋ ನ್ಯಾಯಾಲದ ನ್ಯಾಯಾಧೀಶಮಹಮ್ಮದಮುಜೀರ್ ಉಲ್ಲಾಸಿ.ಜಿ.ಅವರು ಆರೋಪಿಗೆ 20 ವರ್ಷಗಳ ಕಠಿಣ ಶಿಕ್ಷೆ ಮತ್ತು 1.75 ಲಕ್ಷ ದಂಡ ಹಾಗೂ ಎಸಿ/ಎಟಿ ಕಾಯ್ದೆ ಅಡಿಯಲ್ಲಿ 1 ವರ್ಷ ಸಾಧಾ ಶಿಕ್ಷೆ ವಿಧಿಸಿದ್ದಾರೆ.

## ಸಂವಿಧಾನ ಮೇಲಿನ ದಾಳಿಗೆ ಅವಕಾಶ ನೀಡಲ್ಲ

**ಮಲ್ಲಮ್ಮ ನುಡಿ ವಾರ್ತೆ ನವದೆಹಲಿ :**

ಭಾರತದ ಸಂವಿಧಾನ ಬಡವರ ಮತ್ತು ನಿರ್ಗತಿಕರ ರಕ್ಷಣಾಕವಚವಾಗಿದೆ. ಹೀಗಾಗಿಇದರಮೇಲೆಯಾವುದೇ ದಾಳಿಗೆ ಅವಕಾಶ ನೀಡುವುದಿಲ್ಲ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಹೇಳಿದ್ದಾರೆ. ಇದೇ ವೇಳೆ ಯಾವುದೇದಾಳಿಯವಿರುದ್ಧಎದ್ದುನಿಲ್ಲುವಮೊದಲಿಗ ನಾನೇ ಆಗಿರುತ್ತೇನೆ ಎಂದು ಹೇಳಿದ್ದಾರೆ.

ಸಂವಿಧಾನದಿನದಂದು(ನ.26)ಸಾಮಾಜಿಕಮಾಧ್ಯಮ ಎಕ್ಸ್ ನಲ್ಲಿಪೋಸ್ಟ್‌ಮಾಡಿರುವ ಅವರು, 'ಭಾರತದ ಸಂವಿಧಾನ ಕೇವಲ ಒಂದು ಪುಸ್ತಕವಲ್ಲ. ಇದು ದೇಶದ ಪ್ರತಿಯೊಬ್ಬನಾಗರಿಕರಿಗೂನೀಡಿದಪವಿತ್ರವಾಗ್ದಾನವಾಗಿದೆ. ಯಾವುದೇಧರ್ಮಅಥವಾಜಾತಿಗೆಸೇರಿದವರಾಗಿರಲಿ, ಯಾವುದೇಪ್ರದೇಶದಿಂದಬಂದವರಾಗಿರಲಿ, ಯಾವುದೇ ಭಾಷೆಯನ್ನುಮಾತನಾಡುವವರಾಗಿರಲಿ, ಬಡವರಾಗಿರಲಿ ಅಥವಾ ಶ್ರೀಮಂತರಾಗಿರಲಿ, ಎಲ್ಲರಿಗೂ ಸಮಾನತೆ, ಗೌರವ ಮತ್ತು ನ್ಯಾಯ ಸಿಗುತ್ತದೆ ಎಂಬ ಭರವಸೆ. ಅದನ್ನು ರಕ್ಷಿಸುವುದು ನಮ್ಮ ಕರ್ತವ್ಯ ಎಂದಿದ್ದಾರೆ.

ಸಂವಿಧಾನವುಬಡವರುಮತ್ತುಸಮಾಜದಅಂಚಿನಲ್ಲಿರುವ ಪ್ರತಿಯೊಬ್ಬ ನಾಗರಿಕನ ರಕ್ಷಣಾ ಗುರಾಣಿ. ಅಲ್ಲದೇ ಅದು ಆ ಜನರ ಶಕ್ತಿ ಮತ್ತು ಧ್ವನಿಯಾಗಿದೆ ಎಂದೂ ಪೋಸ್ಟ್‌ನಲ್ಲಿ ಉಲ್ಲೇಖಿಸಿದ್ದಾರೆ.

**ಜಾತ್ಯತೀತತೆ, ಸಮಾಜವಾದರಕ್ಷಣೆಅಗತ್ಯವಿದೆ: ಖರ್ಗೆ**

ಸಂವಿಧಾನದ ಮೂಲಭೂತ ತತ್ವಗಳಾದ ನ್ಯಾಯ, ಸಮಾನತೆ, ಸ್ವಾತಂತ್ರ್ಯ, ಸಹೋದರತ್ವ, ಜಾತ್ಯತೀತತೆ ಮತ್ತುಸಮಾಜವಾದವನ್ನುರಕ್ಷಿಸುವಅಗತ್ಯವಿದೆಎಂದು ಕಾಂಗ್ರೆಸ್ ಅಧ್ಯಕ್ಷಮಲ್ಲಿಕಾರ್ಜುನಖರ್ಗೆ ಹೇಳಿದ್ದಾರೆ. 'ಸಂವಿಧಾನವುವಕೀಲರಿಗೆಕೇವಲಒಂದುದಾಖಲೆಯಲ್ಲ, ಬದಲಾಗಿ ಅದು ಜೀವನ ವಿಧಾನ'


ಎಂಬ ಡಾ. ಬಿ.ಆರ್ ಅಂಬೇಡ್ಕರ್ ಅವರಹೇಳಿಕೆಯನ್ನು ಉಲ್ಲೇಖಿಸಿ

ಸಾಮಾಜಿಕಮಾಧ್ಯಮಎಕ್ಸ್ ನಲ್ಲಿಹಂಚಿಕೊಂಡಿರುವ ಅವರು, ದೇಶದ ಏಕತೆ ಮತ್ತು ಸಮಗ್ರತೆಗಾಗಿ, ಪ್ರೀತಿ, ಸಹೋದರತ್ವಮತ್ತುಸಾಮರಸ್ಯಕ್ಕಾಗಿಪ್ರಜಾಪ್ರಭುತ್ವಮತ್ತು ಸಂವಿಧಾನದಮೌಲ್ಯಗಳನ್ನುಕಾಪಾಡಿಕೊಳ್ಳಲುನಾವು ಮತ್ತೊಮ್ಮೆ ಪ್ರತಿಜ್ಞೆಮಾಡೋಣಎಂದುಹೇಳಿದ್ದಾರೆ.

2ನೇ ಪುಟನೋಡಿ

## ಬಲಿಷ್ಠ ಸಂವಿಧಾನದ ಅಡಿಯಲ್ಲಿ ವಿಕಸಿತ ಭಾರತ ನಿಶ್ಚಿತ

**ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:**



ವಿಶ್ವದ ಅತ್ಯಂತ ದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರ ಭಾರತ ಸ್ವಾತಂತ್ರ ದೇಶವಾಗಿ ಎಪತ್ತೇಳು ವರ್ಷ ಕಳೆದರೂ ಈ ದೇಶದ ಏಕತೆ, ಅಖಂಡತೆಮತ್ತುಸಾರ್ವಭೌಮತ್ವ ಇನ್ನೂ ಗಟ್ಟಿಯಾಗಿ ಉಳಿಯಲು ನಮ್ಮ ದೇಶ ಒಪ್ಪಿಕೊಂಡು, ಅಳವಡಿಸಿಕೊಂಡು, ಪಾಲಿಸಿಕೊಂಡುಬರುತ್ತಿರುವಸಂವಿಧಾನ ಕಾರಣ. ನಮ್ಮ ಸಂವಿಧಾನಜಗತ್ತಿನಅತ್ಯಂತ ಶ್ರೇಷ್ಠಮತ್ತುಸ್ಪಷ್ಟವಾಗಿಅನುಷ್ಠಾನಮಾಡಲುಅವಕಾಶ ಇರುವ ಸಂವಿಧಾನ 1949ರ ನವೆಂಬರ್ 26 ರಂದು ಭಾರತೀಯರಾದನಾವುಸಂವಿಧಾನವನ್ನುಅಳವಡಿಸಿಕೊಂಡ ದಿನ. ಈ ದಿನವನ್ನು, ಸಂವಿಧಾನ ದಿನಾಚರಣೆಯನ್ನಾಗಿ ಆಚರಿಸುತ್ತ ಬರಲಾಗುತ್ತಿದೆ.

ಸಂವಿಧಾನಶಿಲ್ಪಿಡಾ. ಬಾಬಾಸಾಹೇಬ್‌ಅಂಬೇಡ್ಕರ್ ಅವರುಬರೆದಿರುವಭಾರತದಸಂವಿಧಾನವಿಶ್ವದಅತ್ಯಂತ ಸುದೀರ್ಘಸಂವಿಧಾನವಾಗಿದ್ದುಸದಾಚಲನಶೀಲತೆಯನ್ನು ಹೊಂದಿದೆ. ತನ್ನ ಮೂಲಸ್ವರೂಪವನ್ನು ಕಳೆದುಕೊಳ್ಳದೇ ಕಾಲಕ್ಕೆ ತಕ್ಕಂತೆ ತಿದ್ದುಪಡಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ವಿಶ್ವದ ಅನೇಕ ರಾಷ್ಟ್ರಗಳು ತಮ್ಮ ಸಂವಿಧಾನವನ್ನು ಬದಲಾಯಿಸಿದರೂ, ಭಾರತದ ಸಂವಿಧಾನಮಾತ್ರ ಎಂದೂ ಬದಲಾಗದಂತೆ ಭಾರತದ ಪ್ರಜೆಗಳಾದ ನೋಡಿಕೊಳ್ಳುತ್ತ ಬಂದಿದ್ದೇವೆ.

ಸ್ವಾತಂತ್ರ್ಯ ಭಾರತದಇತಿಹಾಸದಲ್ಲಿನಮ್ಮ ಸಂವಿಧಾನವನ್ನು ತಿರುಚುವ ಪ್ರಯತ್ನಗಳು ನಿರಂತರನಡೆದಿದ್ದು, ಅಂತಹಪ್ರಯತ್ನಗಳಿಗೆ ದೇಶದಜನತೆತಕ್ಕಪಾಠಕಲಿಸಿಶಿಕ್ಷೆಕೊಟ್ಟಿರುವ ಉದಾಹರಣೆನಮ್ಮ ಇತಿಹಾಸದಲ್ಲಿದಾಖಲಾಗಿದೆ. 1977 ರಲ್ಲಿ ಅಂದಿನ ಪ್ರಧಾನಿ ಇಂದಿರಾ ಗಾಂಧಿಯವರುತಮ್ಮ ಅಧಿಕಾರಉಳಿಸಿಕೊಳ್ಳಲು ದೇಶದಲ್ಲಿ ತುರ್ತು ಪರಿಸ್ಥಿತಿಯನ್ನು ಹೇರಿ ವಾಕ್ ಸ್ವಾತಂತ್ರ್ಯ ವ್ಯಕ್ತಿ ಸ್ವಾತಂತ್ರ್ಯ, ಪತಿಕಾ ಸ್ವಾತಂತ್ರ್ಯ ಎಲ್ಲವನ್ನೂ ಕಸಿದುಕೊಂಡು ಸಂವಿಧಾನವನ್ನೇ ತಿರುಚಿ ಸರ್ವಾಧಿಕಾರಿಯಾಗಿ ಆಡಳಿತ ನಡೆಸಿದರು. ಆದರೆ, ಬಾಬಾಸಾಹೇಬ್ ಅಂಬೇಡ್ಕರ್ ಅವರು ಬರೆದಿರುವ ಸಂವಿಧಾನದಮೇಲೆನಂಬಿಕೆಇಟ್ಟಿರುವಈದೇಶದಜನತೆ ಸಾರ್ವತ್ರಿಕಚುನಾವಣೆಯಲ್ಲಿಇಂದಿರಾಗಾಂಧಿಯನ್ನು ಸೋಲಿಸಿ ನಮ್ಮ ಸಂವಿಧಾನವನ್ನು ರಕ್ಷಿಸುವ ಕೆಲಸ ಮಾಡಿದ್ದಾರೆ. ಅದೇರೀತಿಕೇಶವಾನಂದಭಾರತಿವರ್ಸಸ್ ಕೇರಳಸರ್ಕಾರದನಡುವಿನಪ್ರಕರಣದಸಂದರ್ಭದಲ್ಲಿ ಸುಪ್ರೀಂಕೋರ್ಟ್‌ಅಂದುಕೇಂದ್ರದಲ್ಲಿಅಧಿಕಾರದಲ್ಲಿದ್ದ ಕಾಂಗ್ರೆಸ್‌ಸರ್ಕಾರಕ್ಕೆಸಂಸತ್ತುಸಂವಿಧಾನವನ್ನುತಿದ್ದುಪಡಿ ಮಾಡಲು ಅಧಿಕಾರ ಹೊಂದಿದ್ದರೂ, ಸಂವಿಧಾನದ

2ನೇ ಪುಟನೋಡಿ

## ಸಮ ಸಮಾಜ ನಿರ್ಮಾಣ ನಮ್ಮ ಸಂವಿಧಾನ ಅಂಬೇಡ್ಕರ್ ಅವರ ಆಶಯವಾಗಿತ್ತು : ಸಿಎಂ



**ಮಲ್ಲಮ್ಮನುಡಿವಾರ್ತೆ,ಬೆಂಗಳೂರು:**

ಸಮಸಮಾಜನಿರ್ಮಾಣ, ಅಸಮಾನತೆ ನಿವಾರಣೆ ಅಂಬೇಡ್ಕರ್ ರಚಿಸಿದ ಸಂವಿಧಾನದಆಶಯವಾಗಿತ್ತುಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು. ಸಮಾಜ ಕಲ್ಯಾಣಇಲಾಖೆವತಿಯಿಂದವಸಂತ ನಗರದಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿಂದುಹಮ್ಮಿಕೊಂಡಿದ್ದ ಸಂವಿಧಾನ ದಿನಾಚರಣೆ 2025'ರ ಕಾರ್ಯಕ್ರಮವನ್ನುಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ಹಾಗೂ ಡಾ.ಬಾಬುಜಗಜೀವನರಾಂಅವರ ಭಾವಚಿತ್ರಗಳಿಗೆಪುಷ್ಪನಮನಸಲ್ಲಿಸಿ, ನಗಾರಿ ಬಾರಿಸುವ ಮೂಲಕ ಉದ್ಘಾಟನೆನೆರವೇರಿಸಿಮಾತನಾಡಿದ ಮುಖ್ಯಮಂತ್ರಿಗಳು, ಎನ್ನುವುದೇ ನಮ್ಮ ಸಂವಿಧಾನದಮೂಲಮಂತ್ರ ಎಂದು ಹೇಳಿದರು. ಅಂಬೇಡ್ಕರ್ ಅವರ ಸಂವಿಧಾನಕ್ಕೆ ಮೊದಲು ದೇಶದಲ್ಲಿ ಅಲಿಖಿತ

2ನೇ ಪುಟನೋಡಿ

## ಶಿವಮೂರ್ತಿ ಶರಣರಿಗೆ ಬಿಗ್ ರಿಲೀಫ್



**ಮಲ್ಲಮ್ಮ ನುಡಿ ವಾರ್ತೆ ಚಿತ್ರದುರ್ಗ:**

ಅಪ್ರಾಪ್ತ ಬಾಲಕಿಯರ ಮೇಲೆ ಲೈಂಗಿಕ ದೌರ್ಜನ್ಯಎಸಗಿದಆರೋಪ ಎದುರಿಸುತ್ತಿದ್ದ ಚಿತ್ರದುರ್ಗದ ಮುರುಘಾ ಮಠದ ಡಾ. ಶಿವಮೂರ್ತಿ ಶರಣರಿಗೆ ಚಿತ್ರದುರ್ಗ ಜಿಲ್ಲಾ ನ್ಯಾಯಾಲಯ ಬಿಗ್ ರಿಲೀಫ್ ನೀಡಿದೆ. ಪೋಕ್ಸೊ ಪ್ರಕರಣದಲ್ಲಿ ಶ್ರೀಗಳು ಹಾಗೂ ಇತರ ಆರೋಪಿಗಳನ್ನು ಖುಲಾಸೆಗೊಳಿಸಿ ತೀರ್ಪು ನೀಡಿದೆ.

2022 ಆಗಸ್ಟ್ 31 ರಂದು ಇಬ್ಬರು ಬಾಲಕಿಯರ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪದ ಮೇಲೆ ಮುರುಘಾ ಶ್ರೀಗಳ ವಿರುದ್ಧ ಪ್ರಕರಣ ದಾಖಲಾಗಿತ್ತು. ಸೆಪ್ಟೆಂಬರ್ 1ರಂದು ಶ್ರೀಗಳ ಬಂಧನವಾಗಿತ್ತು. 14 ತಿಂಗಳ ಕಾಲ ಜೈಲಿನಲ್ಲಿದ್ದ, ಶ್ರೀಗಳು 2023 ನ.16ರಂದು ಷರತ್ತು ಬದ್ಧ ಜಾಮೀನಿನ ಮೇಲೆ ಹೊರಗೆ ಬಂದಿದ್ದರು.

ಪ್ರಕರಣದ ವಿಚಾರಣೆ ನಡೆಸಿದ ಚಿತ್ರದುರ್ಗದ 2ನೇ ಹೆಚ್ಚುವರಿ ಸೆಷನ್ಸ್ ಕೋರ್ಟ್, ಮೊದಲ ಪೋಕ್ಸೋ ಪ್ರಕರಣದಲ್ಲಿ ಮುರುಘಾ ಶರಣರು ನಿರ್ದೋಷಿ ಎಂದು ತೀರ್ಪು ಪ್ರಕಟಿಸಿದೆ. ಪ್ರಕರಣದ ಎರಡನೇ ಆರೋಪಿ ರಶ್ಮಿ ಹಾಗೂ ನಾಲ್ಕನೇ ಆರೋಪಿ ಪರಮಶಿವಯ್ಯ ಅವರನ್ನು ಕೂಡ ನಿರ್ದೋಷಿ

2ನೇ ಪುಟನೋಡಿ

**ಭಾರತಕ್ಕೆ 408 ರನ್‌ಗಳ ಹೀನಾಯ ಸೋಲು: ಹರಿಣಗಳ ಕ್ಲೀನ್ ಸ್ವೀಪ್ ಸಾಧನೆ**

# ಒಂದನೇ ಪುಟದಿಂದ

## ಕಾರ್ಯ ಸಲ್ಲದು: ಮಾವಳ್ಳಿ ಶಂಕರ

ಸಂವಿಧಾನ ಅಪಾಯಕ್ಕೆ ಸಿಲುಕುವ ಸಂಭವವಿದೆ ಎಂದರು.

ಸಂವಿಧಾನದ ನಿಜಾಂಗಳು ಜನತೆಗೆ ತಲುಪುತ್ತಿಲ್ಲ. ಪ್ರಧಾನಮಂತ್ರಿಗಳ ಮಾತು ಕೇಳುತ್ತಿದ್ದರೆ ದೇಶ ಯಾವ ದಿಕ್ಕಿಗೆ ಸಾಗುತ್ತಿದೆ ಎಂಬ ಆತಂಕ ಕಾಡುತ್ತಿದೆ. ದಲಿತ ಸಂಘರ್ಷ ಸಮಿತಿಯು ಜನತೆಗೆ ಸತ್ಯ ತಿಳಿಸುವ ಕಾರ್ಯ ಮಾಡುತ್ತಿದೆ. ಆರ್‌ಎಸ್‌ಎಸ್ ಮತ್ತು ಡಿಎಸ್‌ಎಸ್ ಮಾಡುವ ಕಾರ್ಯಗಳ ಕುರಿತು ಚರ್ಚೆ ಆಗಬೇಕಾಗಿದೆ ಎಂದರಲ್ಲದೆ, ಬೀದರನಿಂದಲೇ ದಲಿತ ಸಂಘರ್ಷ ಸಮಿತಿಯ ಸದಸ್ಯತ್ವಕ್ಕೆ ಚಾಲನೆ ನೀಡುತ್ತಿದ್ದೇವೆ. ಜಾತಿ ಮತ ಪಂಥಗಳ ಭೇದವಿಲ್ಲದೆ ಸದಸ್ಯರಾಗಬಹುದು. 1 ಲಕ್ಷ ಸದಸ್ಯತ್ವದ ಗುರಿ ಹೊಂದಿದ್ದೇವೆ ಎಂದು ಶಂಕರ್ ತಿಳಿಸಿದರು.

ಯಾವುದೇ ಸರ್ಕಾರಗಳಿರಲಿ ಅಖಂಡ ರಾಷ್ಟ್ರದ ಪರಿಕಲ್ಪನೆ ಹೊಂದಬೇಕೆ ವಿನಃ ವಿಭಜಿಸುವ ಕಾರ್ಯಕ್ಕೆ ಮುಂದಾಗಬಾರದು ಎಂದು ಹೇಳಿದರು.

ದಲಿತ ಮಹಿಳಾ ಒಕ್ಕೂಟದ ಮುಖ್ಯಸ್ಥೆ ಇಂದಿರಾ ಕೃಷ್ಣಪ್ಪ ಮಾತನಾಡಿ, ಸಂವಿಧಾನಾತ್ಮಕವಾಗಿ ನೊಂದಾಯಿತ ಸಂಘಟನೆ ಅಲ್ಲದಿದ್ದರೂ ಆರ್‌ಎಸ್‌ಎಸ್ ಸಂಘಟನೆ ಜನರಿಗೆ ಭಾವನಾತ್ಮಕವಾಗಿ ಉದ್ರೇಕಕ್ಕೆ ತಳ್ಳುತ್ತ ದೇಶದ ಮುಖ್ಯ ಅಂಶಗಳ ಕಡೆಗೆ ವಿಮುಖರನ್ನಾಗಿ ಮಾಡುತ್ತಿದೆ ಎಂದು ತಿಳಿಸಿದರು. ಈ ನಿಟ್ಟಿನಲ್ಲಿ ದಲಿತ ಸಂಘರ್ಷ ಸಮಿತಿಯು ನ್ಯಾಯ ಸಮಾನತೆ, ಸಮಸಮಾಜದ ಪರಿಕಲ್ಪನೆ ಇಟ್ಟುಕೊಂಡು ದುಡಿಯುತ್ತಿದೆ ಎಂದರು.

ಪತ್ರಕರ್ತ ಎನ್.ನಾಗರಾಜ್, ಡಿ.ಎಸ್.ಎಸ್ ಅಂಬೇಡ್ಕರ್ ವಾದ ಜಿಲ್ಲಾ ಸಂಚಾಲಕ ರಮೇಶ ಮಂದಕನಳ್ಳಿ, ರಾಜಕುಮಾರ ಬನ್ನೇರ್, ನಾಗಣ್ಣ ಬಡಿಗೇರ್, ರಾಮಣ್ಣ ಕಲದೇವನಹಳ್ಳಿ, ರಂಜಿತಾ ಜೈನೂರ್, ಜಗದೇವಿ ಭಂಡಾರಿ, ದೈವಶೀಲಾ ಸೇರಿದಂತೆ ಪತ್ರಿಕಾಗೋಷ್ಠಿಯಲ್ಲಿದ್ದರು.

## ದಾಳಿಗೆ ಅವಕಾಶ ನೀಡಲ್ಲ

ಸಂವಿಧಾನ ಕರಡು ಸಮಿತಿಯ ಅಧ್ಯಕ್ಷರಾಗಿದ್ದ ಡಾ. ಅಂಬೇಡ್ಕರ್ ಅವರು 1949ರ ನವೆಂಬರ್ 26ರಂದು ಸಂವಿಧಾನವನ್ನು ಅಂಗೀಕರಿಸುವ ನಿರ್ಣಯವನ್ನು ಮಂಡಿಸಿದ್ದರು. ಸಂವಿಧಾನವನ್ನು ಸಭೆಯು ಅಂಗೀಕರಿಸಿದ ಇದೇ ದಿನವನ್ನು 'ಸಂವಿಧಾನ ದಿನ'ವನ್ನಾಗಿ ಆಚರಿಸಿಕೊಂಡು ಬರಲಾಗುತ್ತಿದೆ.

## ಅಡಿಯಲ್ಲಿ ವಿಕಸಿತ ಭಾರತ ನಿಶ್ಚಿತ

ಮೂಲ ರಚನೆ ಮತ್ತು ಅದರ ಮೂಲಭೂತ ಸ್ವರೂಪವನ್ನು ಬದಲಾಯಿಸುವಂತಿಲ್ಲ ಎಂದು ತೀರ್ಪು ನೀಡಿ ಕೇಂದ್ರ ಸರ್ಕಾರವನ್ನು ತರಾಟೆಗೆತೆಗೆದುಕೊಂಡಿತ್ತು. ಈ ತೀರ್ಪು ಸಂವಿಧಾನದ ಮೂಲಭೂತ ಸ್ವರೂಪವನ್ನು ಸಂಸತ್ತಿನ ತಿದ್ದುಪಡಿಯಿಂದ ರಕ್ಷಿಸಿತು. ಅಲ್ಲದೇ ಸಂವಿಧಾನದ ಪಾವಿತ್ರತೆಯನ್ನು ಕಾಯ್ದುಕೊಳ್ಳುವಲ್ಲಿ ಈ ತೀರ್ಪು ಮಹತ್ವದ ಪಾತ್ರ ವಹಿಸಿತು. ಇತಿಹಾಸದುದ್ದಕ್ಕೂ ಭಾರತದ ಸಂವಿಧಾನಕ್ಕೆ ಅಪಚಾರ ಎಸಗುತ್ತ, ಸಂವಿಧಾನವನ್ನು ತಿರುಚಲು ನಿರಂತರ ಪ್ರಯತ್ನ ನಡೆಸುತ್ತ ಬಂದಿರುವ ಕಾಂಗ್ರೆಸ್ ಪಕ್ಷದ ಮುಖಂಡರು, ದೇಶದಲ್ಲಿ ಸಂವಿಧಾನ ಅಪಾಯದಲ್ಲಿದೆ ಎನ್ನುವ ಅಪಪ್ರಚಾರವನ್ನು ನಿರಂತರ ಮಾಡುತ್ತ ಸಂವಿಧಾನದ ಮೇಲೆ ತಾವು ಮಾಡಿರುವ ದಾಳಿಯನ್ನು ಜನರಿಂದ ದೂರ ಮಾಡುವ ಪ್ರಯತ್ನ ನಡೆಸಿದ್ದಾರೆ. ಲೋಕಸಭೆಯ ಪ್ರತಿಪಕ್ಷದ ನಾಯಕರಾಗಿರುವ ರಾಹುಲ್ ಗಾಂಧಿಯವರು ಹೋದಲ್ಲೆಲ್ಲಾ ಸಂವಿಧಾನ ಪ್ರತಿಯನ್ನು ಕೈಯಲ್ಲಿ ಹಿಡಿದುಕೊಂಡು ತಾವೇ ಸಂವಿಧಾನ ರಕ್ಷಕರು ಎನ್ನುವಂತೆ ಬಿಂಬಿಸಿಕೊಳ್ಳುತ್ತ ದೇಶದ ಪ್ರಜಾಪ್ರಭುತ್ವ ವ್ಯವಸ್ಥೆ ಹಾಗೂ ಅದರ ಮೌಲ್ಯಗಳ ಬಗ್ಗೆ ವಿದೇಶಗಳಲ್ಲಿ ಹೋಗಿ ಅಪಪ್ರಚಾರ ಮಾಡಿ ದೇಶದ ಮರ್ಯಾದೆ ಕಳೆಯುವ ಕೆಲಸವನ್ನು ನಿರಂತರ ಮಾಡುತ್ತ ಬಂದಿದ್ದಾರೆ. ಭಾರತದ ಸಂವಿಧಾನಕ್ಕೆ ತನ್ನದೇ ಆದ ಮಹತ್ವ ಮತ್ತು ಗಟ್ಟಿತನ ಇರುವುದರಿಂದ ಅದರ ರಕ್ಷಣೆಯ ನಾಟಕವಾಡುತ್ತ ಸಂವಿಧಾನವನ್ನೇ ತಮ್ಮ ಅನುಕೂಲಕ್ಕೆ ಬಳಸಿಕೊಳ್ಳುವ ಶಕ್ತಿಗಳ ಬಗ್ಗೆ ಈ ದೇಶದ ಪ್ರಜೆಗಳು ನಿರಂತರ ಜಾಗೃತರಾಗಿದ್ದು, ಸಂವಿಧಾನ ವಿರೋಧಿ ನಡೆಗಳನ್ನು ತಿರಸ್ಕರಿಸುತ್ತಲೇ ಪ್ರಜಾಪ್ರಭುತ್ವವನ್ನು ಬಲಗೊಳಿಸುತ್ತ ನಡೆದಿದ್ದಾರೆ. ನಮ್ಮ ದೇಶದ ಹೆಮ್ಮೆಯ ಪ್ರಧಾನಿ ನರೇಂದ್ರ ಮೋದಿಯವರೂ ಕೂಡ ಭಾರತದ ಸಂವಿಧಾನವೇ ನಮ್ಮ ಧರ್ಮ ಎಂದು ಒಪ್ಪಿಕೊಂಡು ಈ ದೇಶದ ಸಂವಿಧಾನದ ಅಡಿಯಲ್ಲಿ ವಿಶ್ವವೇ ಮೆಚ್ಚುವಂತಹ ನಾಯಕತ್ವವನ್ನು ನೀಡಿ, ಭಾರತವನ್ನು ವಿಶ್ವದ ಬಲಿಷ್ಠ ದೇಶವನ್ನಾಗಿ ಮಾಡಲು ವಿಕಸಿತ ಭಾರತದ ಸಂಕಲ್ಪ ಮಾಡಿದ್ದಾರೆ. ಭಾರತದ ಬಲಿಷ್ಠ ಸಂವಿಧಾನದ ಅಡಿಯಲ್ಲಿ ಪಧಾನ ಮಂತ್ರಿ ನರೇಂದ್ರ ಮೋದಿಯವರ ಕನಸಿನಂತೆ 2047 ಕ್ಕೆ ವಿಕಸಿತ ಭಾರತ ಆಗುವುದು ನಿಶ್ಚಿತ.

## ಅಂಬೇಡ್ಕರ್ ಅವರ ಆಶಯವಾಗಿತ್ತು : ಸಿಎಂ

ಮನುಸ್ಮೃತಿ ಇತ್ತು. ಮನುಸ್ಮೃತಿಯಲ್ಲಿದ್ದ ಮನುಷ್ಯ ವಿರೋಧಿ, ಸಮಾನತೆ ವಿರೋಧಿ ನಿಯಮಗಳಿಗೆ ಅಂಬೇಡ್ಕರ್ ಅವರ ಸಂವಿಧಾನದಲ್ಲಿ ಅವಕಾಶ ಇಲ್ಲದಂತಾಯಿತು. ಅದಕ್ಕೇ ಮನುವಾದಿಗಳು ನಮ್ಮ ಸಂವಿಧಾನವನ್ನು ವಿರೋಧಿಸುತ್ತಿದ್ದಾರೆ, ದೇಶದಲ್ಲಿರುವ ಸಂವಿಧಾನ ವಿರೋಧಿ ಮನುವಾದಿಗಳನ್ನು ಗುರುತಿಸುವ ಅವಶ್ಯಕತೆ ಇದೆ ಎಂದರು. ಈ ದೇಶದ ಜನತೆಗೆ ಹೊಂದುವಂತಹ ಸಂವಿಧಾನ ಬೇಕು ಎನ್ನುವ ಬಗ್ಗೆ ಒಂದು ವರ್ಷ ಕಾಲ ಸಂವಿಧಾನ ಸಭೆಯಲ್ಲಿ ಸಮಗ್ರ ಚರ್ಚೆ ನಡೆದ ಬಳಿಕ ಅಂಗೀಕರಿಸಲಾಗಿದೆ. ಫೆಡರಲ್, ಯೂನಿಟರಿ, ರಿಟನ್, ಅನ್ ರಿಟರ್ನ್ ಸಂವಿಧಾನಗಳು ವಿಶ್ವದಲ್ಲಿವೆ. ನಮ್ಮದು ರಿಟನ್ (ಲಿಖಿತ) ಸಂವಿಧಾನ. ನಮ್ಮ ದೇಶದಲ್ಲಿರುವಷ್ಟು ಜಾತಿ, ಧರ್ಮಗಳು ಬೇರೆ ಯಾವ ದೇಶದಲ್ಲೂ ಇಲ್ಲ. ಹೀಗಾಗಿ ಈ ನೆಲಕ್ಕೆ ಒಪ್ಪಿಗೆಯಾಗುವ ಸಂವಿಧಾನವನ್ನು ಅಂಬೇಡ್ಕರ್ ನೀಡಿದ್ದಾರೆ ಎಂದರು. ಮನುವಾದಿಗಳು ಸಂವಿಧಾನ ಅಂಬೇಡ್ಕರ್ ಅವರಿಂದ ಆಗಿಲ್ಲ ಎಂದು ವಾದಿಸುತ್ತಾರೆ. ಆದರೆ ಅಂಬೇಡ್ಕರ್ ಅವರೇ ಸಂವಿಧಾನ ಶಿಲ್ಪಿ ಎನ್ನುವುದನ್ನು ಮರೆಯಬಾರದು. ಈ ದೇಶದ ಜಾತಿ ವ್ಯವಸ್ಥೆ ಮತ್ತು ಅಪಾಯಗಳು ಅಂಬೇಡ್ಕರ್ ಅವರಿಗೆ ಅರ್ಥ ಆಗಿತ್ತು. ಅದಕ್ಕೇ ನಮ್ಮ ಸಂವಿಧಾನದಲ್ಲಿ ಮೀಸಲಾತಿಯನ್ನು ಸೇರಿಸಿದರು. ಜಾತಿ ವ್ಯವಸ್ಥೆ ಇರುವವರೆಗೂ ಮೀಸಲಾತಿ ಇರಬೇಕು ಎಂದು ಹೇಳಿದ್ದಾರೆ ಎಂದರು. ಸ್ವಾತಂತ್ರ್ಯ, ಸಮಾನತೆ, ಭಾತೃತ್ವ ಭಾವನೆ ಸಂವಿಧಾನದ ಆಶಯ. ಆದರೆ ಸ್ವಾತಂತ್ರ್ಯ ಬಂದು ಇಷ್ಟು ವರ್ಷ ಆದರೂ ಸಂವಿಧಾನದ ಆಶಯ ಈಡೇರಿಲ್ಲ. ಬಸವಣ್ಣನವರಾದಿಯಾಗಿ ಎಲ್ಲಾ ಮಹಾತ್ಮರು ಜಾತಿ ವ್ಯವಸ್ಥೆ ವಿರುದ್ಧ ಹೋರಾಡಿದರು ಪಟ್ಟಭದ್ರಾ, ಹಿತಾಶಕ್ತಿಗಳು ಜಾತಿ ವ್ಯವಸ್ಥೆ ಹೋಗಲು ಬಿಡುತ್ತಿಲ್ಲ. ಬಡವರಿಗೆ, ತಳಸಮುದಾಯದವರಿಗೆ, ಶೂದ್ರ ವರ್ಗದವರಿಗೆ ಆರ್ಥಿಕ ಶಕ್ತಿ ಬಂದಾಗ ಮಾತ್ರ ಜಾತಿ ವ್ಯವಸ್ಥೆ ಹೋಗುತ್ತದೆ ಎಂದರು.

ಸಂವಿಧಾನ ಅಂಗೀಕಾರಕ್ಕೆ 285 ಮಂದಿ ಸದಸ್ಯರಲ್ಲಿ 284 ಮಂದಿ ಪೂರ್ತಿ ಸಹಿ ಹಾಕಿದರು. ಒಬ್ಬರು ಮಾತ್ರ ಹಾಕಲಿಲ್ಲ. ಹೀಗಾಗಿ ಬಹುತೇಕ ಎಲ್ಲರಿಗೂ ಒಪ್ಪಿಗೆ ಆಗುವಂತಹ ಸಂವಿಧಾನವನ್ನು ಅಂಬೇಡ್ಕರ್ ರಚಿಸಿದರು. ಸಂವಿಧಾನ ರಚನೆಯಾದಾಗ 390 ವಿಧಿಗಳಿದ್ದು, 8 ಷೆಡ್ಯೂಲ್ ಗಳು ಇದ್ದವು. ಈಗ 448 ವಿಧಿಗಳು, 12 ಷೆಡ್ಯೂಗಳು ಇವೆ. ಸಂವಿಧಾನ ಜಾರಿಯಾದ ಮೇಲೆ ಇಲ್ಲಿಯವರೆಗೆ 106 ಬಾರಿ ತಿದ್ದುಪಡಿಯಾಗಿದೆ ಎಂದರು. ಸಂವಿಧಾನದ ಸಮಾನತೆಯ ಆಶಯವನ್ನು ಈಡೇರಿಸುವ ಸಲುವಾಗಿಯೇ ನಾನು ಮೊದಲ ಬಾರಿ ಮುಖ್ಯಮಂತ್ರಿಯಾಗಿ ಹಲವು ಭಾಗ್ಯಗಳನ್ನು ಜಾರಿ ಮಾಡಿದೆ. ತುತ್ತು ಅನ್ನಕ್ಕಾಗಿ ಯಾರೂ ಯಾರ ಮನೆ ಮುಂದೆಯೂ ನಿಲ್ಲಬಾರದು ಎನ್ನುವ ಆಶಯದಿಂದ ಅನ್ನಭಾಗ್ಯ ತಂದೆ, ಯಾರ ಮನೆ ಮಕ್ಕಳೂ ಬರಿಗಾಲಿನಲ್ಲಿ ಶಾಲೆಗೆ ಹೋಗಬಾರದು ಎನ್ನುವ ಕಾರಣದಿಂದ ಶೂ ಭಾಗ್ಯ ತಂದೆ. ಎಲ್ಲಾ ಭಾಗ್ಯಗಳ ಹಿಂದೆ ಹಾಗೂ ಈಗ ಜಾರಿ ಮಾಡಿರುವ ಐದೂ ಗ್ಯಾರಂಟಿಗಳ ಹಿಂದೆ ಅಸಮಾನತೆ ನಿವಾರಿಸುವ ಮತ್ತು ಸರ್ವರಿಗೂ ಆರ್ಥಿಕ ಶಕ್ತಿ ಬರಲಿ ಎನ್ನುವ ಆಶಯ ಇದೆ ಎಂದರು.. ಇಂದು 76ನೇ ಸಂವಿಧಾನ ದಿನಾಚರಣೆಯನ್ನು ಆಚರಿಸುತ್ತಿದ್ದೇವೆ. ಶೈಕ್ಷಣಿಕವಾಗಿ, ವೈಜ್ಞಾನಿಕವಾಗಿ ಮತ್ತು ವಿವಿಧ ರಂಗಗಳಲ್ಲಿ ಅನೇಕ ಅಭಿವೃದ್ಧಿಗಳನ್ನು ಕಂಡಿದ್ದೇವೆ. ಆದರೂ ಸಂವಿಧಾನ ಬಯಸಿದಂತಹ ಪರಿಪೂರ್ಣ ಅಭಿವೃದ್ಧಿಯನ್ನು ಮಾಡಲು ಇನ್ನೂ ಸಾಧ್ಯವಾಗಿಲ್ಲ ಎಂದರು. 1949 ಜನವರಿ 25ರಂದು ಈ ಸಂವಿಧಾನವನ್ನು ಸಮರ್ಪಿಸುವ ಒಂದು ದಿನ ಮುಂಚೆ ಸಂವಿಧಾನ ಉದ್ದೇಶಿಸಿ ಮಾಡಿದ ಭಾಷಣ ಐತಿಹಾಸಿಕವಾದುದು. ಆ ಭಾಷಣದ ತಿರುಳು ಭಾರತದ ಪ್ರತಿಯೊಬ್ಬ ಪ್ರಜೆಗೂ ಅರ್ಥವಾಗಬೇಕು. ನಮ್ಮ ದೇಶದ ಭೌಗೋಳಿಕ ಮತ್ತು ಸಾಂಸ್ಕೃತಿಕ ಜನ ಜೀವನ ವೈವಿಧ್ಯಮಯ ಜೀವನದಿಂದ ಕೂಡಿದೆ. ಇದರ ಮಹತ್ವವೆ ಬಹುತ್ವದ ಭಾರತ. ಬಹುಸಂಸ್ಕೃತಿ, ಭಾಷೆಯನ್ನು, ವಿವಿಧವಾದ ಸಾಂಸ್ಕೃತಿಕ ಚಟವಟಿಕೆ ಹೊಂದಿರುವ ಭಾರತ ದೇಶ. ಇಂತಹ ದೇಶದಲ್ಲಿ ನಮ್ಮ ಸಂವಿಧಾನವನ್ನು ಓದುವಾಗ ಮೊದಲನೆ ಪದವೇ ಭಾರತೀಯ ಪ್ರಜೆಗಳಾದ ನಾವು ಅದನ್ನು ಸಂಬೋಧನೆ ಮಾಡಿರುವುದು, ಭಾರತೀಯರಾದ ನಾವೆಲ್ಲರೂ ಒಂದೇ ಎಂಬ ಸಂದೇಶ ಹೊಂದಿದೆ ಎಂದರು. ಭಾರತ ದೇಶದ ಯಾವುದೇ ರಾಜ್ಯದಲ್ಲಿ ಶಾಲಾ-ಕಾಲೇಜುಗಳಲ್ಲಿ, ಸಭೆ-ಸಮಾರಂಭಗಳಲ್ಲಿ ಸಂವಿಧಾನ ಪೀಠಿಕೆ ಓದುವ ಹವ್ಯಾಸ ಇದುವರೆಗೆ ಇರಲಿಲ್ಲ. ಆದರೆ ಕರ್ನಾಟಕದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಬಂದ ಮೇಲೆ ಇಡೀ ಭಾರತ ದೇಶ ಕರ್ನಾಟಕದ ತೀರ್ಮಾನದ ಕಡೆಗೆ ತಿರುಗಿ ನೋಡುವಂತೆ ಮಾಡಿದೆ.

ಸಂವಿಧಾನ ಪೀಠಿಕೆಯನ್ನು ಎಲ್ಲಾ ಸಭೆ ಸಮಾರಂಭಗಳು, ಶಾಲಾ-ಕಾಲೇಜುಗಳು, ಮುಖ್ಯಮಂತ್ರಿಗಳ ಕಚೇರಿ, ಮುಖ್ಯ ಕಾರ್ಯದರ್ಶಿಗಳ ಕಚೇರಿ ಎಲ್ಲಾ ಕಡೆಗಳಲ್ಲಿ ಸಂವಿಧಾನದ ಪೀಠಿಕೆಯನ್ನು ನೋಡಬಹುದು ಹಾಗೂ ವಿಧಾನಪರಿಷತ್ ಮತ್ತು ವಿಧಾನಸಭೆಗಳ ಅಧಿವೇಶನದ ಮೊದಲ ದಿನ ಸಂವಿಧಾನದ ಪೀಠಿಕೆಯನ್ನು ಓದುವುದನ್ನು ನೀವು ನೋಡಬಹುದು. ಭಾರತದ ಯಾವುದೇ ರಾಜ್ಯ ಈ ರೀತಿಯ ಹವ್ಯಾಸ ಬೆಳೆಸಿಕೊಂಡಿಲ್ಲ. ಇದಕ್ಕೆ ಮೂಲ ಪ್ರೇರಣಾ ಶಕ್ತಿಗೆ ಕಾರಣರಾದ ರಾಜ್ಯದ ದಲಿತ ಸಂಘಟನೆಗಳಿಗೆ ಧನ್ಯವಾದ ಸಲ್ಲಿಸುತ್ತೇನೆ. ಈ ಜಾಗೃತಿಯ ಮಂತ್ರವನ್ನು ಕೊಟ್ಟವರು ದಲಿತ ಸಂಘಟನೆಗಳು ಎಂದು ತಿಳಿಸಿದರು.

## ಬಿಗ್ ರಿಲೀಫ್

ಎಂದು ಕೋರ್ಟ್ ತೀರ್ಪು ನೀಡಿದ್ದು, ಮುರುಘಾಶ್ರೀ ಪರವಾಗಿ ವಕೀಲ ಸಿ.ವಿ.ನಾಗೇಶ್ ವಾದ ಮಂಡಿಸಿದ್ದರು. ಮಹತ್ವದ ತೀರ್ಪಿನ ಹಿನ್ನೆಲೆಯಲ್ಲಿ, ಆರೋಪಿ ಸ್ಥಾನದಲ್ಲಿರುವ ಮುರುಘಾ ಶರಣರು ಇಂದು ಖುದ್ದು ನ್ಯಾಯಾಲಯಕ್ಕೆ ಹಾಜರಾಗಿದ್ದರು. ಅವರೊಂದಿಗೆ ಪ್ರಕರಣದ ಎರಡನೇ ಆರೋಪಿ (ಎ-2) ರಶ್ಮಿ ಹಾಗೂ ನಾಲ್ಕನೇ ಆರೋಪಿ (ಎ-4) ಹಾಗೂ ಮಠದ ಮ್ಯಾನೇಜರ್ ಆಗಿರುವ ಪರಮಶಿವಯ್ಯ ಕೂಡ ಕೋರ್ಟ್‌ಗೆ ಆಗಮಿಸಿದ್ದರು. ಮಠದ ಹಾಸ್ಟೆಲ್ನ ಇಬ್ಬರು ಅಪ್ರಾಪ್ತ ವಿದ್ಯಾರ್ಥಿನಿಯರಿಗೆ ಲೈಂಗಿಕ ಕಿರುಕುಳ ನೀಡಿದ್ದಾರೆ ಎಂದು ಆರೋಪಿಸಿ ಮುರುಘಾಶ್ರೀ, ಲೇಡಿ ವಾರ್ಡನ್ ರಶ್ಮಿ, ಬಸವಾದಿತ್ಯ, ಮ್ಯಾನೇಜರ್ ಪರಮಶಿವಯ್ಯ ಹಾಗೂ ವಕೀಲ ಗಂಗಾಧರಯ್ಯ ವಿರುದ್ಧ ದೂರು ನೀಡಿದ್ದರು.

# ಗೌರವಧನಕ್ಕಾಗಿ ಜಿ.ಪಂ ಮುಂದೆ ಅನಿರ್ದಿಷ್ಟಾವಧಿ ಮುಷ್ಕರ: ರೇಣುಕಾ

ಮಲ್ಲಮ್ಮ ನುಡಿ ವಾರ್ತೆ

**ಬೀದರ್:** ಮುಂದಿನ 15 ದಿವಸಗಳೊಳಗೆ ನಮ್ಮ ವೇತನ ಪಾವತಿಸದಿದ್ದಲ್ಲಿ ಜಿಲ್ಲಾ ಪಂಚಾಯತ ಮುಂಭಾಗದಲ್ಲಿ ಅನಿರ್ದಿಷ್ಟಾವಧಿ ಮುಷ್ಕರ ಹಮ್ಮಿಕೊಳ್ಳಲಾಗುವುದೆಂದು ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಬರುವ ಸ್ವಚ್ಛತಾ ವಾಹನ ಚಾಲಕಿಯರ ಸಂಘದ ಜಿಲ್ಲಾ ಅಧ್ಯಕ್ಷೆ ರೇಣುಕಾ ನಿರ್ಗುಡಿ ಎಚ್ಚರಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, 2018ರಲ್ಲಿ ಜಿಲ್ಲೆಯ ಎಲ್ಲ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಬರುವ ಸ್ವಚ್ಛತಾ ವಾಹನಗಳಿಗೆ ಚಾಲಕಿಯರನ್ನು ಹಾಗೂ ಸಹಾಯಕಿಯರನ್ನು ನೇಮಕ ಮಾಡಿಕೊಳ್ಳಲಾಗಿತ್ತು. ಆದರೆ 2022ರ ವರೆಗೆ ಅದು ಕಾರ್ಯರೂಪಕ್ಕೆ ಬಂದಿರಲಿಲ್ಲ.

2022ರಿಂದ ಈಚೀಗೆ ಮೂರು ವರ್ಷಗಳು ಕಳೆದುಹೋದರೂ ಒಂದು ನಯಾ ಪೈಸೆ ಚಾಲಕಿಯರಿಗಾಗಲಿ ಅಥವಾ ಸಹಾಯಕಿಯರಿಗಾಗಲಿ ನೀಡಿಲ್ಲ. ಇಂದು ಕೊಡುತ್ತಾರೆ, ನಾಳೆ ಕೊಡಬಹುದು ಎಂದುಕೊಂಡ ಹಾಗೆ ಸೇವೆ ಮಾಡುತ್ತಲಿದ್ದೇವೆ.

ಸಾರ್ವಜನಿಕರು ಎಸೆಯುವ ಎಲ್ಲ ರೀತಿಯ ಹೊಲಸು ಕಸವನ್ನು ಎತ್ತಿ ಹಾಕುವ ನಮಗೆ ಈ ರೀತಿಯ ಮಲತಾಯಿ ಧೊರಣೆ ಸರಿಯಿಲ್ಲ. ಸರ್ಕಾರದ ಸುಳ್ಳು ಆಸ್ವಾಸನೆಗಳಿಗೆ ಸೋತು ಸುಣ್ಣವಾಗಿರುವ ನಾವು ಸರ್ಕಾರದ ನೀತಿ ವಿರೂದ್ಧ ಇತ್ತಿಚೀಗೆ ಜಿಲ್ಲಾ ಉಸ್ತುವಾರಿ ಸಚಿವರ ಕಚೇರಿ ಮುಂದೆ ಸೋಮವಾರ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗಿತ್ತು. ಅಲ್ಲಿಗೆ ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಸೂರ್ಯಕಾಂತ, ಯೋಜನಾ ನಿರ್ದೇಶಕ ಶ್ರೀಕಾಂತ ವೈರಾಗೆ, ಎಲ್ಲ ತಾಲೂಕು ಪಂಚಾಯತ ಹಾಗೂ ಅನೇಕ ಗ್ರಾ.ಪಂ ಅಭಿವೃದ್ಧಿ ಅಧಿಕಾರಿಗಳು ಸ್ಥಳಕ್ಕೆ ಬಂದು ಡಿಸೆಂಬರ್ 12ರೊಳಗೆ ನಿಮ್ಮ ಗೌರವಧನ

ನೀಡುವುದಾಗಿ ಮತ್ತೊಮ್ಮೆ ಆಸ್ವಾಸನೆ ನೀಡಿದ್ದಾರೆ. ನಮಗೆ ಅವರು ಮಾತು ಕೊಟ್ಟಂತೆ ಸ್ವಚ್ಛತಾ



ವಾಹನ ಚಾಲಕಿಯರಿಗೆ ಐದು ಸಾವಿರ ಹಾಗೂ ಸಹಾಯಕಿಯರಿಗೆ ಕನಿಷ್ಟ 4 ಸಾವಿರ ಗೌರವಧನ ನೀಡಬೇಕೆಂದು ಆಗ್ರಹಿಸಿದ್ದೇವೆ.

ಈ ಕುರಿತು ಈ ಹಿಂದೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಸಹ ಮನವಿ ಸಲ್ಲಿಸಲಾಗಿದೆ.

ಡಿಸೆಂಬರ್ 12ರೊಳಗೆ ನಮ್ಮ ಗೌರವಧನ ಬಿಡುಗಡೆ ಮಾಡದಿದ್ದರೆ ಸ್ವಚ್ಛತಾ ಕಾರ್ಯ ಕೈಬಿಟ್ಟು ಜಿಲ್ಲಾ ಪಂಚಾಯತ ಮುಂಭಾಗದಲ್ಲಿ ಅನಿರ್ದಿಷ್ಟಾವಧಿ ಉಪವಾಸ ಸತ್ಯಾಗ್ರಹ ಹಮ್ಮಿಕೊಳ್ಳುವುದಾಗಿ ರೇಣುಕಾ ಎಚ್ಚರಿಸಿದರು. ವಿಶ್ವಕ್ರಾಂತಿ ದಿವ್ಯಪೀಠದ ಅಧ್ಯಕ್ಷ ಓಂಪ್ರಕಾಶ ರೊಟ್ಟೆ ಮಾತನಾಡಿ, ಗ್ರಾಮ ಪಂಚಾಯತ ಮಟ್ಟದಲ್ಲಿ ಈ ಸ್ವಚ್ಛತಾ ವಾಹನ ಚಾಲಕಿಯರು ತಮ್ಮ ನಿತ್ಯದ ಬದುಕು ನಡೆಸಲು ಹರಸಾಹಸ ಪಡುತ್ತಿರುವರು.

ಅಂಥದರಲ್ಲಿ ತಮ್ಮ ಮನೆ ಮಠ, ಗಂಡ, ಮಕ್ಕಳನ್ನು ಬಿಟ್ಟು ಸಾರ್ವಜನಿಕರು ಎಸೆಯುವ ಮಲ, ಮೂತ್ರ, ಕಸ, ಮುಸುರೆ, ಗಬ್ಬುನಾರು ವಾಸನೆ ಇರುವ ಪದಾರ್ಥಗಳನ್ನು ಎತ್ತಿ ಹಾಕಿ ಸ್ವಚ್ಛತಾ ಕಾರ್ಯ ಮಾಡುತ್ತಿದ್ದರೂ ಅಧಿಕಾರಿಗಳಾಗಲಿ ಅಥವಾ ಜನಪ್ರತಿನಿಧಿಗಳಾಗಲಿ ಇವರ ಕಡೆ ಗಮನ ಹರಿಸದೇ ಇರುವುದು ವಿಪರ್ಯಾಸ. ಕೂಡಲೇ ಇವರಿಗ ಹಾಗೂ ಸಹಾಯಕಿಯರಿಗೆ ಗೌರವಧನ ನೀಡದಿದ್ದಲ್ಲಿ ವಿಶ್ವಕ್ರಾಂತಿ ದಿವ್ಯ ಪೀಠವು ಇವರ ಬೆನ್ನಿಗೆ ನಿಂತು ಸರ್ಕಾರದ ವಿರೂದ್ಧ ಹೋರಾಟ ನಡೆಸಲಾಗುವುದೆಂದು ತಿಳಿಸಿದರು.

ಗ್ರಾಮ ಪಂಚಾಯತ ವ್ಯಾಪ್ತಿಯ ಸ್ವಚ್ಛತಾ ವಾಹನ ಚಾಲಕಿಯರ ಸಂಘದ ಗೌರವಾಧ್ಯಕ್ಷ ಹುಲೆಪ್ಪ ಡುಮ್ಮೆ, ಪ್ರಮುಖರಾದ ವಿರೇಶ ಬಿರಾದಾರ, ಅಬ್ದುಲ್ ಕರಿಮ್, ಅಮ್ರೀಶ ಸಾಗರದಾಡಗಿ, ಪ್ರಿಯಾರಾಣಿ ಇಸ್ಲಾಂಪುರ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

### ನೌಬಾದ್‌ನ ನಿವಾಸಿಗಳು ಸಂಸದ ಖಂಡ್ರೆಗೆ ಮನವಿ

# ಕೆಇಬಿ, ಸಹ್ಯಾದ್ರಿ ಬಡಾವಣೆಗಳಿಗೆ ಮೂಲಸೌಲಭ್ಯ ಕಲ್ಪಿಸಲು ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

**ಬೀದರ್:** ಬೀದರ್ ನಗರದ ನೌಬಾದ್‌ನ ಕೆಇಬಿ ಮತ್ತು ಸಹ್ಯಾದ್ರಿ ಬಡಾವಣೆಗಳಿಗೆ ಅಗತ್ಯ ಮೂಲ ಸೌಲಭ್ಯ ಕಲ್ಪಿಸುವಂತೆ ಸ್ಥಳೀಯ ನಿವಾಸಿಗಳು ಮನವಿ ಮಾಡಿದ್ದಾರೆ. ಈ ಕುರಿತು ಬೀದರ್ ನಗರದಲ್ಲಿ ನೌಬಾದ್‌ನ ನಿವಾಸಿಗಳು ಸಂಸದ ಸಾಗರ ಖಂಡ್ರೆ ಅವರನ್ನು ಭೇಟಿಯಾಗಿ ಮನವಿ ಸಲ್ಲಿಸಿದರು. ಬೀದರ್ ನಗರಾಭಿವೃದ್ಧಿ ವ್ಯಾಪ್ತಿಗೆ ಒಳಪಡುವ ಈ ಬಡಾವಣೆಗಳಲ್ಲಿ 1985ರಲ್ಲಿ ಅನಮೋದನೆಗೊಂಡಿವೆ. ನೂರಾರು ಮನೆಗಳು ಹೊಂದಿವೆ. ಆದರೆ, ಇದು ವರೆಗೂ ಹೇಳಿಕೊಳ್ಳುವಂತಹ ಅಭಿವೃದ್ಧಿ ಕಂಡಿಲ್ಲ. ಸೂಕ್ತ ರಸ್ತೆ, ಚರಂಡಿ ವ್ಯವಸ್ಥೆ ಇಲ್ಲದ ಕಾರಣ ಸ್ಥಳೀಯ ಜನರು, ಮಕ್ಕಳು ಸುಗಮ ಓಡಾಟಕ್ಕೆ ತೊಂದರೆ ಅನುಭವಿಸುತ್ತಿದ್ದಾರೆ.

ಹಾಗಾಗಿ ಸ್ಥಳೀಯ ಜನರ ಸಮಸ್ಯೆ ಗಂಭೀರತೆ ಅರಿತು ರಸ್ತೆ, ಚರಂಡಿ ನಿರ್ಮಾಣ ಮಾಡುವುದರ ಜತೆಗೆ ಉದ್ಯಾನವನಕ್ಕೆ ಸುತ್ತುಗೋಡೆ ನಿರ್ಮಾಣಕ್ಕೆ ಸೂಕ್ತ ಅನುದಾನ ಕಲ್ಪಿಸಿ ಕಾಮಗಾರಿಗೆ ಚಾಲನೆ ನೀಡಬೇಕು ಎಂದು ಮನವಿ ಪತ್ರದಲ್ಲಿ ಒತ್ತಾಯಿಸಲಾಗಿದೆ.

ಈ ಸಂದರ್ಭದಲ್ಲಿ ಸ್ಥಳೀಯ ನಿವಾಸಿಗಳಾದ ರಮೇಶ ಚಿದ್ರಿ, ವೀರಶೆಟ್ಟಿ ಚನ್ನಶೆಟ್ಟಿ, ಮಲ್ಲಿಕಾರ್ಜುನ ಗಂಗು, ಬಸವರಾಜ ಹತ್ತಿ, ವೀರಾರೆಡ್ಡಿ, ದಿಲೀಪ ಟೆಂಗಸಾಲೆ, ಶಿವರಾಜ ರಟಕಲ್ಲೆ, ವೈಜಿನಾಥ ಬಿರಾದಾರ್, ಅರವಿಂದ ಸಿದ್ದೇಶ್ವರೆ, ರಮೇಶ ಉದಗೀರೆ ಸೇರಿದಂತೆ ಹಲವರು ಇದ್ದರು.

# ಪ್ರಾದೇಶಿಕ ವಲಯ ಅರಣ್ಯಾಧಿಕಾರಿ ಕಚೇರಿಯಲ್ಲಿ ಸಂವಿಧಾನ ಸಮರ್ಪಣಾ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ:

ನಾವು ಎಲ್ಲರೂ ಅಂಬೇಡ್ಕರ್ ರಚಿಸಿದ ಸಂವಿಧಾನದಡಿ ಬದುಕುತ್ತಿದ್ದೇವೆ. ಸಂವಿಧಾನದ ನಿಯಮಗಳನ್ನು ಸರಿಯಾಗಿ ಪಾಲಿಸಿದಾಗ ಮಾತ್ರ ಅಂಬೇಡ್ಕರ್ ಅವರ ಕನಸು ನನಸಾಗುತ್ತದೆ ಎಂದು ಬುಧವಾರ ಪ್ರಾದೇಶಿಕ ವಲಯ ಅರಣ್ಯ ಕಚೇರಿಯಲ್ಲಿ ನವೆಂಬರ್ 26 ಸಂವಿಧಾನ ಸಮರ್ಪಣಾ ದಿನಾಚರಣೆಯ ಅಂಗವಾಗಿ ಡಾ. ಬಿ. ಆರ್. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ವಲಯ ಅರಣ್ಯಾಧಿಕಾರಿ ಶ್ರೀಕಾಂತ ರಾಠೋಡ ಪೂಜೆ ಸಲ್ಲಿಸಿ, ಸಂವಿಧಾನ ಪೀಠಿಕೆ ಬೋಧಿಸಿ ಮಾತನಾಡುತ್ತ ನುಡಿದರು.

ಈ ಸಂದರ್ಭದಲ್ಲಿ ಉಪ ವಲಯ ಅರಣ್ಯಾಧಿಕಾರಿಗಳಾದ ವೀರಯ್ಯಾ ಪೂಜಾರಿ, ಸಂತೋಷ ನೈಕೋಡ್, ಗಸ್ತು ಅರಣ್ಯಪಾಲಕರಾದ ಸದಾನಂದ, ಮಾಳಪ್ಪ, ಪಾಶಾ, ಸಿಬ್ಬಂದಿಗಳಾದ ವಿನೋದ್, ವಿಲ್ಲಾಸ್, ರವಿ ಖೇಳಗಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಅಣದೂರ ಗ್ರಾಮದ ವಾರ್ಡ್ 01 ರಲ್ಲಿ ಗ್ಯಾರಂಟಿ ಯೋಜನೆಗಳ ಕ್ರಾಂತಿ



ಮಲ್ಲಮ್ಮ ನುಡಿ ವಾರ್ತೆ ಬೀದರ್ :

ರಾಜ್ಯ ಸರ್ಕಾರದ ಜನಪರ ಕಾರ್ಯಕ್ರಮಗಳಾದ ಗ್ಯಾರಂಟಿ ಯೋಜನೆಗಳನ್ನು ಪ್ರತಿ ಮನೆಗೂ ತಲುಪಿಸುವ ನಿಟ್ಟಿನಲ್ಲಿ ಮಾನ್ಯ *ಮಾಜಿ ಶಾಸಕರಾದ ಸನ್ಮಾನ್ಯ ಶ್ರೀ ಅಶೋಕ ಖೇಣಿ* ಸರ್ ರವರ ಮಾರ್ಗದರ್ಶನದಲ್ಲಿ ಬೀದರ ದಕ್ಷಿಣ ಕ್ಷೇತ್ರದ ತಾಲ್ಲೂಕ ಪಂಚ ಗ್ಯಾರಂಟಿ ಉಪಾಧ್ಯಕ್ಷರಾದ ಶ್ರೀ ರಾಜಕುಮಾರ ಮಡಕಿ ಹಾಗೂ ಸದಸ್ಯರ ನೇತೃತ್ವದಲ್ಲಿ ನಮ್ಮ ನಡೆ ಹಳ್ಳಿ ಕಡೆ ಕಾರ್ಯಕ್ರಮವನ್ನು ಬೀದರ ದಕ್ಷಿಣ ವಿಧಾನಸಭಾ ಕ್ಷೇತ್ರದ ಅಣದೂರ ಗ್ರಾಮದಲ್ಲಿ ಕರ್ನಾಟಕ ಸರ್ಕಾರದ ಪಂಚ್ ಗ್ಯಾರಂಟಿ ಯೋಜನೆಗಳಾದ,

ಅನ್ನಭಾಗ್ಯ ಯೋಜನೆ: ಪಡಿತರ ಚೀಟಿ ತಿದ್ದುಪಡಿಗೆ ಸಂಬಂಧಿಸಿದಂತೆ ಗ್ರಾಮ ಒನ್ ಕೇಂದ್ರಗಳಲ್ಲಿ ಎದುರಾಗುತ್ತಿದ್ದ ತೊಂದರೆಗಳನ್ನು ನಿವಾರಿಸುವಲ್ಲಿ ತಂಡವು ಸಕ್ರಿಯವಾಗಿ ಕೆಲಸ ಮಾಡಿದೆ. ಅಲ್ಲದೆ, ಕಳ್ಳ ಸಾಗಣಿಕೆಯಂತಹ ಪ್ರಕರಣಗಳ ಬಗ್ಗೆಯೂ ನಿಗಾ ವಹಿಸಿ, ಅಧಿಕಾರಿಗಳ ಗಮನಕ್ಕೆ ತರುತ್ತಿದೆ.

ಯುವನಿಧಿ: ಈ ಯೋಜನೆ ಪದವೀಧರರು ಮತ್ತು ಡಿಪ್ಲೋಮಾ ಮುಗಿಸಿದ ಯುವಕರಿಗೆ ಯೋಜನೆಯ ಕುರಿತು ಪೂರ್ಣ ಮಾಹಿತಿ ಇಲ್ಲದಿರುವ ಕಾರಣ, ಸಮಿತಿಯು ಕಾಲೇಜುಗಳಲ್ಲಿ ಮತ್ತು ಗ್ರಾಮ ಮಟ್ಟದಲ್ಲಿ ವಿಶೇಷ ಪ್ರಚಾರ ಆಂದೋಲನಗಳನ್ನು ನಡೆಸುತ್ತಿದೆ. ನೋಂದಣಿ ಪ್ರಕ್ರಿಯೆಯಲ್ಲಿ ಸಹಾಯ ಮಾಡುತ್ತಿದೆ. ಮತ್ತು *ಗೃಹ ಲಕ್ಷ್ಮಿ, ಶಕ್ತಿ ಯೋಜನೆ, ಗೃಹ ಜ್ಯೋತಿ,* ಯೋಜನಗಳ ಮಹತ್ವದ ಬಗ್ಗೆ ಮನೆ ಮನೆಗೆ ತೆರಳಿ ಜನರಲ್ಲಿ ತಿಳಿಸಲಾಯಿತು. ಈ ಸಂದರ್ಭದಲ್ಲಿ ಕಮಿಟಿಯ ಸದಸ್ಯರಾದ ಉದಯಕುಮಾರ ಚಟನಳ್ಳಿ, ಶಿವಕುಮಾರ ಕುತ್ತಾಬಬಾದ್, ಸೇವಾದಳ ಅಧ್ಯಕ್ಷ ಮೋಹಿನ್ ಪಾಠಣ್, ಮುಖಂಡರಾದ ಪ್ರಭು ಪಸರ್ಗಿ, ಪವನ ಬಾಪೂರೆ ಸೇರಿ ಅನೇಕ ಗ್ರಾಮಸ್ಥರು ಪಾಲ್ಗೊಂಡಿದರು.

# ದೇಶದ ಪ್ರತಿಯೊಬ್ಬ ಪ್ರಜೆಗೆ ಸಂವಿಧಾನ ದಾರಿದೀಪ: ಡಾ. ಜಯಕುಮಾರ್ ಸಿಂಧೆ

ಮಲ್ಲಮ್ಮ ನುಡಿ ವಾರ್ತೆ

**ಚಿಟಗುಪ್ಪ:** ವಿಶ್ವದಲ್ಲೇ ಅತ್ಯಂತ ಶ್ರೇಷ್ಠವಾದ ಭಾರತದ ಸಂವಿಧಾನವು ಸರ್ವರಿಗೂ ಸಮಬಾಳು- ಸಮಪಾಲು ನೀಡಿದೆ ಎಂದು ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಡಾ. ಜಯಕುಮಾರ ಸಿಂಧೆ ಹೇಳಿದರು. ಬುಧವಾರ ತಾಲೂಕ ಆಡಳಿತ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಆಶ್ರಯದಲ್ಲಿ ಹಮ್ಮಿಕೊಂಡಿದ್ದ 76ನೇ ಸಂವಿಧಾನ ಸಮರ್ಪಣಾ ದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಡಾ. ಬಿ. ಆರ್. ಅಂಬೇಡ್ಕರ್ ಸಂವಿಧಾನ ರಚಿಸಿ, ನ.26, 1949 ರಂದು ದೇಶಕ್ಕೆ ಕೊಡುಗೆಯಾಗಿ ನೀಡಿದ್ದು, ಆ ದಿನವನ್ನ ಸಂವಿಧಾನ ಸಮರ್ಪಣಾ ದಿನವಾಗಿ ಆಚರಿಸಲಾಗುತ್ತಿದೆ. ದೇಶದ ಪ್ರತಿಯೊಬ್ಬ ಪ್ರಜೆಗೆ ಸಂವಿಧಾನ ದಾರಿದೀಪ. ಕಾನೂನು, ನ್ಯಾಯ, ನೀತಿ, ಸಮಾನತೆ, ಸಹಬಾಳ್ವೆ ತತ್ವಗಳ ತಳಹದಿಯ ಮೇಲೆ ನಿಂತಿದ್ದು, ಎಲ್ಲರೂ ಸಂವಿಧಾನವನ್ನು ಗೌರವಿಸಿ, ಪ್ರಜಾಪ್ರಭುತ್ವ ವ್ಯವಸ್ಥೆ ಬಲಪಡಿಸಬೇಕು' ಎಂದರು. ತಹಶೀಲ್ದಾರ್ ಮಂಜುನಾಥ್ ಪಂಚಾಳ ಮಾತನಾಡಿ, ಜಗತ್ತಿನ ಯಾವ ದೇಶದ ಸಂವಿಧಾನ ಕರ್ತೃಗಳು ಎದುರಿಸದ ಒಂದು ಸಮಸ್ಯೆಯನ್ನು ನಮ್ಮ ದೇಶದ ಸಂವಿಧಾನ ರಚನಾಕಾರರು ಎದುರಿಸಿದರು. ಇಲ್ಲಿನ ಜಾತಿ, ಲಿಂಗಾಧಾರಿತ ಮತ್ತು ಧಾರ್ಮಿಕ ತಾರತಮ್ಯವನ್ನು ಕಾನೂನಿನ ಮೂಲಕ ಮೀರುವ ಸವಾಲು ಇವುಗಳನ್ನು ನಿವಾರಿಸಿ ಸಮಾನತೆ ಮತ್ತು ಸಹೋದರತ್ವ ಸ್ಥಾಪಿಸದ ಹೊರತು ನಾವು ಒಂದು ದೇಶವಾಗಿ ಯಶಸ್ವಿಯಾಗಲು ಸಾಧ್ಯವಿಲ್ಲ ಎಂಬ ಅರಿವು ಡಾ. ಅಂಬೇಡ್ಕರ್ ಅವರಿಗೆ ಸ್ಪಷ್ಟವಾಗಿ ಇತ್ತು. ಆ ಕಾರಣಕ್ಕೆ ಭಾರತ ಸಂವಿಧಾನ ಮಹಿಳೆ, ದಲಿತ, ಅಲ್ಪಸಂಖ್ಯಾತ, ಹಿಂದುಳಿದ ಎಲ್ಲಾ ಸಮುದಾಯಗಳನ್ನು ಒಳಗೊಳ್ಳುವ ಒಂದು ಕಾರ್ಯಸೂಚಿಯಾಗಿದೆ' ಎಂದರು. ಈ ಸಂದರ್ಭದಲ್ಲಿ ಪುರಸಭೆ ಅಧ್ಯಕ್ಷ ದಿಲೀಪಕುಮಾರ್ ಬಗ್ದಲಕರ್, ತಾಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಲಕ್ಷ್ಮಿ ಬಿರಾದಾರ್, ಉಪಾಧ್ಯಕ್ಷ ನಸೀರ್ ಖಾನ, ಮುಖ್ಯಾಧಿಕಾರಿ ಸತೀಶ ಗುಡ್ಡೆ, ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ವೀರಯ್ಯಾ ಹಿರೇಮಠ, ಡಾ. ವಿಜಯ ಹಿರಸ್ಕರ್, ಪಿಎ ಬಸಲಿಂಗಪ್ಪ ಎಂ. ಗೋಧಿಹಾಳ, ಬಿಆರ್ ಪಿ, ರಾಮಲು, ಸಿಆರ್ ಸಿ, ರಾಮಚಂದ್ರ, ಪುರಸಭೆ ಸದಸ್ಯರಾದ ರಾಜದೀಪ್ ಜಾಬಾ, ಬಾಬಾ ಆರ್.ಸಿ.ಸಿ., ನಸೀರ್ ಹಕ್ಕಿಮ್, ಮಹಮ್ಮದ್ ಹಬ್ಬಿಬ್, ಪ್ರಮುಖರಾದ ಮನೋಜಕುಮಾರ್ ಶರ್ಮಾ, ಮಾರುತಿ ಶಾಖಾ, ಅಶೋಕ ಸ್ವಾಮಿ, ಮಾಣಿಕ ಹಿಪರ್ಗಿ, ಶಾಮರಾವ ಭುತ್ತಾಳೆ, ಸುಭಾಷ ಕುಂಬಾರ್, ಭಾಸ್ಕರ್, ಶ್ರೀಕಾಂತ ಫುಲೇ, ನಿಜಾಮ್ ಹಕ್ಕಿಮ್, ಕಲ್ಯಾಣರಾವ್ ಜಾಬಾ, ಸೇರಿದಂತೆ ತಾಲೂಕ ಮಟ್ಟದ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು, ವಿವಿಧ ಶಾಲಾ ಮಕ್ಕಳು, ಅಂಗನವಾಡಿ ಕಾರ್ಯಕರ್ತೆಯರು, ಸಾರ್ವಜನಿಕರು ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ಚಿತ್ರಶೇಖರ ಚಿರಳ್ಳಿ, ನಿರೂಪಿಸಿ ವಂದಿಸಿದರು.

ಇದಕ್ಕು ಮುನ್ನ ಸಂವಿಧಾನ ಪೀಠಿಕೆಯ ಛಾಯಾಚಿತ್ರದ ಭವ್ಯ ಮೆರವಣಿಗೆಗೆ ತಹಶೀಲ್ದಾರ್ ಮಂಜುನಾಥ್ ಪಂಚಾಳ ಚಾಲನೆ ನೀಡಿದರು. ಮೆರವಣಿಗೆಯನ್ನು ಪಟ್ಟಣದ ಮುಖ್ಯದ್ವಾರ (ಬೇಸ್) ಯಿಂದ ಪ್ರಮುಖ ರಸ್ತೆಗಳ ಮೂಲಕ ಅಂಬೇಡ್ಕರ್ ವೃತ್ತದ ವರೆಗೆ ಜರುಗಿತ್ತು. ತಾಲ್ಲೂಕು ಆಡಳಿತದ ವಿವಿಧ ಇಲಾಖೆಗಳ ಅಧಿಕಾರಿಗಳು, ವಿವಿಧ ಸಂಘಟನೆಗಳ ಮುಖಂಡರು ಡಾ.ಬಿ.ಆರ್. ಅಂಬೇಡ್ಕರ್ ಪ್ರತಿಮೆಗೆ ಹೂ ಮಾಲಾರ್ಪಣೆ ಮಾಡಿದರು. ತಹಶೀಲ್ದಾರ್ ಮಂಜುನಾಥ್ ಪಂಚಾಳ ಸಂವಿಧಾನ ಪೀಠಿಕೆಗೆ ಭೋದಿಸಿದರು.

# ನಾಡು ನುಡಿಯ ಸೇವಕನಿ ಕನ್ನಡ ಸೇವಾ ರತ್ನ ಪ್ರಶಸ್ತಿ

ಮಲ್ಲಮ್ಮ ನುಡಿ ವಾರ್ತೆ ಬೀದರ್ :



ಬೀದರ್ ತಾಲೂಕಿನ ಬಾವಗಿ ಗ್ರಾಮದ ಶ್ರೀ ಗುರು ಭದ್ರೇಶ್ವರ ಸಂಸ್ಥಾನದ ಪೀಠಾಧಿಪತಿಗಳಾದ ವೇದಮೂರ್ತಿ ಶಾಂತಕುಮಾರ ಸ್ವಾಮಿ ರವರಿಗೆ ಕನ್ನಡ ರತ್ನ ಪ್ರಶಸ್ತಿ ಒಲಿದು ಬಂದಿದೆ. ಶಾಂತಕುಮಾರ ಸ್ವಾಮಿ ಯವರು ತನ್ನದೇಯಾದ ಶ್ರೀ ರೇವಣಸಿದ್ಧೇಶ್ವರ ಕಲಾ ಸಾಂಸ್ಕೃತಿಕ ಸೇವಾ ಸಂಘ ವನ್ನು ಸ್ಥಾಪಿಸಿ ಅದರ ಅಡಿಯಲ್ಲಿ ಅನೇಕ ಕಾರ್ಯಕ್ರಮಗಳನ್ನು ಆಯೋಜಿಸಿ ಸಂಸ್ಕೃತಿ, ನಾಡು ನುಡಿಯ ಬಗ್ಗೆ, ದೇಶಭಕ್ತಿ ಅಲ್ಲದೆ ನಮ್ಮ ಜನಪದ ಸಾಹಿತ್ಯ ಕಲೆ ಉಳಿಸಿ ಬೆಳೆಸಲು ಯುವ ಪೀಳಿಗಳಿಗೆ ಮುಟ್ಟಿಸಲು ಗ್ರಾಮ ಗ್ರಾಮಗಳಿಗೆ ತೆರಳಿ ಕಾರ್ಯಕ್ರಮ ಆಯೋಜಿಸಿ ಎಲ್ಲರ ಮನೆ ಮನಗಳಿಗೆ ತಲುಪಿಸುವುದಲದೆ, ಅನೇಕ ಯುವ ಸಾಹಿತಿ, ಕಲಾವಿದರು ಹಾಗೂ ಸಮಾಜ ಸೇವಕರು, ಸಾಧಕರನ್ನು ಗುರುತಿಸಿ ಸನ್ಮಾನಿಸಿ ಪ್ರೋತ್ಸಾಹ ನೀಡುವ ಕಾರ್ಯ ತನ್ನ ಸಂಘದ ವತಿಯಿಂದ ಮಾಡುತ್ತ ಬರುತ್ತಿದ್ದಾರೆ. ಧಾರ್ಮಿಕ, ಸಾಮಾಜಿಕ, ಸಾಂಸ್ಕೃತಿಕ ಒಂದಿಲ್ಲೊಂದು ಕೆಲಸದಲ್ಲಿ ತೊಡಗಿ ಸದಾ ಸಮಾಜ ಸೇವೆಯಲ್ಲಿ ನಿರತರಾಗಿರುವ ಶ್ರೀ ಗುರುಭದ್ರೇಶ್ವರ ಸಂಸ್ಥಾನದ ಪೀಠಾಧಿಪತಿಗಳಾದ ವೇದಮೂರ್ತಿ ಶಾಂತಕುಮಾರ ಸ್ವಾಮಿ ರವರ ಕಾರ್ಯ ವೈಖರಿ ಯನ್ನು ಗಮನಿಸಿ ನಾಡು ನುಡಿಯ ಸೇವೆಯಲ್ಲಿ ಸದಾ ಸಿದ್ಧವಾದ ಕನ್ನಡ ಸೇನೆ ಕರ್ನಾಟಕ ಸಂಸ್ಥೆಯು 70ನೇ ಕನ್ನಡ ರಾಜ್ಯೋತ್ಸವ ಪ್ರಯುಕ್ತ ದಿನಾಂಕ 3 0 /11/2025 ರಂದು ಚಿಟಗುಪಾ ತಾಲ್ಲೂಕಿನಲಿ ಆಯೋಜಿಸಲಾದ ಸಮಾರಂಭದಲ್ಲಿ ಪೂಜರಿಗೆ ಕನ್ನಡ ಸೇವಾ ರತ್ನ ಪ್ರಶಸ್ತಿ ನೀಡಿ ಗೌರವಿಸುತ್ತಿದೆ ಎಂದು ಕನ್ನಡ ಸೇನೆ ಕರ್ನಾಟಕ ಸಂಸ್ಥೆ ಯ ರಾಜ್ಯ ಉಪಾಧ್ಯಕ್ಷ ರಾದ ಶ್ರೀ ರವಿ ಸ್ವಾಮಿ, ಬೀದರ್ ಜಿಲ್ಲಾಧ್ಯಕ್ಷ ರಾದ ಶ್ರೀ ಸುಭಾಷ ಕೆನೆಡೆ ಯವರು ಪ್ರಕಟಣೆ ಯಲ್ಲಿ ತಿಳಿಸಿದ್ದಾರೆ.

# ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆಗೆ ಜಿಲ್ಲಾ ಉಸ್ತುವಾರಿಯಾಗಿ ಚಂದ್ರಕಾಂತ ಪಾಟೀಲ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ ಬೀದರ್ :

ಕೆಪಿಸಿಸಿ ಪದವೀಧರರ ವಿಭಾಗದ ವತಿಯಿಂದ 2026ರ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆಗೆ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ ಅವರ ಆದೇಶದ ಮೇರೆಗೆ ಕೆಪಿಸಿಸಿ ಪದವೀಧರರ ವಿಭಾಗದ ವತಿಯಿಂದ ಚಂದ್ರಕಾಂತ ಪಾಟೀಲ ಅವರನ್ನು ಬೀದರ ಜಿಲ್ಲೆಗೆ ಉಸ್ತುವಾರಿಯಾಗಿ ನೇಮಕ ಮಾಡಲಾಗಿದೆ.

ನೇಮಕಾತಿ ಪತ್ರವನ್ನು ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಚೇರಿಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆಯವರು ಸನ್ಮಾನಿಸಿ ನೇಮಕಾತಿ ಪತ್ರವನ್ನು ವಿತರಣೆ ಮಾಡಿದರು.

ತಮಗೆ ವಹಿಸಿದ ಉಸ್ತುವಾರಿ ಜವಾಬ್ದಾರಿಯನ್ನು ಪಕ್ಷದ ಮುಖಂಡರ ಸಹಯೋಗದೊಂದಿಗೆ ಸಮರ್ಥವಾಗಿ ನಿಭಾಯಿಸಬೇಕು. ಪಕ್ಷದ ಗೆಲುವಿಗೆ ಶ್ರಮವಹಿಸಬೇಕು. ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಗೆ ಸದಸ್ಯತ್ವ ನೊಂದಣಿ ಮಾಡಿಸಲು ಶ್ರಮವಹಿಸಬೇಕೆಂದು ಪತ್ರದಲ್ಲಿ ನಿರ್ದೇಶಿಸಲಾಗಿದೆ.

# ಅರ್ಜಿ ಸಲ್ಲಿಕೆ ಕೊನೆಯ ದಿನಾಂಕ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

**ಕಲಬುರಗಿ:** 2024–25ನೇ ಸಾಲಿನ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಸರ್ಕಾರದ ವಿವೇಚನಾ ನಿಧಿಯಡಿ (GDQ) ಸಾಮಾನ್ಯ ಉಪಯೋಜನೆಯಡಿ ತೋಟಗಾರಿಕೆ ಇಲಾಖೆಯಿಂದ ಪ್ರಸಕ್ತ ಸಾಲಿನಲ್ಲಿ ಅನುಷ್ಠಾನಗೊಳಿಸಲಾಗುತ್ತಿರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ರೈತರಿಗೆ ಪ್ರತಿ ಫಲಾನುಭವಿಗೆ ತರಕಾರಿ ಬೆಳೆಯ ಆಯ್ಕೆ ಮತ್ತು ರೈತರ ಪ್ರದೇಶ ವಿಸ್ತರಣೆ ಲಭ್ಯತೆಗೆ ಅನುಗುಣವಾಗಿ ಗರಿಷ್ಠ 20,000 ರೂ. ಮೊತ್ತದ ವಿವಿಧ ಬಗೆ-ಯ ತರಕಾರಿ ಬೀಜಗಳನ್ನು ವಿತರಿಸಲು ಅರ್ಜಿ ಸಲ್ಲಿಕೆ ಕೊನೆಯ ದಿನಾಂಕವನ್ನು 2025ರ ಡಿಸೆಂಬರ್ 10 ರವರೆಗೆ ವಿಸ್ತರಿಸಲಾಗಿದೆ ಎಂದು ಕಲಬುರಗಿ (ಜಿ.ಪಂ.) ತೋಟಗಾರಿಕೆ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

ಆಸಕ್ತಿಯುಳ್ಳ ರೈತರು ಸಂಬಂಧಪಟ್ಟ ಆಯಾ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿಯಲ್ಲಿ 2025ರ ಡಿಸೆಂಬರ್ 10 ರೊಳಗಾಗಿ ಅರ್ಜಿ ಸಲ್ಲಿಸಬೇಕು. ಈ ಹಿಂದೆ ಅರ್ಜಿ ಸಲ್ಲಿಕೆ ಕೊನೆಯ ದಿನಾಂಕವನ್ನು 2025ರ ನವೆಂಬರ್ 24 ರಂದು ನಿಗದಿಪಡಿಸಲಾಗಿತ್ತು.

ಹೆಚ್ಚಿನ ಮಾಹಿತಿಗಾಗಿ ರೈತರು ಸಂಬಂಧಪಟ್ಟ ಆಯಾ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ ಮತ್ತು ಹೋಬಳಿ ಮಟ್ಟದ ರೈತ ಸಂಪರ್ಕ ಕೇಂದ್ರದ ಸಹಾಯಕ ತೋಟಗಾರಿಕೆ ಅಧಿಕಾರಿಗಳನ್ನು ಹಾಗೂ ಅಫಜಲಪೂರ ಮೊಬೈಲ್ ಸಂಖ್ಯೆ–9880582912, ಆಳಂದ–9740212165, ಚಿಂಚೋಳಿ–9663489542, ಚಿತ್ತಾಪೂರ–9008556488, ಕಲಬುರಗಿ–9164835917, ಜೇವರ್ಗಿ–9108682170 ಹಾಗೂ ಸೇಡಂ–9538622086 ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

# ಡಿಸೆಂಬರ್ 4 ರಂದು ಮುಂಗಡ ಪತ್ರ ತಯಾರಿಸಲು ಪೂರ್ವಭಾವಿ ಸಭೆ

ಮಲ್ಲಮ್ಮ ನುಡಿ ವಾರ್ತೆ

**ಕಲಬುರಗಿ:** ಕಲಬುರಗಿ:–ಕಲಬುರಗಿ ಮಹಾನಗರ ಪಾಲಿಕೆಯ 2026–27ನೇ ಸಾಲಿನ ಮುಂಗಡ ಪತ್ರ ತಯಾರಿಸಲು ಪೂರ್ವಭಾವಿಯಾಗಿ ಸಾರ್ವಜನಿಕರಿಂದ ಸಲಹೆ, ಸೂಚನೆಗಳನ್ನು ಪಡೆಯಲು 2025ರ ಡಿಸೆಂಬರ್ 4 ರಂದು ಬೆಳಿಗ್ಗೆ 11 ಗಂಟೆಗೆ ಕಲಬುರಗಿ ಇಂದಿರಾ ಸ್ಮಾರಕ ಭವನದಲ್ಲಿ ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಮಹಾನಗರ ಪಾಲಿಕೆಯ ಆಯುಕ್ತರು ತಿಳಿಸಿದ್ದಾರೆ.

ಮಹಾನಗರ ಪಾಲಿಕೆ ವ್ಯಾಪ್ತಿಯ ನೋಂದಾಯಿತ ಸ್ಥಳೀಯ ಕಲ್ಯಾಣ ಸಂಘ, ವ್ಯಾಪಾರ, ಉದ್ಯಮ ನಡೆಸುವ ಸಂಘ–ಸಂಸ್ಥೆಗಳು, ಎನ್.ಜಿ.ಓ. ಸಂಘಗಳು, ಇತರೆ ಪ್ರಮುಖ ನಾಗರಿಕ ಹಾಗೂ ಸಾರ್ವಜನಿಕರು ಮೇಲ್ಕಂಡ ದಿನದಂದು ನಡೆಯುವ ಪೂರ್ವಭಾವಿ ಸಭೆಗೆ ಹಾಜರಾಗಿ ತಮ್ಮ ಸಲಹೆ ಸೂಚನೆ ನೀಡಬಹುದಾಗಿದೆ ಎಂದು ತಿಳಿಸಿದ್ದಾರೆ.

# ಆಳಂದ ಪುರಸಭೆಗೆ ಬೀದಿ ನಾಯಿಗಳ ಮಾಹಿತಿ ನೀಡಲು ಸೂಚನೆ

ಮಲ್ಲಮ್ಮ ನುಡಿ ವಾರ್ತೆ

**ಕಲಬುರಗಿ:** ಸರ್ವೋಚ್ಚ ನ್ಯಾಯಾಲಯವು ಸ್ವಯಂ ಪ್ರೇರಿತ ರಿಟ್ ಅರ್ಜಿ ಸಂಖ್ಯೆ 5/2025 ರಲ್ಲಿ ನೀಡಿರುವ ನಿರ್ದೇಶನದಂತೆ ಆಳಂದ ಪಟ್ಟಣದ ವ್ಯಾಪ್ತಿಯಲ್ಲಿನ ಖಾಸಗಿ ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಗಳು, ಆಸ್ಪತ್ರೆಗಳು, ಕ್ರೀಡಾ ಸಂಕೀರ್ಣಗಳು, ಬಸ್ ನಿಲ್ದಾಣಗಳು, ರೈಲ್ವೆ ನಿಲ್ದಾಣಗಳ ಮುಖ್ಯಸ್ಥರಿಗೆ ತಮ್ಮ ಸಂಸ್ಥೆಯ ಆವರಣದಲ್ಲಿ ಯಾವುದೇ ಬೀದಿ ನಾಯಿಗಳು ವಾಸವಿದ್ದಲ್ಲಿ ಅದನ್ನು ಪರಿಶೀಲಿಸಿ ಕೂಡಲೇ ಅದರ ಸಂಖ್ಯೆಯನ್ನು ಲೆಕ್ಕ ಮಾಡಿ ಆಳಂದ ಪುರಸಭೆಯ ಮುಖ್ಯಾಧಿಕಾರಿಗಳಿಗೆ ತಿಳಿಸಬೇಕೆಂದು ಆಳಂದ ಪುರಸಭೆಯ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ತಮ್ಮ ಸಂಸ್ಥೆಯ ಆವರಣದಲ್ಲಿ ಬೀದಿ ನಾಯಿಗಳ ಹಾವಳಿ ತಡೆಯಲು ಹಾಗೂ ಅವುಗಳ ಪ್ರವೇಶ ನಿಯಂತ್ರಿಸಲು ಕ್ರಮ ವಹಿಸಬೇಕು. ನಗರ ಸ್ಥಳೀಯ ಸಂಸ್ಥೆಯಿಂದ ಬೀದಿ ನಾಯಿಗಳನ್ನು ಸ್ಥಳಾಂತರಿಸಲು ಸಹಕರಿಸಲು ಹಾಗೂ ಅವುಗಳ ಪ್ರವೇಶ ನಿರ್ಭಂದಿಸುವದನ್ನು ಮೇಲ್ವಿಚಾರಣೆ ಮಾಡಲು ತಮ್ಮ ಸಂಸ್ಥೆ ವತಿಯಿಂದ ಒಬ್ಬ ಜವಾಬ್ದಾರಿಯುತ ನೌಕರರನ್ನು ನೋಡಲ್ ಅಧಿಕಾರಿಯಾಗಿ ನೇಮಕ ಮಾಡಬೇಕು.

ಮಾನ್ಯ ಸರ್ವೋಚ್ಚ ನ್ಯಾಯಲಯದ ನಿರ್ದೇಶನದಂತೆ ತಮ್ಮ ಸಂಸ್ಥೆಯ ವ್ಯಾಪ್ತಿಯಲ್ಲಿ ಪುನ: ನಾಯಿಗಳು ವಾಸ ಮಾಡಲು ಅವಕಾಶ ಕೊಟ್ಟಲ್ಲಿ ಅವನ್ನು ಸ್ಥಳಾಂತರಿಸುವ ವೆಚ್ಚವನ್ನು ತಮ್ಮ ಸಂಸ್ಥೆಯಿಂದ ವಸೂಲಿ ಮಾಡಲಾಗುತ್ತದೆ. ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶ ಉಲ್ಲಂಘನೆ ಮಾಡಿದ್ದಲ್ಲಿ ನ್ಯಾಯಾಲಯದ ಆದೇಶದಂತೆ ತಮ್ಮ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

## ಉದ್ಯಮಶೀಲತಾಭಿವೃದ್ಧಿ ತರಬೇತಿ ಕಾರ್ಯಕ್ರಮ:

# ಹೆಸರು ನೋಂದಣಿಗೆ ಡಿಸೆಂಬರ್ 1 ರಂದು ಕೊನೆಯ ದಿನ

ಮಲ್ಲಮ್ಮ ನುಡಿ ವಾರ್ತೆ

**ಕಲಬುರಗಿ:** ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಬೆಂಗಳೂರು ಹಾಗೂ ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್)

ಕಲಬುರಗಿ ಇವುಗಳ ಸಂಯುಕ್ತಾಶ್ರಯದಲ್ಲಿ ಸ್ವಯಂ ಉದ್ಯಮಗಳನ್ನು ಪ್ರಾರಂಭಿಸಲು ಆಸಕ್ತಿಯುಳ್ಳ ಕಲಬುರಗಿಯ ಎಲ್ಲಾ ವರ್ಗದ ಮಹಿಳಾ ಅಭ್ಯರ್ಥಿಗಳಿಗೆ 2025ರ ಡಿಸೆಂಬರ್ 2 ರಿಂದ 11 ರವರೆಗೆ ಹತ್ತು ದಿನಗಳ ಕಾಲ ಉಚಿತವಾಗಿ ಉದ್ಯಮಶೀಲತಾಭಿವೃದ್ಧಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ಕಲಬುರಗಿ ಸಿಡಾಕ್ ಜಂಟಿ ನಿರ್ದೇಶಕರು ತಿಳಿಸಿದ್ದಾರೆ. ಆಸಕ್ತಿಯುಳ್ಳ ವಯೋಮಿತಿ 20 ರಿಂದ 40 ವರ್ಷದೊಳಗಿನ, ಕನಿಷ್ಠ ಎಸ್.ಎಸ್.ಎಲ್.ಸಿ. ಪಾಸ್/ಫೇಲಾದ ಎಲ್ಲಾ ವರ್ಗದ ಅರ್ಹ ಮಹಿಳಾ ಅಭ್ಯರ್ಥಿಗಳು ಆಧಾರ ಕಾರ್ಡ್, ರೇಷನ್ ಕಾರ್ಡ, ಜಾತಿ ಪ್ರಮಾಣ ಪತ್ರಗಳ ಪ್ರತಿ, ಇತ್ತೀಚಿನ 3 ಭಾವಚಿತ್ರ, ವಿದ್ಯಾಭ್ಯಾಸದ ಅಂಕಪಟ್ಟಿ ಪ್ರತಿ ಮತ್ತು ಇತರೆ ಸಂಬಂಧಪಟ್ಟ ದಾಖಲೆಗಳೊಂದಿಗೆ 2025ರ ಡಿಸೆಂಬರ್ 1 ರೊಳಗಾಗಿ ಜಂಟಿ ನಿರ್ದೇಶಕರು, ಸಿಡಾಕ್, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ (ವಿಭಾಗೀಯ ಕಛೇರಿ) ಸಿಓಇ ಕಟ್ಟಡ, ಸರ್ಕಾರಿ ಬಾಲಕರ ಐಟಿಐ ಆವರಣ, ಎಂ.ಎಸ್.ಕೆ. ಮಿಲ್ ರಸ್ತೆ, ಕಲಬುರಗಿ–585102 ವಿಳಾಸಕ್ಕೆ ನೇರವಾಗಿ ಬಂದು ನೋಂದಣಿ ಮಾಡಿಕೊಳ್ಳಬೇಕು.

ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಸಿಡಾಕ್ ಜಂಟಿ ನಿರ್ದೇಶಕರನ್ನು ಹಾಗೂ ಮೋಬೈಲ್ ಸಂಖ್ಯೆ 8884872109 / 9108972833 / 9986332736

# ಸರ್ಕಾರಿ ಕಚೇರಿಗಳಲ್ಲಿ, ಕೆಲಸದ ಸ್ಥಳಗಳಲ್ಲಿ ಮಹಿಳೆಯರಿಗೆ ಕಿರುಕುಳ ನೀಡಿದರೆ ಮಹಿಳಾ ದೌರ್ಜನ್ಯ ಸಮಿತಿಗೆ ದೂರು ನೀಡಿ

ಮಲ್ಲಮ್ಮ ನುಡಿ ವಾರ್ತೆ

**ಕಲಬುರಗಿ:**–ಸರ್ಕಾರಿಕಚೇರಿಗಳಲ್ಲಿ, ಕೆಲಸದಸ್ಥಳಗಳಲ್ಲಿಮಹಿಳೆಯರಮೇಲೆ ದೌರ್ಜನ್ಯಮತ್ತುಲೈಂಗಿಕ ಕಿರುಕುಳ ನೀಡಿದರೆ ತಮ್ಮ ಕಚೇರಿಯಲ್ಲಿನ ಮಹಿಳಾ ದೌರ್ಜನ್ಯ ಸಮಿತಿಗೆ ದೂರು ನೀಡಬೇಕೆಂದು ಕಲಬುರಗಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಶ್ರೀನಿವಾಸ ನವಲೆ ಅವರು ಹೇಳಿದರು.

ಕಲಬುರಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವುಗಳ ಸಹಯೋಗದೊಂದಿಗೆ ಅಂತರರಾಷ್ಟ್ರೀಯ ಮಹಿಳೆಯರ ದೌರ್ಜನ್ಯವಿರೋಧಿ ದಿನದಅಂಗವಾಗಿ ಸರ್ಕಾರಿ ಕಚೇರಿಗಳಲ್ಲಿ ಕೆಲಸದ ಸ್ಥಳಗಳಲ್ಲಿ ಮಹಿಳೆಯರ ಮೇಲಿನ ಕಿರುಕುಳ (ಪ್ರತಿಬಂಧ, ನಿಷೇಧ ಮತ್ತುಪರಿಹಾರ) ಕಾಯ್ದೆ–2013ರ ಕುರಿತು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ ಮತ್ತು ಅಧೀನ ಕಚೇ-ರಿಯ ಮಹಿಳಾ ಸಿಬ್ಬಂದಿಗಳಿಗೆ ಬುಧವಾರ ಜಿಲ್ಲಾ ಆರೋಗ್ಯ ಮತ್ತು



ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಯ

ಸಭಾಂಗಣದಲ್ಲಿಹಮ್ಮಿಕೊಳ್ಳಲಾಗಿದ್ದ ಅರಿವುಮೂಡಿಸುವಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿ, ಮಹಿಳೆಯರ ಮೇಲಿನ ಕಿರುಕುಳ (ಪ್ರತಿಬಂಧ, ನಿಷೇಧ ಮತ್ತು ಪರಿಹಾರ) ಕಾಯ್ದೆ–2013ರ ಕುರಿತು ಕಾರ್ಯಾಗಾರದಲ್ಲಿ ಭಾಗವಹಿಸಿದ ಮಹಿಳಾ ಸಿಬ್ಬಂದಿಗಳಿಗೆ ಅರಿವು ಮೂಡಿಸಿದರು.

ಕಲಬುರಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಶರಣಬಸಪ್ಪ ಕ್ಯಾತನಾಳ ಅವರು ಮಾತನಾಡಿ ಕಚೇರಿಯಲ್ಲಿ ಕೆಲಸ ನಿರ್ವಹಿಸುವ

ಮಹಿಳಾ ಸಿಬ್ಬಂದಿಗೆಯಾರಾದರೂ ದೌರ್ಜನ್ಯ, ಕಿರುಕುಳ ನೀಡಿದರೆ ಮಹಿಳೆಯರ ಮೇಲಿನ ಕಿರುಕುಳ (ಪ್ರತಿಬಂಧ, ನಿಷೇಧ ಮತ್ತು ಪರಿಹಾರ)

ಕಾಯ್ದೆ–2013ರ ಅಡಿಯಲ್ಲಿ ದೂರು ನೀಡಬೇಕು. ಯಾರು ಕೂಡಾ ಸುಳ್ಳು ದೂರು ನೀಡಬಾರದೆಂದು ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಯ ಮಹಿಳಾ ದೌರ್ಜನ್ಯ ಸಮಿತಿಯ ಅಧ್ಯಕ್ಷರಾದ ಡಾ. ಸಂಧ್ಯಾ ಕಾನೇಕರ ಅವರು ಮಾತನಾಡಿ, ಕಚೇರಿಯಲ್ಲಿ ಕೆಲಸ ನಿರ್ವಹಿಸುವ ಮಹಿಳೆಯರು ತಮಗೆ

ಯಾರಾದರು ಲೈಂಗಿಕ ಕಿರುಕುಳ, ಮಾನಸಿಕ ಹಿಂಸೆ ನೀಡಿದರೆ ದೂರು ನೀಡಬೇಕು. ಕಾನೂನಿನನ್ವಯ ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಂವಿಧಾನ ದಿನದ ಅಂಗವಾಗಿ ಎಲ್ಲರಿಗೂ ಭಾರತದ ಸಂವಿಧಾನದ ಪೀಠಿಕೆಯನ್ನು ಬೋಧಿಸಲಾಯಿತು. ಕಲಬುರಗಿ ಜಿಲ್ಲಾ ತರಬೇತಿ ಕೇಂದ್ರದ ಪ್ರಾಂಶುಪಾಲ ಡಾ. ರವಿಕಾಂತಿ ಕ್ಯಾತನಾಳ ಹಾಗೂ ಜಿಲ್ಲಾ ಸರ್ವೆಕ್ಷಣಾ ಅಧಿಕಾರಿ ಡಾ. ರಾಕೇಶ ಕಾಂಬಳೆ ಉಪಸ್ಥಿತರಿದ್ದರು.

# ಸಹಾಯಧನಕ್ಕಾಗಿ ತಾತ್ಕಾಲಿಕ ಪಟ್ಟಿ ಪ್ರಕಟ: ಆಕ್ಷೇಪಣೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ,

**ಕಲಬುರಗಿ:** ಕಲಬುರಗಿ ಮಹಾನಗರಪಾಲಿಕೆಯಿಂದ 2025–26ನೇ ಸಾಲಿಗಾಗಿ ಶೇ.5ರ ಯೋಜನೆಯಡಿ ಎಸ್.ಎಫ್.ಸಿ. (ಮುಕ್ತ ನಿಧಿ) ಅನುದಾನದಡಿ ವಿಕಲಚೇತನರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು, ಸಣ್ಣ ಉದ್ದಿಮೆಗಾಗಿ ಸಹಾಯಧನಕ್ಕಾಗಿ ಅರ್ಜಿ ಆಹ್ವಾನಿಸಿ, ಅರ್ಹ ಹಾಗೂ ಅನರ್ಹ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಕಲಬುರಗಿ ಮಹಾನಗರಪಾಲಿಕೆಯ ನೋಟೀಸ್ ಬೋರ್ಡ್‌ನಲ್ಲಿ ಪ್ರಕಟಿಸಲಾಗಿದೆ ಎಂದು ಕಲಬುರಗಿ ಮಹಾನಗರ ಪಾಲಿಕೆಯ ಉಪ ಆಯುಕ್ತರು (ಆಡಳಿತ) ಅವರು ತಿಳಿಸಿದ್ದಾರೆ.

ಅದೇ ರೀತಿ ಈ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಮಹಾನಗರಪಾಲಿಕೆಯ https://www.kalaburagicity.mrc.gov ವೆಬ್‌ಸೈಟ್‌ನಲ್ಲಿ ಈಗಾಗಲೇ ಪ್ರಕಟಿಸಲಾಗಿದೆ. ಈ ತಾತ್ಕಾಲಿಕ ಅರ್ಹ ಹಾಗೂ ಅನರ್ಹ ಆಯ್ಕೆ ಪಟ್ಟಿಗೆ ಆಕ್ಷೇಪಣೆಗಳು ಇದ್ದಲ್ಲಿ 2025ರ ಡಿಸೆಂಬರ್ 12 ರೊಳಗಾಗಿ ಕಲಬುರಗಿ ಮಹಾನಗರ ಪಾಲಿಕೆ ಕಚೇರಿಯಲ್ಲಿ ಪೂರಕದಾಖಲೆಗಳೊಂದಿಗೆ ಆಕ್ಷೇಪಣೆ ಸಲ್ಲಿಸಬೇಕು. ಕೊನೆಯ ದಿನಾಂಕದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಅವರು ತಿಳಿಸಿದ್ದಾರೆ.

# ಕಲಬುರಗಿ ಕೇಂದ್ರ ಕಾರಾಗೃಹದಲ್ಲಿ ಸಂವಿಧಾನ ದಿನ ಆಚರಣೆ



ಮಲ್ಲಮ್ಮ ನುಡಿ ವಾರ್ತೆ,

**ಕಲಬುರಗಿ:**

ಕಲಬುರಗಿ ಕೇಂದ್ರ ಕಾರಾಗೃಹದ ಲಿಪಿಕ/ ಕಾರ್ಯನಿರ್ವಾಹಕ ಅಧಿಕಾರಿ/ಸಿಬ್ಬಂದಿಗಳು ಬುಧವಾರ ಕಲಬುರಗಿ ಕೇಂದ್ರ ಕಾರಾಗೃಹದಲ್ಲಿ ಸಸಿ ನೆಡುವುದರ ಮೂಲಕ ಸಂವಿಧಾನ ದಿನವನ್ನು ಅರ್ಥ ಪೂರ್ಣವಾಗಿ ಆಚರಿಸಿದರು.

ಇದೇ ಸಂದರ್ಭದಲ್ಲಿ ಸಂಸ್ಥೆಯ ಮುಖ್ಯಸ್ಥರಾದ ಡಾ॥ ಅನಿತಾ ಆರ್. ಅವರು ಕಾರಾಗೃಹದ ಎಲ್ಲಾ ಅಧಿಕಾರಿ/ಸಿಬ್ಬಂದಿಗಳಿಗೆ ಸಂವಿಧಾನದ ಪೀಠಿಕೆಯನ್ನು ಬೋಧಿಸಿದರು. ಈ ಸಂದರ್ಭದಲ್ಲಿ ಸಂಸ್ಥೆಯ ಅಧೀಕ್ಷಕರಾದ ಎಂ.ಹೆಚ್. ಆಶೇಖಾನ್, ಸಹಾಯಕ ಅಧೀಕ್ಷಕರುಗಳಾದ ಬಿ. ಸುರೇಶ, ಚನ್ನಪ್ಪ, ಸಹಾಯಕ ಆಡಳಿತಾಧಿಕಾರಿಯಾದ ಭೀಮಾಶಂಕರ ಡಾಂಗೆ,

ಸಂಸ್ಥೆಯ ಜೈಲರ್‌ಗಳಾದ ಸುನಂದ ವಿ., ಮುಂಡಲಿಕ ಟಿ.ಕೆ. ಶ್ಯಾಮ ಬಿದ್ರಿ, ಶಿಕ್ಷಕರಾದ ನಾಗರಾಜ ಮುಲಗೆ ಹಾಗೂ ಕಾರಾಗೃಹ ಎಲ್ಲಾ ಅಧಿಕಾರಿ, ಸಿಬ್ಬಂದಿಗಳು ಉಪಸ್ಥಿತರಿದ್ದರು.

# ನವೆಂಬರ್ 29 ರಿಂದ ಎನ್.ಎಸ್.ವಿ. ಶಿಬಿರ

ಮಲ್ಲಮ್ಮ ನುಡಿ ವಾರ್ತೆ

**ಕಲಬುರಗಿ:** ರಾಷ್ಟ್ರೀಯ ಆರೋಗ್ಯ ಅಭಿಯಾನದ ಕುಟುಂಬ ಕಲ್ಯಾಣ ಕಾರ್ಯಕ್ರಮದಡಿ ಕಲಬುರಗಿ ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ಎನ್.ಎಸ್.ವಿ. ಸೇವಾ ಸಪ್ತಾಹದ ಹಿನ್ನೆಲೆಯಲ್ಲಿ ಈ ಕೆಳಕಂಡ ದಿನಾಂಕಗಳಂದು ಎನ್.ಎಸ್.ವಿ. (ನೊ–ಸ್ಕಾಲ್ಪೆಲ್ ವ್ಯಾಸೆಕ್ಟಮಿ/ಪುರುಷ ಸಂತಾನ ಶಕ್ತಿ ನಿರೋಧ ಶಸ್ತ್ರಚಿಕಿತ್ಸೆ) ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.

ನವೆಂಬರ್ 29ರಂದು ಚಿತ್ತಾಪುರ ಮತ್ತು ಸೇಡಂ ತಾಲೂಕು ಆಸ್ಪತ್ರೆಯಲ್ಲಿ, ಡಿಸೆಂಬರ್ 1 ರಂದು ಕಲಬುರಗಿಯ ತಾಜನಗರ ಮತ್ತು ತಾರಫೈಲ್‌ದಲ್ಲಿರುವ ನಗರ ಆರೋಗ್ಯ ಕೇಂದ್ರದಲ್ಲಿ, ಡಿಸೆಂಬರ್ 2 ರಂದು ಅಫಜಲಪೂರ ಮತ್ತು ಆಳಂದ ತಾಲೂಕಾ ಆಸ್ಪತ್ರೆ ಹಾಗೂ ಡಿಸೆಂಬರ್ 3 ರಂದು ಚಿಂಚೋಳಿ ಮತ್ತು ಜೇವರ್ಗಿ ತಾಲೂಕಾ ಆಸ್ಪತ್ರೆಗಳಲ್ಲಿ ಈ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ. ಜೇವರ್ಗಿ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯ ಶಸ್ತ್ರ ಚಿಕಿತ್ಸಕರಾದ ಡಾ. ಅಮರಪ್ಪ ಜಂಪಾ ಅವರು ಶಿಬಿರದಲ್ಲಿ ಪಾಲ್ಗೊಳ್ಳುವರು.

ಪುರುಷ ಸಂತಾನಶಕ್ತಿ ನಿರೋಧ ಶಸ್ತ್ರಚಿಕಿತ್ಸೆ ಮೇಲ್ಕಂಡ ದಿನಾಂಕಗಳಂದು ಜಿಲ್ಲಾ ಆಸ್ಪತ್ರೆಯ ನುರಿತ ಶಸ್ತ್ರಚಿಕಿತ್ಸಕ ತಜ್ಞ ವೈದ್ಯರು ಶಿಬಿರ ನೇರವೇರಿಸುವರು. ಶಸ್ತ್ರಚಿಕಿತ್ಸೆಗೆ ಒಳಗೊಳ್ಳುವ ಪ್ರತಿ ಫಲಾನುಭವಿಗಳಿಗೆ 1100 ರೂ. ಮತ್ತು ಪ್ರೋತ್ಸಾಹಕರಿಗೆ 200 ರೂ. ಇಲಾಖೆ ವತಿಯಿಂದ ನೀಡಲಾಗುತ್ತದೆ. ಹೆಸರು ನೊಂದಾಯಿಸಲು ಹಾಗೂ ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಸಮೀಪದ ಸರ್ಕಾರಿ ಆಸ್ಪತ್ರೆ/ ಆಶಾ–ಕಾರ್ಯಕರ್ತೆಯರನ್ನು ಸಂಪರ್ಕಿಸಲು ಕೋರಲಾಗಿದೆ.

# ಬಿ.ವಿ. ಭೂಮರಡ್ಡಿ ಮಹಾವಿದ್ಯಾಲಯದಲ್ಲಿ ಸಂವಿಧಾನ ಅಂಗೀಕಾರ ದಿನಾಚರಣೆ ಸಂವಿಧಾನ ರಾಷ್ಟದ ಆತ್ಮ . ಡಾ. ದೀಪಾ ರಾಗ



ಮಲ್ಲಮ್ಮ ನುಡಿ ವಾರ್ತೆ

**ಬೀದರ :** 26ನೇ ನವ್ಹೆಂಬರ್ 2025 ಗೌರವಾನ್ವಿತ ಹೈದ್ರಾಬಾದ ಕರ್ನಾಟಕ ಶಿಕ್ಷಣ ಸಂಸ್ಥೆಯ ಸದಸ್ಯರು ಹಾಗೂ ಬಿ.ವಿ.ಬಿ. ಶಾಲಾ ಕಾಲೇಜು ಆವರಣದ ಸಂಚಾಲಕರಾದ ಡಾ. ರಜನೀಶ್ ಎಸ್. ವಾಲಿಯವರ ಮಾರ್ಗದರ್ಶನದಲ್ಲಿ ಬೆಳಿಗ್ಗೆ 10.00 ಗಂಟೆಗೆ ಕಾರ್ಯಕ್ರಮವನ್ನು ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ದೀಪಾ ರಾಗ ಡಾ. ಬಿ.ಆರ್. ಅಂಬೇಡ್ಕರವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಅಧ್ಯಕ್ಷತೆಯನ್ನು ವಹಿಸಿ ಮಾತನಾಡುತ್ತಾ ಸಂವಿಧಾನ ರಚನಾ ಸಭೆಯಲ್ಲಿ ಶ್ರೀ ಕೆ.ಎಂ. ಮುನ್ಸಿ, ಶ್ರೀ ಕೆ.ಎಂ. ಪಂತ್ ಹಾಗೂ ಡಾ. ಬಿ.ಆರ್. ಅಂಬೇಡ್ಕರ ಇವರು ಎಲ್ಲಾ ರಾಷ್ಟ್ರ ಸಂವಿಧಾನವನ್ನು ಅಧ್ಯಯನ ಮಾಡಿ ನಮ್ಮ ರಾಷ್ಟ್ರಕ್ಕೆ ಬೇಕಾದ ಅಗತ್ಯ ಕಾನೂನುಗಳನ್ನು ರಚನೆ ಮಾಡಿ ಸುಮಾರು 2 ವರ್ಷ 11 ತಿಂಗಳು 18 ದಿನಗಳು 395 ಮೂಲ ಕಲಂಗಳು ರಚನೆಯಾಗಿ ವಿಶ್ವದ ಬೃಹತ ಸಂವಿಧಾನವೆಂದು ಹೆಸರು ಪಡೆದಿದೆ. 26ನೇ ನವ್ಹೆಂಬರ 1949ರಂದು ಸಾಂಕೇತಿಕವಾಗಿ ಒಪ್ಪಿಗೆ ಸೂಚಿಸಲಾಗಿತ್ತು, ಅದರ ಸವಿನೆನಪಿಗಾಗಿ 1950 ಜನೆವರಿ 26ರಂದು ಸಂವಿಧಾನ ಅಂಗೀಕರಿಸಿ ಗಣರಾಜ್ಯ ದಿನವೆಂದು ಇಂದಿಗೂ ಆಚರಿಸುತ್ತೇವೆ ಎಂದು ಮಾರ್ಮಿಕವಾಗಿ ನುಡಿದರು. ಆಂತರಿಕ ಗುಣಮಟ್ಟ ಭರವಸೆ ಕೋಶ, ಹಾಗೂ ರಾಜ್ಯಶಾಸ್ತ್ರ ವಿಭಾಗದ ಸಂಯುಕ್ತಾಶ್ರಯದಲ್ಲಿ ಸಂವಿಧಾನ ದಿನವನ್ನು ಆಚರಿಸಲಾಯಿತು. ಈ ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಆಂತರಿಕ ಗುಣಮಟ್ಟ ಭರವಸೆ ಕೋಶದ ಅಧಿಕಾರಿಗಳಾದ ಡಾ. ಮಲ್ಲಿಕಾರ್ಜುನ ಕೋಟೆ ಅವರು ಮಾತನಾಡುತ್ತಾ ಆನೆಗಾತ್ರ ಸಂವಿಧಾನ, ಬೃಹತ ಗಾತ್ರದ ಸಂವಿಧಾನ ಈ ಸಂವಿಧಾನ ಗೌರವಿಸುವುದು ಪ್ರತಿಯೊಬ್ಬರ ಕರ್ತವ್ಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಎನ್.ಸಿ.ಸಿ. ಅಧಿಕಾರಿಯಾದ ಶ್ರೀ ಮಾರುತಿ ಭೀಮಣ್ಣಾ ಅವರು ಮಾತನಾಡುತ್ತಾ ನಮ್ಮ ಸಂವಿಧಾನ ಅತ್ಯಂತ ಮೌಲ್ಯಯುತವಾದದ್ದು ಹಾಗೂ ಸಂವಿಧಾನ ಗೌರವಿಸಿದಾಗ ರಾಷ್ಟ್ರಕ್ಕೆ ಗೌರವ ಸಲ್ಲಿಸಿದಂತೆ, ಮೂಲಭೂತ ಹಕ್ಕು, ಮೂಲಭೂತ ಕರ್ತವ್ಯ ರಾಜ್ಯ ನಿರ್ದೇಶಕ ತತ್ವಗಳು ಅಳವಡಿಸಿಕೊಂಡಾಗ ಸದೃಢ ಸಮಾಜವಾಗುತ್ತದೆ ಎಂದು ನುಡಿದರು. ಕಾರ್ಯಕ್ರಮದಲ್ಲಿ ರಾಜ್ಯಶಾಸ್ತ್ರ ವಿಭಾಗದ ಉಪನ್ಯಾಸಕರಾದ ಶ್ರೀ ಸಂದೀಪಕುಮಾರ ವನ್ನಾಳೆ ಅಂಗೀಕಾರ ದಿನದ ಪ್ರತಿಜ್ಞಾ ವಿಧಿ ಬೋಧಿಸಿದರು ಮತ್ತು ಸಂವಿಧಾನ ಎಂದರೆ ಸಮಾನತೆ ಹಾಗೂ ಸ್ವಆಡಳಿತ ನಮ್ಮ ನಡೆ ನುಡಿ ಕಾನೂನಿನ ಚೌಕಟ್ಟಿನಲ್ಲಿ ಹಾಗೂ ಸಂವಿಧಾನ ಬದ್ಧವಾಗಿರಬೇಕೆಂದು ನುಡಿದರು. ರಾಜ್ಯಶಾಸ್ತ್ರದ ವಿಭಾಗದ ಮುಖ್ಯಸ್ಥೆಯಾದ ಶ್ರೀಮತಿ ವಾಣಿಶ್ರೀ ಎನಗುಂದೆಯವರು ಸ್ವಾಗತಿಸಿದರೆ, ಶ್ರೀ ಬಸವರಾಜ ಬಿರಾದಾರ ನಿರೂಪಸಿದರೆ, ಶ್ರೀಮತಿ ವಚನಶ್ರೀ ವಂದಿಸಿದರು.

ಕಾರ್ಯಕ್ರಮದಲ್ಲಿ ಎನ್.ಸಿ.ಸಿ., ಎನ್.ಎಸ್.ಎಸ್., ರೆಡ್‌ಕ್ರಾಸ್, ವಿದ್ಯಾರ್ಥಿಗಳು ಹಾಗೂ ವಿದ್ಯಾರ್ಥಿಗಳು, ವಿದ್ಯಾರ್ಥಿನಿಯರು, ಪ್ರಾಧ್ಯಾಪಕರು ಹಾಗೂ ಸಿಬ್ಬಂದಿ ವರ್ಗದವರು

# ಸಂವಿಧಾನ ಸಮರ್ಪಣಾ ದಿನಾಚರಣೆ ಕಾರ್ಯಕ್ರಮ



**ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:**

ನಗರದ ಕೆಕೆಆರ್‌ಟಿಸಿ ವಿಭಾಗ –1.ರ ಬಯಲು ರಂಗ ಮಂದಿರದಲ್ಲಿ ಕೆ.ಎಸ್.ಆರ್.ಟಿ.ಸಿ.ನಿಗಮಗಳ ಎಸ್.ಸಿ./ ಎಸ್.ಟಿ. ನೌಕರರ ಕ್ಷೇಮಾಭಿವೃದ್ಧಿ ಸಂಘ (ರಿ.) ರಾಜ್ಯ ಸಮಿತಿ ಸಂಯೋಜನೆಯೊಂದಿಗೆ ಕೆ.ಕೆ.ಆರ್.ಟಿ.ಸಿ. ಎಸ್.ಸಿ/ಎಸ್.ಟಿ. ನೌಕರರ ಕ್ಷೇಮಾಭಿವೃದ್ಧಿ ಸಂಘ (ರಿ.) ಕಲಬುರಗಿ ವತಿಯಿಂದ ರಾಜ್ಯ ಮಟ್ಟದ ಡಾ. ಬಿ. ಆರ್. ಅಂಬೇಡ್ಕರ್ ರವರ 134ನೇ ಜಯಂತ್ಯೋತ್ಸವ ಹಾಗೂ ಸಂವಿಧಾನ ಸಮರ್ಪಣಾ ದಿನಾಚರಣೆ ಕಾರ್ಯಕ್ರಮವನ್ನು ಶಾಸಕ ಅಲ್ಲಮ ಪ್ರಭು ಪಾಟೀಲ್ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಶ್ರೀ ಪ.ಪೂ. ಹವಾಮಲ್ಲಿನಾಥ ಮಹಾರಾಜರು ನಿರಗುಡಿ, ಸಂಜಯ ಮಾಕಲ್, ಡಾ. ಎಂ ವೆಂಕಟಸ್ವಾಮಿ, ಎಂ. ಲಗುಮಯ್ಯ, ಕೆ.ವಿ ಶಿವಕುಮಾರ, ಬ್ಯಾಟರಾಜು, ಬಿ ಪ್ರಸಾದ, ಎಂ ಶಾರಧಯ್ಯ, ಕೆ ಎಂ ಯೋಗಾನಂದ, ಚಂದ್ರಕಾಂತ ಪುಲೇಕರ್, ಚಂದು.ಕೆ, ಸುನೀಲಕುಮಾರ ಚಂದರಗಿ, ಡಾ. ಹೂವಣ್ಣ ಎಸ್ ಸಕ್ಸಾಲ್, ಸಿದ್ರಾಮ ಬನಸೋಡೆ, ಟಿ. ಬಿ. ಪ್ರೇಮನಾಥ, ಶಾಂತಕುಮಾರ ಎಸ್.ಚಾಂಬಾಳಕರ್, ದೇವರಾಜ ಎಸ್.ಚೌರ, ಚಂದ್ರಕಾಂತ ಗದ್ದಗಿ, ಮಾರುತಿ ಶಾಕಾ, ರಾಜಕುಮಾರ ಎಂ. ಗೌತಮ್ (ಯಕ್ಕಂಚಿ), ಚೆನ್ನಾ ಬಾಸಿಂ, ಶಿವಪುತ್ರಪ್ಪ ಬೆಳಮಗಿ, ಬಸವರಾಜ ಕಣ್ಣೆ, ಜಯರಾಮ ರಾಠೋಡ್, ವಿಠ್ಠಲ ಭೀಮನ್, ದಿನೇಶ ದೊಡ್ಡಮನಿ, ಪ್ರಕಾಶ ಅವರಾಧಕರ್ ಸೇರಿದಂತೆ ಇತರರು ಇದ್ದರು.

# ಸೇವೆಯಲ್ಲಿ ಹಿರಿಯ ಅಧಿಕಾರಿಗಳೊಂದಿಗೆ ಸಿಬ್ಬಂಧಿಗಳ ಸಹಕಾರವೂ ಅತ್ಯವಶ್ಯವಾಗಿದೆ : ಐ.ಜಿ.ಪಿ. ವರ್ತಿಕಾ



ಮಲ್ಲಮ್ಮ ನುಡಿ ವಾರ್ತೆ ರಾಯಚೂರು:

ನಗರದ ಪೋಲೀಸ್ ಕವಾಯತ್ ಮೈದಾನದಲ್ಲಿ ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳಾದ ಎಂ. ಪುಟ್ಟಮಾದಯ್ಯರವರ ಅಧ್ಯಕ್ಷತೆ, ಹೆಚ್ಚುವರಿ ಪೋಲೀಸ್ ಅಧೀಕ್ಷಕರು ಭಾಗ 1, ಜಿ. ಹರೀಶ, ಭಾಗ 2 ಅಧೀಕ್ಷಕರಾದ ಕುಮಾರಸ್ವಾಮಿ, ಉಪಾಧೀಕ್ಷಕರಾದ ಈ. ಶಾಂತವೀರ, ಲಿಂಗಸುಗೂರು ಡಿ.ವೈ.ಎಸ್.ಪಿ. ದತ್ತಾತ್ರೇಯ್ಯ ಕಾರ್ನಾಡ್, ಸೈಬರ್ ಕ್ರೈಮ್ ಡಿ.ವೈ. ಎಸ್.ಪಿ. ಮಂಜುನಾಥ ಹುಗಿಬಂಡೆ ಇವರು ನೇತೃತ್ವದಲ್ಲಿ ದಿ.23 ರಿಂದ 25 ರವರೆಗೆ ಹಮ್ಮಿಕೊಂಡಿದ್ದ ಜಿಲ್ಲಾ ಪೋಲೀಸ್ ವಾರ್ಷೀಕ ಕ್ರೀಡಾಕೂಟಗಳು ಅದ್ದೂರಿಯಾಗಿ ತೆರೆ ಕಂಡವು.

ಈ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಬಳ್ಳಾರಿ ವಲಯದ ಐ.ಜಿ.ಪಿ. ಅಧಿಕಾರಿಗಳಾದ ವರ್ತಿಕಾ ಕಾಟಿಯಾರರವರು ಆಗಮಿಸಿದ್ದರು.

ದಿ. 25 ರಂದು ಸಾಯಂಕಾಲ 05 ಗಂಟೆಯಿಂದ ರಾತ್ರಿ 09 ಗಂಟೆಯವರೆಗೆ ವಿವಿದ ಕ್ರೀಡೆಗಳಲ್ಲಿ ಭಾಗವಹಿಸಿ ವಿಜೇತರಾದ ಏಳು ತಾಲೂಕುಗಳ ಪೋಲೀಸ್ ಸಿಬ್ಬಂಧಿಗಳಿಗೆ ಐ.ಜಿ.ಪಿ. ವರ್ತಿಕಾ ಕಟಾರಿಯಾರವರು ಬಹುಮಾನ ವಿತರಣೆ ನೆರವೇರಿಸಿದರು, ನೆನಪಿನ ಕಾಣಿಕೆಯೊಂದಿಗೆ ಕೆಲವು ಪುರುಷ ಹಾಗೂ ಮಹಿಳಾ ತಂಡಗಳಿಗೆ ನಗದು ಬಹುಮಾನವನ್ನು ವಿತರಿಸಿದರು.

ಈ ಸಂದರ್ಭದಲ್ಲಿ ಸದಾರ ಬಜಾರ ಠಾಣೆಯ ಸಿ.ಪಿ.ಐ. ಉಮೇಶ ಕಾಂಬ್ಳೆಯವರು ಸತ್ಯಹರಿಶ್ಚಂದ್ರ ಕನ್ನಡ ಚಲನಚಿತ್ರದ "ಕುಲದಲ್ಲಿ ಕೀಳ್ಯಾವುದೋ ಹುಚ್ಚಪ್ಪ... ಮತದಲ್ಲಿ ಮೇಲ್ಯಾವುದೋ" ಹಾಡಿನ ಉಡುಪನ್ನು ಧರಿಸಿ ತಮ್ಮ ಠಾಣೆಯ ತಂಡದೊಂದಿಗೆ ನೃತ್ಯವನ್ನು ಪ್ರಸ್ತುತ ಪಡಿಸಿದ್ದು ನೆರೆ ಅಧಿಕಾರಿಗಳ ಮತ್ತು ಸಾರ್ವಜನಿಕರಿಗೆ ಚಲನಚಿತ್ರವನ್ನೇ ವೀಕ್ಷಿಸಿದಂತ ಅನುಭವವಾಯಿತು, ಇದರೊಂದಿಗೆ ಎ.ಎಸ್.ಐ. ಅಧಿಕಾರಿ ಶ್ಯಾಮ ಮತ್ತು ಹೆಚ್.ಸಿ. ಶಿವರಾಜರವರು ಬಬ್ರುವಾಹನ ಚಲಚಿತ್ರದ ಸಂಭಾಷಣೆಯನ್ನು ಪ್ರಸ್ತುತ ಪಡಿಸಿದ್ದು ನೆರೆದ ಜನರನ್ನು ಮನರಂಜಿಸಿತು.

ನಂತರ ಎಸ್.ಪಿ. ಪುಟ್ಟಮಾದಯ್ಯರವರು ಐ.ಜಿ.ಪಿ. ವರ್ತಿಕಾ ಕಟಾರಿಯಾರವರಿಗೆ ನೆನಪಿನ ಕಾಣಿಕೆ ನೀಡಿ ಸತ್ಕರಿಸಿದರು.

ಐ.ಜಿ.ಪಿ.ಯವರೂ ಸಹಿತ ಎಸ್.ಪಿ.ಯವರಿಗೆ ನೆನಪಿನ ಕಾಣಿಕೆ ನೀಡಿ ಜಿಲ್ಲೆಯಲ್ಲಿ ತಾವು ಸಲ್ಲಿಸುತ್ತಿರುವ ಸೇವೆ ಮಹತ್ತರವಾದುದಾಗಿದೆ, ನಿಮ್ಮ ಸೇವೆ ಮುಂದುವರಿಯಲಿ ಎಂದು ಅಭಿನಂದಿಸಿದರು.

ನಂತರ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಐ.ಜಿ.ಪಿ. ವರ್ತಿಕಾರವರು ಜಿಲ್ಲೆಯಲ್ಲಿ ಇಡೀ ವರ್ಷದಿಂದ ಸಲ್ಲಿಸಿದ ಕಾರ್ಯ ಉತ್ತಮ ಸೇವೆಯಾಗಿದೆ, ಗಣೇಶ ಮತ್ತು ಈದ್ ಮಿಲಾದ ಹಾಗೂ ಇನ್ನಿತರ ಹಬ್ಬಗಳಿರಬಹುದು, ವಿವಿದ ಜಾತ್ರೆ ಸಮಾರಂಭಗಳಲ್ಲಿ ತಾವು ಹೊದಗಿಸಿದ ಭದ್ರತೆ ತುಂಬಾ ಸೂಕ್ತವಾಗಿದೆ, ಹಾಗೆ ಸದಾರ ಬಜಾರ ಪೋಲೀಸ್ ಠಾಣೆಯು 2025 ಸಾಲಿನ ಅತ್ಯುತಮ ಕಾನೂನು ಸುವ್ಯವಸ್ಥೆಯ ಠಾಣೆ ಎಂದು ಹೇಳಲು ಸಂತೋಷವಾಗುತ್ತದೆ, ಕ್ರೀಡೆಗಳು ಪೋಲೀಸ್ ಸಿಬ್ಬಂಧಿಗಳಿಗೆ ಅತೀ ಅವಶ್ಯವಾಗಿವೆ, ಹಾಗೇ ಸರ್ವರೂ ಒಂದು ಕಡೆ ಸೇರಿ ಸಮಾಲೋಚಿಸಲೂ ಒಂದು ಸುಸಂದರ್ಭವಾಗಿದೆ, ಹಾಗೇ ಯಾವುದೇ ಭದ್ರತೆಗಳನ್ನು ನೀಡುತ್ತಿರುವಾಗ ಹಿರಿಯ ಅಧಿಕಾರಿಗಳೊಂದಿಗೆ ಸಿಬ್ಬಂಧಿಗಳ ಪಾತ್ರವೂ ಅತ್ಯಂತ ಮುಖ್ಯಪಾತ್ರ ವಹಿಸುತ್ತದೆ ಆದುದರಿಂದ ಸರ್ವರೂ ತಮ್ಮ ಜವಾಬ್ದಾರಿಗಳನ್ನು ಅಚ್ಚುಕಟ್ಟಾಗಿ ನಿಭಾಯಿಸಬೇಕಾಗಿದೆ, ವಿವಿದ ಕ್ರೀಡೆಗಳಲ್ಲಿ ಭಾಗವಹಿಸಿದ ಸರ್ವರಿಗೂ ನನ್ನ ಅಭಿನಂದನೆಗಳು ಎಂದು ಹೇಳಿದರು.

ಈ ಸಂದರ್ಭದಲ್ಲಿ ಪೋಲೀಸ್ ಇಲಾಖೆಯ ಹಿರಿಯ ಅಧಿಕಾರಿಗಳು, ಹಿರಿಯ ನಿವೃತ್ತ ಅಧಿಕಾರಿಗಳು, ಪೋಲೀಸ್ ಅಧಿಕಾರಿಗಳ ಕುಟುಂಬಸ್ತರು, ಮಹಿಳಾ ಸಿಬ್ಬಂಧಿಗಳು, ಸಾರ್ವಜನಿಕರು ಮಕ್ಕಳು ಉಪಸ್ಥಿತರಿದ್ದರು.

## ಫೆಡರಲ್ ಶಿಕ್ಷಣ ಸಂಸ್ಥೆನಲ್ಲಿ: ಸಂವಿಧಾನ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ ರಾಯಚೂರು:

ನಗರದ ಹೊರಹೊಲೆಯ ಯರಮರಸ ಕ್ಯಾಂಪ್‌ನಲ್ಲಿರುವ ಫೆಡರಲ್ ಶಿಕ್ಷಣ ಸಂಸ್ಥೆಯ ಸಮೂಹಗಳ ವತಿಯಿಂದ ಸಂವಿಧಾನ ದಿನಾಚರಣೆ ಆಚರಿಸಲಾಯಿತು.

ಸಂಸ್ಥೆಯ ಅಧ್ಯಕ್ಷರಾದ ಮೊಹ್ಮದ್ ಅಬ್ದುಲ್ ಹೈ ಫೀರೋಜ್ ಅವರು ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು.

ಮತ್ತು ಪೂಜೆ ಕಾರ್ಯಕ್ರಮವನ್ನು ಶಿಕ್ಷಕಿ

ಅಂಬಿಕಾ ಮಾಡಿದರು. ಪ್ರಜಾಪ್ರಭುತ್ವದ ಸಂವಿಧಾನ ಪೀಠಿಕೆಯನ್ನು ಸಮೂಹಕವಾಗಿ ಓದುವದರ ಮೂಲಕ ಸಂವಿಧಾನದ ಮೌಲ್ಯಗಳು ಹಾಗೂ ಆಶಾಯಗಳ ಬಗ್ಗೆ ಚರ್ಚೆ, ರಸಪ್ರಶ್ನೆಗಳ ಮೂಲಕ ಕಾರ್ಯಕ್ರವನ್ನು ಮಾಡಿದರು.ಸಂಸ್ಥೆಯ ಅಧ್ಯಕ್ಷರಾದ ಮೊಹಮ್ಮದ್ ಅಬ್ದುಲ್ ಹೈ ಫೀರೋಜ್ ರವರು ಭಾರತ ಸಂವಿಧಾನದ ದೇಹ ದೋರಣೆಗಳನ್ನು ಮತ್ತು ಸಂವಿಧಾನದ ಪೀಠಿಕೆಗೆ ಅನುಗುಣವಾಗಿ ಸಮಾನತೆ, ಸ್ವತಂತ್ರ, ಧಾರ್ಮಿಕ, ಮತ್ತು ಭ್ರಾತೃತ್ವದ ಬಗ್ಗೆ ಕುಲಂಕೂಷವಾಗಿ ತೀಳಿಸಿದರು. ಈ ಕಾರ್ಯಾಕ್ರಮದಲ್ಲಿ ಕಾರ್ಯನಿರ್ವಾಹಕ ನಿರ್ದೇಶಕಿ ಶ್ರೀಲೇಖಾ ಹಾಗೂ ಶಾಲಾ ಮುಖ್ಯಗುರುಗಳು ಹಾಗೂ ಶಾಲೆಯ ಸಹ ಶಿಕ್ಷಕಿಯರು-ಭೋದಕೇತ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು. ಸ್ನೇಹಾ ಪ್ರೀಯಾ ನಿರೂಪಣೆಯನ್ನು ಮತ್ತು ವಂದನಾರ್ಪಣೆ ಸಲ್ಲಿಸಿದರು.

## ಗುರುಗುಂಟ ಶ್ರೀ ಅಮರೇಶ್ವರ ಸುಕ್ಷೇತ್ರದಲ್ಲಿ ವಿಜೃಂಭಣೆಯ ಕಾರ್ತಿಕೋತ್ಸವ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು:ಲಿಂಗಸಗುರುತಾಲ್ಲೂಕು, ಗುರುಗುಂಟ ಹಿಂದೂಧರ್ಮದಲ್ಲಿಯ ಅತ್ಯಂತ ಪುಣ್ಯಪರವಶ ಕಾರ್ತಿಕ ಮಾಸದ ಅಂಗವಾಗಿ ಗುರುಗುಂಟ ಶ್ರೀ ಅಮರೇಶ್ವರ ಸುಕ್ಷೇತ್ರದಲ್ಲಿ ದೀಪೋತ್ಸವ, ರಥೋತ್ಸವ ಹಾಗೂ ಪಲ್ಲಕ್ಕಿ ಉತ್ಸವ ಕಾರ್ಯಕ್ರಮಗಳು ಭಕ್ತರ ಭಕ್ತಿ ತೊಡಗಿಸಿಕೊಂಡ ಭಾಗವಹಿಸುವಿಕೆಯಿಂದ ಅದ್ದೂ-ರಿಯಾಗಿ ಜರಗಿದವು.



ನವಂಬರ್ 25ರಂದು ರಾತ್ರಿ 8 ಗಂಟೆಗೆ ಶ್ರೀಗಜಗಂಡ ಶಿವಾಚಾರ್ಯರ ಸಾನಿಧ್ಯದಲ್ಲಿ ದೀಪೋತ್ಸವ ಹಾಗೂ ಆಕಾಶದೀಪಬಿಡುಗಡೆಕಾರ್ಯಕ್ರಮಗಳು ನಡೆದವು. ಮಹಿಳೆಯರು, ಮಕ್ಕಳು ಸೇರಿದಂತೆ ಎಲ್ಲ ಭಕ್ತರು ಕೈಯಲ್ಲಿ ದೀಪ ಹಿಡಿದು ಜೀವನದ ಅಂ-ಧಕಾರ ದೂರವಾಗಿ, ಜ್ಞಾನ ಬೆಳಕು ತುಂಬಲಿ ಎಂಬ ಸಂಕಲ್ಪದೊಂದಿಗೆ ಪ್ರಾರ್ಥಿಸಿದರು.ನವಂಬರ್ 26ರಂದು ಸಂಜೆ 5 ಗಂಟೆಗೆ ನಡೆದ ಉತ್ಸವ ರಥೋತ್ಸವ ಹಾಗೂ ಪಲ್ಲಕ್ಕಿ ಉತ್ಸವ ಕಾರ್ಯಕ್ರಮಗಳಲ್ಲಿ ಭಕ್ತರು ದೊಡ್ಡ ಸಂಖ್ಯೆಯಲ್ಲಿ ಪಾಲ್ಗೊಂಡರು.

ಭಕ್ತರು ಸತಿ ಸಾಲಿನಲ್ಲಿ ನಿಂತು ಶ್ರೀ ಅಮರೇಶ್ವರಸ್ವಾಮಿಯ ದರ್ಶನ ಪಡೆದು,ತಮ್ಮ ಇಷ್ಟಾರ್ಥಗಳ ಈಡೇರಿಕೆಗೆ ದೇವರಲ್ಲಿ ಪ್ರಾರ್ಥಿಸಿದರು.ಆರತಿಗಳು ಜರುಗಿದಾಗ ಭಕ್ತರ "ಓಂ ನಮಃ ಶಿವಾಯ"ಘೋಷಣೆಗಳಿಂದ ಪವಿತ್ರ ವಾತಾವರಣ ಸೃಷ್ಠಿಯಾಯಿತು. ಕಾರ್ತಿಕ ಮಾಸವು ದೀಪ ಹಚ್ಚುವ, ಶಿವ-ವಿಷ್ಣು ಆರಾಧನೆಗೆ ಅತ್ಯಂತ ಮಹತ್ವ ಪಡೆದಿದ್ದು,

ಈ ಸಮಯದಲ್ಲಿ ದೀಪದ ಬೆಳಕು ಪುಣ್ಯ, ಶಾಂತಿ ಮತ್ತು ಆಧ್ಯಾತ್ಮಿಕತೆ ತಂದುಕೊಡುತ್ತದೆ ಎಂಬ ನಂಬಿಕೆ ಇದೆ.ಭಕ್ತರ ಹರ್ಷಭರಿತ ಪಾಲ್ಗೊಳ್ಳುವಿಕೆಯಿಂದ ಈ ವರ್ಷದ ಕಾರ್ತಿಕೋತ್ಸವ ಯಶಸ್ವಿಯಾಗಿ ಜರುಗಿತು ಎಂದು ಆಯೋಜ-ಕರು ತಿಳಿಸಿದ್ದಾರೆ.

# ಅದ್ದೂರಿಯಾಗಿ ನಡೆದ ಚನ್ನವೀರೇಶ್ವರ ಜಾತ್ರಾ ಮಹೋತ್ಸವ.



ಸಿರವಾರ.ನ.26- ಪಟ್ಟಣದ ಗದ್ದಿಗೆ ಮಠದ ಶ್ರೀ ಚನ್ನವೀರೇಶ್ವರ ಜಾತ್ರೆ ಮಹೋತ್ಸವದ ಅಂಗವಾಗಿ ಉಚ್ಛಾಯ ಮಹೋತ್ಸವವು ಮಂಗಳವಾರ ಅದ್ದೂ-ರಿಯಾಗಿ ನಡೆಯಿತು.

ಕಾರ್ತೀಕ ಮಾಸದ ಅಂಗವಾಗಿ ಒಂಭತ್ತು ದಿನಗಳ ಪ್ರತಿದಿನ ಸಂಜೆ ಈಶ್ವರ ಹಾಗು ಗುರು ಚನ್ನವೀರೇಶ್ವರ ಸ್ವಾಮಿಯ ಮೂರ್ತಿಗಳಿಗೆ ರುದ್ರಾಭಿಷೇಕ, ಪಲ್ಲಕ್ಕಿ, ನಂದಿಕೋಲು ಸೇವೆ, ಪುರವಂತಿಕೆ, ಹಾಗು ಪ್ರಸಾದ ಸೇವೆಗಳು ನಡೆದವು.

8 ನೇ ದಿನವಾದ ಸೋಮವಾರ ನಂದಿ ವಾಹನ ಮೆರವಣಿಗೆ, ಮಂಗಳವಾರ ಮಹಿಳೆಯರ ಕಳಸ, ನಂದಿಕೋಲ ಸೇವೆ,ಪುರವಂತಿಕೆ,ಬಾಜಿ ಭಜಂತ್ರಿಯೊಂದಿಗೆ ಉಚ್ಛಾಯ ಮಹೋತ್ಸವ ನೂರಾರು ಭಕ್ತರ ನಡುವೆ ಅದ್ದೂರಿಯಾಗಿ ನಡೆಯಿತು.

## ವಿಶೇಷ ಶಿಬಿರ ನವೆಂಬರ್ 28ಕ್ಕೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು: ದೀರ್ಘಕಾಲದವರೆಗೆ ಹಕ್ಕು ಪಡೆಯದೆ ಉಳಿದಿರುವ ಬ್ಯಾಂಕ್ ಠೇವಣಿಗಳು, ವಿಮಾ ಕಂತುಗಳು ಮತ್ತು ಷೇರುಗಳನ್ನು ಅವುಗಳ ಮಾಲಿಕರು ಅಥವಾ ಕಾನೂನು ಬದ್ದ ವಾರಸುದಾರರಿಗೆ ಹಸ್ತಾಂತರಿಸುವ ಶಿಬಿರವನ್ನು ನವೆಂಬರ್ 28 ರಂದು ಮಧ್ಯಾಹ್ನ 11ಕ್ಕೆ ಜಿಲ್ಲಾ ಪಂಚಾಯತ್ ಕಚೇರಿ ಸಭಾ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಈಶ್ವರ ಕಾಂದೂ, ಲೀಡ್ ಬ್ಯಾಂಕ್ ಮ್ಯಾನೇಜರ್ ಪಾಂಡಪ್ಪ ಆರ್.ಬಿ., ಮ್ಯಾನೇಜರ್ ಶ್ರೀ ಪ್ರಭಾಕರನ್ ಉಪಸ್ಥಿತರಿರುವರು.ಈ ಶಿಬಿರವು ಭಾರತದ ಹಣಕಾಸು ಸಚಿವಾಲಯದ ಮಾರ್ಗಸೂಚಿಗಳ ಪ್ರಕಾರ ಎಲ್ಲಾ ಬ್ಯಾಂಕಿಂಗ್, ವಿಮೆ ಮತ್ತು ಇತರ ವಲಯಕ್ಕೆ ಸಂಬಂಧಿಸಿದ ಕಚೇರಿ ಶಾಖೆಗಳಲ್ಲಿ ಡಿಸೆಂಬರ್ 31ರವರೆಗೆ ಮುಂದುವರೆಯುತ್ತದೆ. ಖಾತೆದಾರರು ಅಥವಾ ಕಾನೂನು ಬದ್ಧ ವಾರಸುದಾರರು ಬ್ಯಾಂಕಿನಲ್ಲಿ ಸತತ 10 ವರ್ಷಗಳಿಗೂ ಹೆಚ್ಚು ಕಾಲ ನಿಷ್ಕ್ರಿಯವಾಗಿರುವ ಖಾತೆಗಳಲ್ಲಿನ ಹಣ ಮತ್ತು ಕ್ಲೇಮ್ ಮಾಡದ ಠೇವಣಿಗಳನ್ನು ಕ್ಲೇಮ್ ಮಾಡಬಹುದು. ಬ್ಯಾಂಕಿಂಗ್ ವಲಯ, ವಿಮಾ ವಲಯ, ಹಣಕಾಸು ವಲಯ ಮತ್ತು ಇತರ ವಲಯಗಳ ಅಧಿಕಾರಿಗಳು ಶಿಬಿರದಲ್ಲಿ ಭಾಗವಹಿಸಿ ಸಲಹೆ ನೀಡಲಿದ್ದಾರೆ. ಬ್ಯಾಂಕಿನಲ್ಲಿ 10 ವರ್ಷಗಳಿಗೂ ಹೆಚ್ಚು ಕಾಲ ನಿಷ್ಕ್ರಿಯವಾಗಿರುವ ಮತ್ತು ಕ್ಲೇಮ್ ಮಾಡದ ಖಾತೆಗಳು ಮತ್ತು ಠೇವಣಿಗಳ ವಿವರಗಳನ್ನು http?://udgam.rbi.org.in ನಲ್ಲಿ ಕಾಣಬಹುದು.

ಸೂಕ್ತ ಗುರುತಿನ ದಾಖಲೆಗಳು ಮತ್ತು ಪುರಾವೆಗಳೊಂದಿಗೆ ಶಿಬಿರದಲ್ಲಿ ಭಾಗವಹಿಸುವ ಮೂಲಕ ಅಗತ್ಯ ಸಲಹೆಯನ್ನು ಪಡೆಯಬಹುದು ಮತ್ತು ಹಕ್ಕು ಪಡೆಯದ ಮೊತ್ತವನ್ನು ಮರುಪಡೆಯಲು ಈ ಶಿಬಿರವನ್ನು ಬಳಸಿಕೊಳ್ಳಬಹುದು ಎಂದು ಲೀಡ್ ಬ್ಯಾಂಕ್ ಪ್ರಕಟಣೆ ತಿಳಿಸಿದೆ.

## ಯುವಸ್ಫೋಟ ನವಭಾರತ ಸೇವಾ ಟ್ರಸ್ಟ್ ಉದ್ಘಾಟನೆ

ಮಲ್ಲಮ್ಮ ನುಡಿ ವಾರ್ತೆ

ದೇವದುರ್ಗ:ಪಟ್ಟಣದ ಖೇಣೇದ್ ಫಂಕ್ಷನ್ ಹಾಲ್‌ನಲ್ಲಿ ನ.28ರಂದು ಬೆಳಗ್ಗೆ 10.30ಕ್ಕೆ ಯುವಸ್ಫೋಟ ನವಭಾರತ ಸೇವಾ ಟ್ರಸ್ಟ್ ಉದ್ಘಾಟನೆ ಹಾಗೂ ವಿವಿಧ ಸಾಧಕರಿಗೆ ಸಮಾಜಸೇವಾ ಪ್ರಶಸ್ತಿ ಪ್ರದಾನ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಟ್ರಸ್ಟ್ ಅಧ್ಯಕ್ಷ ಆದರ್ಶ ನಾಯಕ ಹೇಳಿದರು.



ಶಾಸಕಿ ಕರೆಮ್ಮಜಿ.ನಾಯಕ ಹಾಗೂ ಮಾಜಿ ಸಂಸದ ಬಿ.ವಿ.ನಾಯಕ ಜಂಟಿಯಾಗಿ ಕಾರ್ಯಕ್ರಮ ಉದ್ಘಾಟಿಸುವರು. ಜಿಪಂ ಎಇಇ ವೆಂಕಟೇಶಗಲಗ ವೆಂಕಟೇಶಗಳಿಗೆ, ಟಿಎಪಿಸಿಎಂಎಸ್ ಅಧ್ಯಕ್ಷ ಶರಣಗೌಡ ಮದರಕಲ್ ಜ್ಯೋತಿ ಬೆಳಗುವರು. ಎಸ್ಪಿ ಎಂ.ಪುಟ್ಟಮಾದಯ್ಯ ಬ್ಯಾನರ್ ಬಿಡುಗಡೆ ಮಾಡುವರು. ಸಚಿವ ಎನ್.ಎಸ್.ಬೋಸರಾಜು, 3

ಜಿಲ್ಲಾಧಿಕಾರಿ ನಿತೀಶ್ ಕೆ. ಸಂಸದ ಜಿ.ಕುಮಾರನಾಯಕ, ಜಿಪಂ ಸಿಇಒ ಈಶ್ವರ ಕಾಂದೂ ಮುಖ್ಯ ಅತಿಥಿಯಾಗಿ ಭಾಗವಹಿಸುವರು. ಹೋರಾಟಗಾರ ಅಂಬಣ್ಣ ಅರೋಲಿಕರ್ ಉಪನ್ಯಾಸ ನೀಡುವರು. ಆದರ್ಶ ನಾಯಕ ಅಧ್ಯಕ್ಷತೆ ವಹಿಸುವರು. ಅತಿಥಿಗಳಾಗಿ ತಹಸೀಲ್ದಾರ್ ನಾಗಮ್ಮ ಕಟ್ಟಿಮನಿ, ತಾಪಂ ಇಒ ಬಸವರಾಜ ಹಳ್ಳಿ, ಇಒ ಬಸವರಾಜ ಹಟ್ಟಿ, ಸಮಾಜ ಕಲ್ಯಾಣಾಧಿಕಾರಿ ರಾಜ್ ಕುಮಾರ್ ಡೋಣಿ, ಅರಕೇರಾ ತಾಪಂ ಇಒ

ಅಣ್ಣರಾವ್ ನಾಯಕ, ಪುರಸಭೆ ಮುಖ್ಯಾಧಿಕಾರಿ ಹಂಪಯ್ಯನಾಯಕ, ಮುಖ್ಯಾಧಿಕಾರಿ ಪಿಐಎಸ್.ಮಂಜುನಾಥ, ಸಿಪಿಐ ಗುಂಡೂರಾವ್, ವಿವಿಧ ಇಲಾಖೆ ಅಧಿಕಾರಿಗಳಾದ ಬಾಬಣ್ಣ,ಶ್ರೀನಿವಾಸ್ ನಾಯಕ, ಬಾಬಣ್ಣ, ಮಂಜುಳಾ ಅಸುಂಡಿ,ಬನ್ನಪ್ಪ, ಬಸವವರಾಜ, ಶಿವರಾಜ ಪುಜಾರಿ, ಮಹಮ್ಮದ್ ಅಲಿಯುದ್ದೀನ್ ಭಾಗವಹಿಸಲಿದ್ದಾರೆ ಎಂದರು.

ಮುಖಂಡರಾದ ಶಾಂತಕುಮಾರ ಹೊನ್ನಟಗಿ,ವೆಂಕಟೇಶ ರಾಠೋಡ್ ಇದ್ದರು.

# ಅಸ್ಮಿತಾ ಅಥ್ಲೆಟಿಕ್ಸ್ ಲೀಗ್ 2025-26: 28ರಂದು ಜಿಲ್ಲಾ ಮಟ್ಟದ ಕ್ರೀಡಾಕೂಟ



ರಾಯಚೂರು: 14 ಮತ್ತು 16 ವರ್ಷದೊಳಗಿನ ಬಾಲಕಿಯರಿಗಾಗಿ ಜಿಲ್ಲಾ ಮಟ್ಟದ ಅಸ್ಮಿತಾ ಅಥ್ಲೆಟಿಕ್ಸ್ ಲೀಗ್ 2025-26 ಕ್ರೀಡಾಕೂಟವನ್ನು ನವೆಂಬರ್ 28ರಂದು ನಗರದ ಮಹಾತ್ಮಾ ಗಾಂಧಿ ಸ್ಟೇಡಿಯಂನಲ್ಲಿ ಆಯೋಜಿಸಲಾಗಿದೆ. ಖೇಲೋ ಇಂಡಿಯಾ, ರಾಷ್ಟ್ರೀಯ ಯುವ ಕಾರ್ಯಕ್ರಮ, ಕ್ರೀಡಾ ಇಲಾಖೆ, ಕರ್ನಾಟಕ ಅಥ್ಲೆಟಿಕ್ಸ್ ಅಸೋಸಿಯೇಷನ್ ಹಾಗೂ ರಾಯಚೂರು ಜಿಲ್ಲಾ ಅಥ್ಲೆಟಿಕ್ಸ್ ಅಸೋಸಿಯೇಷನ್ ಸಂಯುಕ್ತವಾಗಿ ಈ ಕ್ರೀಡಾಕೂಟವನ್ನು ಹಮ್ಮಿಕೊಂಡಿವೆ ಎಂದು ಜಿಲ್ಲಾ ಅಥ್ಲೆಟಿಕ್ಸ್ ಅಸೋಸಿಯೇಷನ್ ಪ್ರತಿನಿಧಿ ಎನ್. ಶ್ರೀನಿವಾಸ ರೆಡ್ಡಿ ಪತ್ರಿಕಾ ಗೋಷ್ಠಿಯಲ್ಲಿ ಹೇಳಿದರು.

ಪಾಲ್ಗೊಳ್ಳಬಹುದಾದವಯೋಮಿತಿ:

14 ವರ್ಷದೊಳಗಿನ ಬಾಲಕಿಯರು: 21-12-2011 ರಿಂದ 20-12-2013ರ ನಡುವೆ ಜನಿಸಿದವರು

16 ವರ್ಷದೊಳಗಿನ ಬಾಲಕಿಯರು: 21-12-2009 ರಿಂದ 20-12-2011ರ ನಡುವೆ ಜನಿಸಿದವರು

ಆಸಕ್ತ ಶಾಲಾ ವಿದ್ಯಾರ್ಥಿನಿಯರು ತಮ್ಮ ಜನನ ಪ್ರಮಾಣ ಪತ್ರ ಹಾಗೂ ಆಧಾರ್ ಕಾರ್ಡ್ ಸೇರಿದಂತೆ ಅಗತ್ಯ ದಾಖಲೆಗಳೊಂದಿಗೆ ಹೆಸರು ನೋಂದಾಯಿಸಬೇಕಾಗಿದೆ ಎಂದು ಅವರು ತಿಳಿಸಿದರು.

ಕ್ರೀಡೆಗಳ ವಿವರ

14 ವರ್ಷದೊಳಗಿನ ಬಾಲಕಿಯರಿಗೆ:

ಟ್ರಯಥ್ಲಾನ್‌ಂ: 60 ಮೀ, ಲಾಂಗ್ ಜಂಪ್ (5 ಮೀ ಅಪ್ರೋಚ್), ಹೈಜಂಪ್ (ಸಿಜರ್)

ಟ್ರಯಥ್ಲಾನ್‌ಃ: 60 ಮೀ, ಲಾಂಗ್ ಜಂಪ್ (5 ಮೀ ಅಪ್ರೋಚ್), ಬ್ಯಾಕ್ ಥ್ರೋ (1 ಕೆ.ಜಿ ಶಾಟ್‌ಪುಟ್)

ಟ್ರಯಥ್ಲಾನ್‌ಅ: 60 ಮೀ, ಲಾಂಗ್ ಜಂಪ್ (5 ಮೀ ಅಪ್ರೋಚ್), 600 ಮೀ, ಕಿಡ್ಸ್ ಜಾವೆಲಿನ್ (5 ಮೀ ರನ್‌ವೇ)

16 ವರ್ಷದೊಳಗಿನ ಬಾಲಕಿಯರಿಗೆ:

60 ಮೀ, 600 ಮೀ, ಹೈಜಂಪ್ (ಸೀಜರ್ಸ್), ಲಾಂಗ್ ಜಂಪ್ (5 ಮೀ ಅಪ್ರೋಚ್), ಡಿಸ್ಕಸ್ ಥ್ರೋ (1 ಕೆ.ಜಿ), ಶಾಟ್‌ಪುಟ್ (3 ಕೆ.ಜಿಸ್ಟ್ಯಾಂಡಿಂಗ್), ಜಾವೆಲಿನ್ ಥ್ರೋ (500 ಜಿಎಂಎಸ್10 ಮೀ ಅಪ್ರೋಚ್)

ಈ ಸಂದರ್ಭದಲ್ಲಿ ತಿಮ್ಮರೆಡ್ಡಿ ರಾಜಕುಮಾರ್, ಬೆಲ್ಲಂ ಕಿರಣ್, ಗೋಪಿನಾಥ್, ಚಂದ್ರಶೇಖರ್ ಸೇರಿದಂತೆ ಸಂಘಟನೆಯ ಸದಸ್ಯರು ಉಪಸ್ಥಿತರಿದ್ದರು.

# ಕೆರೆಯ ನಾಮ ಫಲಕ ಅನಾವರಣ ಶಿವಕುಮಾರ್ ಮಹಾಸ್ವಾಮಿಗಳು

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ .ಭೂಮಿಯ ಮೇಲೆ ಬದುಕುವ ಪ್ರತಿಯೊಂದು ಜೀವಿಗಳಿಗೂ ಪಂಚ ಭೂತಗಳು ಅತ್ಯಮೂಲ್ಯ ಅದರಲ್ಲೂ ನೀರು ಅಮೃತಕ್ಕೆ ಸಮಾ ಅಂತರಜಲ ಸಂರಕ್ಷಣೆಗೆ ಕೆರೆ,ಭಾವಿ,ನದಿಗಳು ಪ್ರಮುಖ ಪಾತ್ರವಹಿಸುತ್ತವೆ ಎಂದು ಚೇಳ್ಳಗುರ್ಕಿ ಶ್ರೀ ಎರ್ರಿತಾತನ ಕೆರೆ ಹಸ್ತಾಂತರ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿದ *ನಂದಿವೇರಿ ಸಂಸ್ಥಾನ ಮಠದ ಪರಮ ಪೂಜ್ಯ ಶ್ರೀ, ಮ,ನಿ,ಪ್ರ ಶಿವಕುಮಾರ್ ಮಹಾಸ್ವಾಮಿಗಳು* ದಿವ್ಯ ಸಾನಿಧ್ಯ ವಹಿಸಿದರುಬಳ್ಳಾರಿ-1 ತಾಲ್ಲೂಕು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಮೂಲಕ ಪರಮದೇವನಹಳ್ಳಿ ವಲಯದ ಚೇಳ್ಳಗುರ್ಕಿ ಗ್ರಾಮದಲ್ಲಿ ಶ್ರೀ ಎರ್ರಿತಾತನವರ 4 ಎಕರೆ ಕೆರೆಯನ್ನು 10 ಲಕ್ಷ ವೆಚ್ಚದಲ್ಲಿಹೂಳೆತ್ತುವ ಮೂಲಕ ಪುನಶ್ಚೇತನಗೊಳಿಸಲಾಗಿದ್ದು ಈ ಶುಭ ದಿನದಂದು ಕೆರೆ ನಾಮ ಫಲಕ ಅನಾವರಣ ಹಾಗೂ ಕೆರೆ ಸಮಿತಿಗೆ ಹಸ್ತಾಂತರ ಮತ್ತು ಗಂಗಾ ಮಾತೆಗೆ ಬಾಗಿನ ಸಮರ್ಪಣೆ ಮಾಡುವ ಮೂಲಕ *ಪೂಜ್ಯ ಶ್ರೀ ಡಾ/ ಡಿ,ವೀರೇಂದ್ರ ಹೆಗ್ಗಡೆಯವರ ಜನ್ಮ ದಿನವನ್ನು ಆಚರಣೆ ಮಾಡಲಾಯಿತು ಎಂದು ಕಾರ್ಯವನ್ನುಉದ್ದೇಶಿಸಿ*ನಂದಿವೇರಿ ಸಂಸ್ಥಾನ ಮಠದ ಪೂಜ್ಯಶ್ರೀ,ಮ,ನಿ,ಪ್ರ ಶಿವಕುಮಾರ್ ಮಹಾಸ್ವಾಮಿಗಳು* ಮಾತನಾಡಿದರುಬಳ್ಳಾರಿ ತಾಲ್ಲೂಕಿನ ಕಮ್ಮರಚೇಡ್ ಕಲ್ಯಾಣ ಸಂಸ್ಥಾನ ಮಠದ ಪೀಠಾಧ್ಯಕ್ಷರು *ಪೂಜ್ಯ ಶ್ರೀ,ಮ,ನಿ,ಪಕಲ್ಯಾಣಮಹಾಸ್ವಾಮಿಗಳು*



ಮಾತನಾಡಿ ಧರ್ಮಸ್ಥಳದ ನಡೆದಾಡುವ ದೇವರು ಪೂಜ್ಯ ಶ್ರೀ ವೀರೇಂದ್ರ ಹೆಗ್ಗಡೆಯವರ ಸಮಾಜ ಸೇವೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿದ್ದಾರೆ.

ಬಹುಮುಖ್ಯವಾಗಿ ಗ್ರಾಮೀಣ ಭಾಗದಲ್ಲಿ ಕೆರೆಗಳ ಅವಶ್ಯಕತೆ ಬಹಳಷ್ಟಿದೆ,ಇತ್ತೀಚಿನ ದಿನಮಾನದಲ್ಲಿ ಕೆರೆಗಳು ಹೊಳು ತುಂಬಿಕೊಂಡು ಕೆರೆಗಳು ನಶಿಸಿ ಹೋಗಿರುವ ದುಸ್ಥಿಗೆ ಬಂದೊದಗಿವೆ ಈ ಕಾರಣದಿಂದಾಗಿ ಅಂತರ್ಜಲ ಮಟ್ಟ ಕುಸಿಯುತ್ತ ಸಾಗುತ್ತಿದೆಇಂತಹ ಕಿಷ್ಟಕರ ಸಂದರ್ಭಗಳನ್ನ *ಧರ್ಮಸ್ಥಳದ ಧರ್ಮಾಧಿಕಾರಿಗಳಾದ ಪೂಜ್ಯ ಶ್ರೀ ಡಾ/ ಡಿ, ವೀರೇಂದ್ರ ಹೆಗ್ಗಡೆಯವರು ಗ್ರಾಮಾಭಿವೃದ್ಧಿ ಸಂಸ್ಥೆಯ ನಮ್ಮೂರು ನಮ್ಮ ಕೆರೆ ಕಾರ್ಯಕ್ರಮದಡಿಯಲ್ಲಿ ಕೆರೆಗಳ ಪುನಶ್ಚೇತನ* ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ಅಲ್ಲದೇ ಇದೇ ರೀತಿಯ ಅನೇಕ ಸಮಾಜಮುಖಿ ಕಾರ್ಯಗಳನ್ನು ಕೈಗೊಳ್ಳುತ್ತಿದ್ದಾರೆ, ಒಂದು ಸರ್ಕಾರ ಮಾಡುವಂತಹ ಕೆಲಸವನ್ನು ಒಬ್ಬ ಧರ್ಮಾಧಿಕಾರಿಗಳು ಮಾಡುತ್ತಿದ್ದಾರೆಂದರೆ ಶ್ಲಾಘನೀಯ ವಾದದ್ದು ಎಂದರು *ಕಮ್ಮರಚೇಡ್ ಕಲ್ಯಾಣ ಸಂಸ್ಥಾನ ಮಠದ ಪೂಜ್ಯ ಶ್ರೀ,ಮ,ನಿ,ಪ್ರಕಲ್ಯಾಣಮಹಾಸ್ವಾಮಿಗಳು* ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರುರೋಹಿತಾಕ್ಷ

ಜಿಲ್ಲಾನಿರ್ದೇಶಕರುಮಾತನಾಡಿಪೂಜ್ಯ ಶ್ರೀಡಾ/ಡಿ,ವೀರೇಂದ್ರಹೆಗ್ಗಡೆಯವರ ವಿಶೇಷ ಕಾಳಜಿ* ಎಂದರೆ ನೆಲ ಜಲ ಸಂರಕ್ಷಣೆಗಾಗಿ "ನಮ್ಮೂರು ನಮ್ಮ ಕೆರೆ" ಕಾರ್ಯಕ್ರಮದಡಿ ಯಲ್ಲಿ ಕೆರೆ ಹೂಳೆತ್ತುವ ಮೂಲಕ ಜೀವಜಲ ಉಳಿಸುವ ಕಾರ್ಯಕ್ರಮವನ್ನು ನಡೆಸಿಕೊಂಡು ಬರ ಲಾಗುತ್ತಿದ್ದು ಈ ವರೆಗೆ 900 ಕ್ಕು ಹೆಚ್ಚು ಕೆರೆ ಪುನಶ್ಚೇತನ ಪೂರ್ಣಗೊಳಿಲಾಗಿದೆ ಈ ವರ್ಷ ಒಂದು 1000 ಕೆರೆಗಳನ್ನು ಪುನಶ್ಚೇತನಗೊಳಿಸಬೇಕೆಂದು ಪೂಜ್ಯರು ಕನಸ್ಸಾಗಿದೆ ಇಂದು ಪೂಜ್ಯ ಖಾವಂದರ ಹುಟ್ಟು ಹಬ್ಬದ ಶುಭ ದಿನದ ಪ್ರಯುಕ್ತ ಇಡಿ ರಾಜ್ಯಾದ್ಯಂತ ಯೋಜನೆಯ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ

ಎಂದು ಬಳ್ಳಾರಿ ಜಿಲ್ಲೆಯ ಮಾನ್ಯ ಗೌರವಾನ್ವಿತ ಜಿಲ್ಲಾ ನಿರ್ದೇಶಕರು ರೋಹಿತಾಕ್ಷ ಅವರ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರುಶ್ರೀ ಎರ್ರಿಸ್ವಾಮಿ ಜೀವ ಸಮಾಧಿ ಟ್ರಸ್ಟ್ ನ ಸದಸ್ಯರು ಹಾಗೂ ಕೆರೆ ನಮ್ಮೂರು ನಮ್ಮ ಕೆರೆ ಸಮಿತಿಯ ಅಧ್ಯಕ್ಷರಾದ ಕ ಸಿದ್ದಲಿಂಗನಗೌಡ ಅವರು ಮಾತನಾಡಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಚೇಳ್ಳಗುರ್ಕಿ ಶ್ರೀ ಎರ್ರಿಸ್ವಾಮಿ ಕೆರೆಯನ್ನು 10 ಲಕ್ಷದ ವೆಚ್ಚದಲ್ಲಿ ಹೂಳೆತ್ತುವ ಕಾರ್ಯವನ್ನು ನಿರ್ವಹಿಸಿ ಯಶಸ್ವಿಯಾಗಿದೆ ಇದೆ ರೀತಿ ಶ್ರೀ ಎರ್ರಿಸ್ವಾಮಿ ಜೀವ ಸಮಾಧಿ ಟ್ರಸ್ಟ್‌ನ ಖಜಾಂಚಿಯಾದ ಕ ಸಿದ್ದನಗೌಡ್ರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದರು.ಈ ಕಾರ್ಯಕ್ರಮದಲ್ಲಿಬಸವರಾಜ

ಕೆಕ್ಷೇತ್ರಯೋಜನಾಧಿಕಾರಿಗಳು,ಎಲ್ಲಾ ಸೇವಾ ಪ್ರತಿನಿಧಿಗಳು, ಒಕ್ಕೂಟದ ಪದಾಧಿಕಾರಿಗಳು, ಸ್ವ ಸಹಾಯ ಸಂಘದ ಸದಸ್ಯರು,ಶ್ರೀ ಎರ್ರಿಸ್ವಾಮಿ ಜೀವ ಸಮಾಧಿ ಟ್ರಸ್ಟ್ ನ ಸದಸ್ಯರು & ಶ್ರೀ ಎರ್ರಿಸ್ವಾಮಿ ದಾಸೋಹ ಸೇವಾ ಸಂಘದ ಸದಸ್ಯರು, ರೈತ ಬಾಂಧವರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದರು.

## ಕೆಬಿಎನ ವಿವಿ ಯಲ್ಲಿ ಸಂವಿಧಾನ ದಿನ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ : ನಗರದ ಕೆಬಿಎನ್ ವಿಶ್ವವಿದ್ಯಾಲಯದಲ್ಲಿ ಬುಧವಾರ ಸಂವಿಧಾನ ಸಮರ್ಪಣಾ ದಿನದ ಅಂಗವಾಗಿ ಆಯೋಜಿಸಿದ ಕಾರ್ಯಕ್ರಮದಲ್ಲಿ ಸಂವಿಧಾನ ಪ್ರಸ್ತಾವನೆಯನ್ನು ಕಾನೂನು ವಿಭಾಗದ ಸಹಾಯಕ ಪ್ರಾಧ್ಯಾಪಕ ಎಮ್ ಡಿ ಅಜರುದ್ದಿನ ಎಲ್ಲ ವಿದ್ಯಾರ್ಥಿಗಳಿಗೆ ಹಾಗೂ ಉಪನ್ಯಾಸಕರಿಗೆ ಬೋಧಿಸಿದರು. ಕಾನೂನು ವಿಭಾಗದ ಸಹ ಪ್ರಾಧ್ಯಾಪಕ ಡಾ. ಪ್ರವೀಣ್ ನಾಯಕ ಕಾರ್ಯಕ್ರಮ ನಿರೂಪಿಸಿದರು. ಸಂವಿಧಾನ ದಿನದ ಅಂಗವಾಗಿ ವಿದ್ಯಾರ್ಥಿಗಳಿಗೆ ಹಾಗೂ ಉಪನ್ಯಾಸಕರಿಗೆ ಭಾರತೀಯ ಸಂವಿಧಾನ ಕುರಿತು ರಸಪ್ರಶ್ನೆ ಸ್ಪರ್ಧೆಯನ್ನು ಕಾನೂನು ಹಾಗೂ ರಾಜ್ಯಶಾಸ್ತ್ರವಿಭಾಗಗಳಿಂದ ಸಹಾಯಕ ಪ್ರಾಧ್ಯಪಕ ಡಾ ತಾಜುದ್ದೀನ ಎಮ್ ಡಿ,ಸಬಿಹಾ ತಬಸ್ಸುಮ ಹಾಗೂ ಕಾನೂನು ವಿಭಾಗದ ಮುಖಸ್ಥೆ ಲೂಬ್ನ ತನವೀರ ಮಾರ್ಗದರ್ಶನದಲ್ಲಿ ಹಮ್ಮಿಕೊಳ್ಳಲಾಗಿತ್ತು. ವಿದ್ಯಾರ್ಥಿಗಳು ಸಂವಿಧಾನ ಕುರಿತು ಭಾಷಣ ಮಾಡಿದರು. ಈ ಕಾರ್ಯಕ್ರಮದಲ್ಲಿ ವಿವಿಯ ಕಾನೂನು, ಭಾಷಾ, ಸಮಾಜ ವಿಜ್ಞಾನ ನಿಕಾಯದ ಎಲ್ಲ ಶಿಕ್ಷಕ ವೃಂದ ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

# ಕಲೆ, ಸಂಸ್ಕೃತಿಯನ್ನು ಉಳಿಸಿ ಬೆಳೆಸೋಣ : ಮುಂಡರಗಿ ನಾಗರಾಜ ಕರೆ

ಮಲ್ಲಮ್ಮ ನುಡಿ ವಾರ್ತೆ
ಬಳ್ಳಾರಿ:





ಬಳ್ಳಾರಿ ಜಿಲ್ಲೆಯು ಕೇವಲ ಗಣಿನಾಡು ಅಲ್ಲ, ಬದಲಾಗಿ ಅನೇಕ ಕಲಾವಿದರನ್ನೊಳಗೊಂಡ ಜಿಲ್ಲೆಯಾಗಿದ್ದು, ಕಲಾವಿದರು ಕಲೆಯನ್ನು ಪೋಷಿಸುತ್ತಾ ನಮ್ಮ ಕಲೆ ಮತ್ತು ಸಂಸ್ಕೃತಿಯನ್ನು ಉಳಿಸಿ ಬೆಳೆಸೋಣ ಎಂದು ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ ಅವರು ಕರೆ ನೀಡಿದರು.

ಬುಧವಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಆಯೋಜಿಸಿದ್ದ ಎರಡು ದಿನಗಳ ಜಿಲ್ಲಾ ಮಟ್ಟದ ಕಲಾ ಪ್ರತಿಭೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕಲಾ ಕ್ಷೇತ್ರದಲ್ಲಿ ಸಾಧನೆ ಮಾಡಿದ ಜಿಲ್ಲೆಯ ಕಲಾವಿದರಾದ ಬೆಳಗಲ್ ವೀರಣ್ಣ, ಜೋಳದರಾಶಿ ದೊಡ್ಡನಗೌಡ, ಮನ್ಸೂರ್ ಸುಭದ್ರಮ್ಮ, ಬಳ್ಳಾರಿ ರಾಘವ ಸೇರಿದಂತೆ ಇನ್ನೂ ಅನೇಕ ಕಲಾವಿದರು ಜಿಲ್ಲೆಗೆ ಅಪಾರವಾದ ಕೊಡುಗೆ ನೀಡಿದ್ದಾರೆ. ಎಲ್ಲಾ ಪ್ರತಿಭೆಗಳು ತಮ್ಮ ಕಲೆಯನ್ನು ಪ್ರದರ್ಶಿಸಲು ಈ ಕಾರ್ಯಕ್ರಮ ಉತ್ತಮ ವೇದಿಕೆಯಾಗಿದೆ. ರಾಜ್ಯ ಸರ್ಕಾರದಿಂದ ಕಲೆಯನ್ನು ಪ್ರೋತ್ಸಾಹಿಸಲು ಹಲವು ಯೋಜನೆಗಳಿದ್ದು, ಅದರ ಸದುಪಯೋಗ ಪಡೆದುಕೊಳ್ಳಿ ಎಂದು ಹೇಳಿದರು.

ಮಹಾನಗರ ಪಾಲಿಕೆಯ ಮಹಾಪೌರರಾದ ಪಿ.ಗಾದೆಪ್ಪ ಅವರು ಮಾತನಾಡಿ, ಮಕ್ಕಳ ಪ್ರತಿಭೆಯನ್ನು ಗುರುತಿಸಲು ಇಂತಹ ಕಾರ್ಯಕ್ರಮ ಜಿಲ್ಲೆಯಲ್ಲಿ ಆಯೋಜಿಸಿರುವುದು ಸಂತೋಷ ತಂದಿದ್ದು, ಪೋಷಕರು ತಮ್ಮ ಮಕ್ಕಳ ಮೇಲೆ ಒತ್ತಡ ಹೇರದೆ ಅವರ ಕಲೆಯನ್ನು ಗುರುತಿಸಿ ಪ್ರೋತ್ಸಾಹಿಸಬೇಕು ಎಂದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು ಮಾತನಾಡಿ, ಮಾನವನ ಜೀವನದಲ್ಲಿ ಅವನಲ್ಲಿರುವ ಕಲೆಯನ್ನು ಹೊರಹಾಕಲು ಕಲೆ, ಸಾಹಿತ್ಯ, ಸಂಗೀತ ಇನ್ನಿತರೆ ಚಟುವಟಿಕೆಗಳು ಮುಖ್ಯವಾಗುತ್ತವೆ. ಬಳ್ಳಾರಿ ಜಿಲ್ಲೆಯು ಅನೇಕ ಕಲಾವಿದರನ್ನು ಹೊಂದಿದೆ. ಕಲಾವಿದರ ಜೀವನದಲ್ಲಿ ಕಲೆ ಪ್ರದರ್ಶನವೇ ಅವರಿಗೆ ಸಂತೃಪ್ತಿ ನೀಡುತ್ತದೆ. ಕಲಾವಿದರಿಗೆ ಕಲೆಯನ್ನು ಪ್ರದರ್ಶಿಸಲು ನೀಡುವ ಹಣಕ್ಕಿಂತ ಅವರ ಕಲೆ ಪ್ರದರ್ಶಿಸಲು ಒಂದು ವೇದಿಕೆ ನೀಡುವುದು ಮುಖ್ಯವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮಕ್ಕೂ ಮುನ್ನ ಸಂವಿಧಾನ ಪೀಠಿಕೆಯ ಪ್ರತಿಜ್ಞಾ ವಿಧಿಯನ್ನು ಸ್ವೀಕರಿಸಲಾಯಿತು.

*ವಿವಿಧ ಸ್ಪರ್ಧೆಗಳು:*

ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಶಾಸ್ತ್ರೀಯ ನೃತ್ಯ, ಸುಗಮ ಸಂಗೀತ, ಜಾನಪದ ಗೀತೆಗಳು.

ನಗರದ ಸಾಂಸ್ಕೃತಿಕ ಸಮುಚ್ಛಯ ಆವರಣದ ನಾಡೋಜ ಸುಭದ್ರಮ್ಮ ಮನ್ಸೂರ್ ಬಯಲು ರಂಗಮಂದಿರದಲ್ಲಿ ಚಿತ್ರಕಲಾ ಸ್ಪರ್ಧೆ (ಸ್ವಕಲ್ಪಿತ), ನಗರದ ಸಾಂಸ್ಕೃತಿಕ ಸಮುಚ್ಛಯದ ಹೊಂಗಿರಣ ಸಭಾಂಗಣದಲ್ಲಿ ಹಿಂದೂಸ್ಥಾನಿ/ಕರ್ನಾಟಕಶಾಸ್ತ್ರೀಯ ವಾದ್ಯ, ಹಿಂದೂಸ್ಥಾನಿ/ಕರ್ನಾಟಕ ಶಾಸ್ತ್ರೀಯ ಸಂಗೀತ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಯಿತು

. ಸ್ಪರ್ಧೆಯಲ್ಲಿ ಸುಮಾರು 60ಕ್ಕಿಂತ ಹೆಚ್ಚು ಸ್ಪರ್ಧಿಗಳು ಭಾಗವಹಿಸಿ ತಮ್ಮ ಕಲಾ ಪ್ರದರ್ಶನ ನೀಡಿದರು.

ಈ ಸಂದರ್ಭದಲ್ಲಿ ಹಿರಿಯ ರಂಗಭೂಮಿ ಕಲಾವಿದರಾದ ವೀಣಾ ಕುಮಾರಿ, ಹಿರಿಯ ನೃತ್ಯಕಲಾವಿದರಾದ ವನಮಾಲಾ ಕುಲಕರ್ಣಿ, ಜಿಲಾನಿ ಭಾಷಾ, ಚಿತ್ರದುರ್ಗ ಜಿಲ್ಲೆಯ ಹಿರಿಯ ಕಲಾವಿದ ತಿಪ್ಪೇಸ್ವಾಮಿ, ಹಿರಿಯ ಜಾನಪದ ಗಾಯಕ ಯಲ್ಲನಗೌಡ ಶಂಕರಬಂಡೆ, ಹಿರಿಯ ಪೀಟಿಲು ವಾದಕರಾದ ಶಕುಂತಲಮ್ಮ, ಹಿರಿಯ ಚಿತ್ರಕಲಾವಿದ ಜಾಧವ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿವೃತ್ತ ಸಹಾಯಕ ನಿರ್ದೇಶಕ ಚೋರನೂರು ಕೊಟ್ರಪ್ಪ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಸೇರಿದಂತೆ ತೀರ್ಪುಗಾರರು, ಇಲಾಖೆಯ ಸಿಬ್ಬಂದಿಗಳು, ಪೋಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಡಿ.21 ರಂದು ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ: ದೇಶದಲ್ಲಿ ಪೋಲಿಯೋ ರೋಗವು ಮರುಕಳಿಸಬಾರದು ಎಂಬ ಮುನ್ನೆಚ್ಚರಿಕೆಯೊಂದಿಗೆ ಐದು ವರ್ಷದೊಳಗಿನ ಎಲ್ಲಾ ಮಕ್ಕಳನ್ನು ಪೋಲಿಯೊ ವೈರಸ್ ವಿರುದ್ಧ ರಕ್ಷಿಸಲು ಡಿ.21 ರಂದು ಜಿಲ್ಲೆಯಾದ್ಯಂತ ಪಲ್ಸ್ ಪೋಲಿಯೋ ಕಾರ್ಯಕ್ರಮ ಹಮ್ಮಿಕೊಳ್ಳುತ್ತಿರುವ ಕುರಿತು ಜಿಲ್ಲೆಯಾದ್ಯಂತ ವ್ಯಾಪಕ ಪ್ರಚಾರ ನೀಡಲು ಕ್ರಮವಹಿಸಬೇಕು ಎಂದು ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಶ್ವ ಆರೋಗ್ಯ ಸಂಸ್ಥೆ ಸಹಯೋಗದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಸಭಾಂಗಣದಲ್ಲಿ ಜಿಲ್ಲಾ ಮತ್ತು ತಾಲ್ಲೂಕು, ಕ್ಷೇತ್ರ ಮಟ್ಟದ ಮೇಲ್ವಿಚಾರಕರಿಗೆ ಮಂಗಳವಾರ ಹಮ್ಮಿಕೊಂಡಿದ್ದ ಪಲ್ಸ್ ಪೋಲಿಯೋ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ತಪ್ಪದೇ ಲಸಿಕೆ ಹಾಕಿಸಲು ಆರೋಗ್ಯ ಇಲಾಖೆಯ ಸಿಬ್ಬಂದಿ ಹೆಚ್ಚಿನ ರೀತಿಯಲ್ಲಿ ಪೋಷಕರಿಗೆ ಮನವರಿಕೆ ಮಾಡಿಕೊಡಬೇಕು ಎಂದು ತಿಳಿಸಿದರು.

2011 ರ ಜ.13 ರಂದು ಭಾರತದಲ್ಲಿ ಪೋಲಿಯೋ ಕೊನೆಯ ಪ್ರಕರಣ ವರದಿಯಾದ ನಂತರ ಇಲ್ಲಿಯವರೆಗೆ ನಿರಂತರ ನಿಗಾವಣೆಯೊಂದಿಗೆ 5 ವರ್ಷದೊಳಗಿನ ಮಕ್ಕಳಿಗೆ ಎರಡು ಹನಿ ಪೋಲಿಯೋ ಲಸಿಕೆ ಹಾಕುವ ಮೂಲಕ ಸತತ 14 ವರ್ಷಗಳಿಂದ ಪ್ರಕರಣಗಳು ವರದಿಯಾಗಿರುವುದಿಲ್ಲ, ಇದನ್ನು ಉಳಿಸಿಕೊಳ್ಳಲು ಪ್ರತಿ ಮಗುವಿಗೂ ಲಸಿಕೆ ಹಾಕಿಸಬೇಕು ಎಂದರು.

ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ ಅವರು ಮಾತನಾಡಿ, ಜಿಲ್ಲೆಯ ಎಲ್ಲಾ ತಾಲ್ಲೂಕಿನ ವಸತಿ ಪ್ರದೇಶಗಳು, ವಲಸೆ ಪ್ರದೇಶಗಳು, ಕಟ್ಟಡ ನಿರ್ಮಾಣ ಪ್ರದೇಶಗಳು, ಇಟ್ಟಿಗೆ ಬಟ್ಟಿ, ಕುರಿಗಾಯಿಗಳು ತಂಗಿರುವ ಸ್ಥಳಗಳು, ಕೊಳಚೆ ಪ್ರದೇಶಗಳು ತೋಟದ ಮನೆ, ದೊಡ್ಡಿ, ಹಟ್ಟಿ, ಕ್ಯಾಂಪ್‌ಗಳು, ನಗರಗಳಲ್ಲಿನ ಅಪಾರ್ಟ್ ಮೆಂಟ್‌ಗಳು ಸೇರಿದಂತೆ ಮಕ್ಕಳ ಸಂಖ್ಯೆಯನ್ನು ಪಟ್ಟಿ ಮಾಡಿಟ್ಟುಕೊಂಡು ಈ ಹಿಂದೆ ಹಲವು ಬಾರಿ ಪೋಲಿಯೋ ಹನಿ ಹಾಕಿಸಿದ್ದರೂ ಸಹ ಪಾಲಕರು ತಮ್ಮ ಮಕ್ಕಳಿಗೆ ತಪ್ಪದೇ ಎರಡು ಹನಿ ಪೋಲಿಯೋ ದ್ರಾವಣ ಹಾಕಿಸಲು ತಿಳಿಸಬೇಕು ಎಂದರು.

ವಿಶ್ವ ಆರೋಗ್ಯ ಸಂಸ್ಥೆಯ ಎಸ್.ಎಮ್.ಓ ಡಾ.ಶ್ರೀಧರ್ ಅವರು ತರಬೇತಿ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸರೆಡ್ಡಿ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಆರ್.ಅಬ್ದುಲ್ಲಾ, ತಾಲ್ಲೂಕು ಆರೋಗ್ಯಾಧಿಕಾರಿಗಳಾದ ಡಾ.ಬಸವರಾಜ್, ಡಾ.ಅರುಣ್, ಡಾ.ಮಂಜುನಾಥ ಜವಳಿ, ಪ್ರಭಾರಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಷಿದ್ ಬೇಗಮ್, ಡಿಎನ್‌ಓ ಗಿರೀಶ್, ಲಸಿಕಾ ಕ್ಷೇತ್ರದ ಮೇಲ್ವಿಚಾರಕರಾದ ಕಾಪ್ಸೆ.ಕೆ ಸೇರಿದಂತೆ ಜಿಲ್ಲಾ ಮತ್ತು ತಾಲ್ಲೂಕು, ಕ್ಷೇತ್ರ ಮಟ್ಟದ ಮೇಲ್ವಿಚಾರಕರು ಹಾಜರಿದ್ದರು.

## ಜೆಎಸ್‌ಡಬ್ಲ್ಯೂ ಟೌನ್‌ಶಿಪ್‌ನಲ್ಲಿ ಕರಡಿ ಸೆರೆ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ: ಸಂಡೂರಿನ ತೋರಣಗಲ್ಲಿನ ಜೆಎಸ್‌ಡಬ್ಲ್ಯೂ ಟೌನ್‌ಶಿಪ್ ನಲ್ಲಿ ಹಲವಾರು ದಿನಗಳಿಂದ ಕಾಣಿಸಿಕೊಳ್ಳುತ್ತಿದ್ದ ಕರಡಿಯನ್ನು ಮಂಗಳವಾರ ಸೆರೆ ಹಿಡಿಯಲಾಗಿದೆ. ಬೆಂಗಳೂರಿನ ಮುಖ್ಯ ವನ್ಯಜೀವಿ ಪರಿಪಾಲಕರ ಅನುಮತಿ ಮೇರೆಗೆ ಬಳ್ಳಾರಿ ಉಪ ವಿಭಾಗದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಸಂಡೂರು ಪಶು ವೈದ್ಯಾಧಿಕಾರಿಗಳ ಸಮಕ್ಷಮದಲ್ಲಿ ಸೆರೆ ಹಿಡಿಯಲಾಗಿದೆ. ಬನ್ನೇರುಘಟ್ಟ ವನ್ಯಜೀವಿ ಕರಡಿ ರಕ್ಷಣಾ ಕೇಂದ್ರ ಸಹಕಾರದೊಂದಿಗೆ ಅರವಳಿಕೆ ನೀಡಿ ಜಿಪಿಎಸ್ ಆಧಾರಿತ ರೇಡಿಯೋ–ಕಾಲರ್ ಐಡಿ ಅಳವಡಿಸಿ ಬೆಂಗಳೂರಿನ ಮುಖ್ಯ ವನ್ಯಜೀವಿ ಪರಿಪಾಲಕರ ಅನುಮತಿ ಪಡೆದು ಸೂಕ್ತವಾದ ಅರಣ್ಯ ಪ್ರದೇಶದಲ್ಲಿ ಬಿಡುಗಡೆ ಮಾಡಲಾಗಿದೆ.

ಕಾರ್ಯಾಚರಣೆಯನ್ನು ವಲಯ ಅರಣ್ಯಾಧಿಕಾರಿ, ಸಂಡೂರು ದಕ್ಷಿಣ ವಲಯ ಹಾಗೂ ಸಿಬ್ಬಂದಿಯವರು ಜೊತೆಗೂಡಿ ಕಾರ್ಯಗತಗೊಳಿಸಿದ್ದಾರೆ ಎಂದು ಬಳ್ಳಾರಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ.ಕೆ.ಎನ್.ಬಸವರಾಜ ಅವರು ತಿಳಿಸಿದ್ದಾರೆ.

### ಜಿಲ್ಲಾ ಪೊಲೀಸ್ ದೂರುಗಳ ಪ್ರಾಧಿಕಾರದಲ್ಲಿ

## ಸದಸ್ಯರ ನೇಮಕ: ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ಜಿಲ್ಲಾ ಪೊಲೀಸ್ ದೂರುಗಳ ಪ್ರಾಧಿಕಾರಕ್ಕೆ ನಿವೃತ್ತ ನಾಗರೀಕ ಸೇವಾ ಅಧಿಕಾರಿ ಒಬ್ಬರನ್ನು ಸದಸ್ಯರಾಗಿ ಹಾಗೂ ನಾಗರೀಕ ಸಮಾಜದ ಒಬ್ಬರನ್ನು ಸದಸ್ಯರಾಗಿ ಕಾರ್ಯ ನಿರ್ವಹಿಸಲು ನೇಮಕ ಮಾಡಿಕೊಳ್ಳಲು ಉದ್ದೇಶಿಸಲಾಗಿದ್ದು, ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ತಮ್ಮ ಸ್ವ–ವಿವರ ಹಾಗೂ ಇತ್ತೀಚಿನ ವಿಳಾಸದ ಮಾಹಿತಿಯೊಂದಿಗೆ ಅರ್ಜಿಯ ಜೊತೆಗೆ ಪೂರಕ ದಾಖಲೆಗಳೊಂದಿಗೆ ಡಿಸೆಂಬರ್ 11 ರೊಳಗಾಗಿ ಜಿಲ್ಲಾ ಪೊಲೀಸ್ ದೂರುಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳೂ ಆದ ಜಿಲ್ಲಾ ಪೊಲೀಸ್ ಅಧೀಕ್ಷಕರ ಕಚೇರಿಗೆ ಸಲ್ಲಿಸಬೇಕು.

ಹುದ್ದೆಗಳ ವಿವರ(ಸದಸ್ಯರು): ನಿವೃತ್ತ ನಾಗರೀಕ ಸೇವಾ ಅಧಿಕಾರಿ (ಸಹಾಯಕ ಆಯುಕ್ತರ ಶ್ರೇಣಿಗಿಂದ ಕಡಿಮೆಯಿಲ್ಲದ), ನಾಗರೀಕ ಸಮಾಜದ ಒಬ್ಬ ವ್ಯಕ್ತಿ.

ಹೆಚ್ಚಿನ ಮಾಹಿತಿಗಾಗಿ ದೂ.08392–258400 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಡಾ.ಶೋಭಾರಾಣಿ ವಿ.ಜೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಾನಪದ ಕಲಾತಂಡ ಆಯ್ಕೆ: ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ:

ಜಿಲ್ಲೆಯಲ್ಲಿ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳನ್ನು ಜಾನಪದ ಪ್ರದರ್ಶನದ ಮೂಲಕ ಜನಜಾಗೃತಿ ನೀಡಲು ಜಾನಪದ ಕಲಾತಂಡ ಆಯ್ಕೆ ಮಾಡಲು ಉದ್ದೇಶಿಸಲಾಗಿದ್ದು, ಆಸಕ್ತ ಕಲಾ ತಂಡಗಳು ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿ ಆಹ್ವಾನಿಸಲಾಗಿದೆ.

ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಪ್ರಸ್ತಕ ಸಾಲಿಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಕಾರ್ಯಕ್ರಮಗಳು, ವಿವಿಧ ರಾಷ್ಟ್ರೀಯ ಕಾರ್ಯಕ್ರಮಗಳ ಕುರಿತು ಬಳ್ಳಾರಿ ಜಿಲ್ಲೆಯಲ್ಲಿ ಜಾನಪದ ಕಲಾ ಪ್ರದರ್ಶನದ ಮೂಲಕ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಗುರಿ ಹೊಂದಲಾಗಿದ್ದು,

ಈಗಾಗಲೇ ಬೇರೆ ಬೇರೆ ಇಲಾಖೆಗಳ ಕಾರ್ಯಕ್ರಮಗಳನ್ನು ಪ್ರದರ್ಶನ ಮಾಡಿರುವ ಮತ್ತು ಅರ್ಜಿ ನಮೂನೆಯಲ್ಲಿ ಉಲ್ಲೇಖಿಸಿರುವ ದಾಖಲಾತಿಗಳನ್ನು ಸಲ್ಲಿಸುವ ತಂಡಗಳನ್ನು ಜಿಲ್ಲಾ ಜಾನಪದ ಕಲಾ ತಂಡದ ಆಯ್ಕೆ ಸಮಿತಿ ಮೂಲಕ ಆಯ್ಕೆ ಮಾಡಲಾಗುತ್ತದೆ.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಾರ್ತಾ ಇಲಾಖೆ, ಸಂಗೀತ ಮತ್ತು ನಾಟಕ ಅಕಾಡೆಮಿ ಅಡಿ ನೋಂದಣಿಯಾಗಿ ಈಗಾಗಲೇ ಸರ್ಕಾರಿ ಕಾರ್ಯಕ್ರಮಗಳ ಅನುಷ್ಠಾನದಲ್ಲಿ ಜಾನಪದ ಕಲಾತಂಡದ ಮೂಲಕ ಪ್ರದರ್ಶನವನ್ನು ನೀಡಿರುವ ಹಾಗೂ ಪ್ರಸ್ತುತ ಆರೋಗ್ಯ ಇಲಾಖೆಯ ಕಾರ್ಯಕ್ರಮಗಳನ್ನು ಪ್ರಚಾರ ಮಾಡುವ ಇಚ್ಛೆಯುಳ್ಳ ಬಳ್ಳಾರಿ ಜಿಲ್ಲೆಯ ನೋಂದಣಿ ಹೊಂದಿರುವ ಕಲಾತಂಡಗಳು ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿಗಳನ್ನು ಕಚೇರಿಯ ಅವಧಿಯಲ್ಲಿ ಐಇಸಿ ವಿಭಾಗ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯ, ಬಳ್ಳಾರಿ, ಇಲ್ಲಿ ಖುದ್ದು ಪಡೆಯಬಹುದಾಗಿದ್ದು,

ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ ಲಗತ್ತಿಸಿ ಐಇಸಿ ವಿಭಾಗ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು, ಬಳ್ಳಾರಿ ಇಲ್ಲಿಗೆ ಡಿಸೆಂಬರ್ 03 ರೊಳಗಾಗಿ ಸಲ್ಲಿಸಬಹುದು.

ದಾಖಲಾತಿಗಳು ನಿಯಮಾನುಸಾರ ಇದ್ದ ತಂಡಗಳಿಗೆ ಜಿಲ್ಲಾ ಮಟ್ಟದಲ್ಲಿ ಆಯ್ಕೆ ಸಮಿತಿಯ ಉಪಸ್ಥಿತಿಯಲ್ಲಿ ಕಲಾಪ್ರದರ್ಶನ ಮೂಲಕ ಆಯ್ಕೆ ಮಾಡಲಾಗುವುದು.

***ಸೂಚನೆ:***

ಕಲಾತಂಡದ ಅಧೀಕೃತ ನೋಂದಣಿ, ಆರೋಗ್ಯ ಇಲಾಖೆಯವರು ಸೂಚಿಸಿದ ಹಳ್ಳಿಗಳಲ್ಲಿ ಕಾರ್ಯಕ್ರಮ ನಡೆಸುವುದು. ಪ್ರತಿ ದಿನ 2 ಕಾರ್ಯಕ್ರಮಗಳನ್ನು ನಡೆಸುವುದು.

ಪ್ರತಿ ತಂಡದಲ್ಲಿ 8 ಜನ ಇರಬೇಕು (ಕನಿಷ್ಠ ಇಬ್ಬರು ಮಹಿಳಾ ಕಲಾವಿದರು ಕಡ್ಡಾಯ).

ರಾಷ್ಟ್ರೀಕೃತ ಬ್ಯಾಂಕ್‌ನಲ್ಲಿ ತಂಡದ ಬ್ಯಾಂಕ್ ಖಾತೆ ಪಾಸ್ ಬುಕ್ ನೋಂದಣಿಯಾಗಿರಬೇಕು. ಕಲಾ ತಂಡದ ಪಾನ್‌ಕಾರ್ಡ್ ಕಡ್ಡಾಯ.

ಹೆಚ್ಚಿನ ಮಾಹಿತಿಗಾಗಿ ಮೊ.8722151697 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನ.28 ರಂದು ಟ್ರೇಡ್ಸ್, ಪರಿಸರ ನಿರ್ವಹಣೆ ಕುರಿತು ಒಂದು ದಿನದ ಜಾಗೃತಿ ಕಾರ್ಯಾಗಾರ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ: ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರದ ವತಿಯಿಂದ ಎಂಎಸ್‌ಎಂಇ ಕಾರ್ಯಕ್ಷಮತೆ ಹೆಚ್ಚಿಸುವುದು ಮತ್ತು ವೇಗಗೊಳಿಸಿಸುವುದು (ಆರ್‌ಎಎಂಪಿ) ಯೋಜನೆಯಡಿ ನ.28 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ನಲ್ಲಚೆರವು ಪ್ರದೇಶದ ಕೌಲ್ ಬಜಾರ್ ಜಿಲ್ಲಾ ಕ್ರೀಡಾಂಗಣ ರಸ್ತೆಯ ರೈಲ್ವೆ 1ನೇ ಗೇಟ್‌ನ ಮೊಹಮ್ಮದಿಯ ಕಾಲೇಜ್ ಹತ್ತಿರ ಗಾರ್ಮೆಂಟ್ ರಿಸರ್ಚ್ ಟ್ರೈನಿಂಗ್ ಡಿಸೈನ್ ಎಂಡ್ ಡೆವಲಪ್ಮೆಂಟ್ ಸೆಂಟ್ (ಜಿಆರ್‌ಟಿಡಿಎಸ್) ನಲ್ಲಿ ಟ್ರೇಡ್ಸ್ ಹಾಗೂ ಪರಿಸರ ನಿರ್ವಹಣೆ (ಇಎಸ್‌ಎಂ) ಬಗ್ಗೆ ಒಂದು ದಿನದ ಜಾಗೃತಿ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ.

ಕಾರ್ಯಾಗಾರದಲ್ಲಿ ಉದ್ಯಮಿದಾರರಿಗೆ ಟ್ರೇಡ್ಸ್ ಕುರಿತು ಅರಿವು ಮೂಡಿಸುವ ಬಗ್ಗೆ ಮತ್ತು ಪರಿಸರ ನಿರ್ವಹಣೆ ಮತ್ತು ಸಾಮಾಜಿಕ ಹೊಣೆಗಾರಿಕೆ ಕುರಿತು ಜಾಗೃತಿ ಮೂಡಿಸಲಾಗುತ್ತದೆ.

ಆಸಕ್ತಿಯುಳ್ಳ ಉದ್ದಿಮೆದಾರರು ಪಾಲ್ಗೊಳ್ಳಬಹುದಾಗಿದೆ ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಸಲ್ಲಿಕೆಯ ಅವಧಿ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ: ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಪಿಯುಸಿ ಹೊರತುಪಡಿಸಿ ಉಳಿದ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1ರ ಅಲೆಮಾರಿ/ಅರೆ ಅಲೆಮಾರಿ

ವಿದ್ಯಾರ್ಥಿಗಳಿಂದ 2025–26ನೇ ಸಾಲಿಗೆ ನೀಡಲಾಗುತ್ತಿರುವ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ, ಅಲೆಮಾರಿ/ಅರೆ ಅಲೆಮಾರಿ ಜನಾಂಗದ ಮೆಟ್ರಿಕ್ ನಂತರದ ಅರ್ಹತಾ ವಿದ್ಯಾರ್ಥಿ ವೇತನ, ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಮತ್ತು ಶುಲ್ಕ ಮರುಪಾವತಿ ಕಾರ್ಯಕ್ರಮಗಳ ಸೌಲಭ್ಯಕ್ಕಾಗಿ ಈಗಾಗಲೇ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆಯ ಅವಧಿಯನ್ನು ಡಿ.20 ರವರೆಗೆ ವಿಸ್ತರಿಸಲಾಗಿದೆ ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕಾನೂನು ಅರಿವು ಕಾರ್ಯಕ್ರಮದಲ್ಲಿ ನ್ಯಾಯಾಧೀಶೆ ಕೆ.ಜಿ.ಶಾಂತಿ ಹೇಳಿಕೆ

## ಮಹಿಳೆಯರು ಕೆಲಸದಲ್ಲಿ ಉತ್ತಮ ಭಾಂದವ್ಯ ಹೊಂದಿರಬೇಕು



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ನ: ಮಹಿಳೆಯರು ತಾವು ಕೆಲಸ ಮಾಡುವ ಸ್ಥಳ, ಕಚೇರಿ ಮತ್ತು ಮನೆಯಲ್ಲೂ ಉತ್ತಮ ಭಾಂದವ್ಯ ಹೊಂದಿರಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಕೆ.ಜಿ.ಶಾಂತಿ ಅವರು ಹೇಳಿದರು.

ಜಿಲ್ಲಾ ನ್ಯಾಯಾಂಗ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಇವರ ಸಂಯುಕ್ತಾಶ್ರಯದಲ್ಲಿ ನಗರದ ತಾಳೂರು ರಸ್ತೆಯ ಹೊಸ ನ್ಯಾಯಾಲಯದ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಿದ್ದ ‘ಮಹಿಳೆಯರ ಮೇಲಿನ ದೌರ್ಜನ್ಯ ನಿರ್ಮೂಲನೆಗೆ ಅಂತರಾಷ್ಟ್ರೀಯ ದಿನ’ ಅಂಗವಾಗಿ ಕಾನೂನು ಅರಿವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಹಿಳೆಯರು ಮತ್ತು ಪುರುಷರು ಪರಸ್ಪರ ಗೌರವ ಮನೋಭಾವನೆಯಿಂದ ಕಾಣಬೇಕು. ಮಹಿಳೆಗೆ ಸಮಸ್ಯೆ ಉಂಟಾದಲ್ಲಿ ಅವರ ರಕ್ಷಣೆಗಾಗಿ ಮಹಿಳಾ ದೌರ್ಜನ್ಯ ನಿರ್ಮೂಲನಾ ಕಾಯ್ದೆ ಇದ್ದು, ಇದರ ಅರಿವು ಹೊಂದಬೇಕು ಎಂದು ಸಲಹೆ ನೀಡಿದರು.

ಜಿಲ್ಲಾ ವಕೀಲರ ಸಂಘದ ವಕೀಲರಾದ ಶಿವಲೀಲ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿ ಮಾತನಾಡಿ, 10 ಜನಕ್ಕಿಂತ ಹೆಚ್ಚು ಮಹಿಳೆಯರು ಕೆಲಸ ಮಾಡುವ ಸ್ಥಳದಲ್ಲಿ ಮಹಿಳಾ ಆಂತರಿಕ ದೂರು ಸಮಿತಿ ಇರಬೇಕು. ಮಹಿಳೆ ತನ್ನ ಮೇಲೆ ದೈಹಿಕ, ಮಾನಸಿಕ ಸೇರಿದಂತೆ ಯಾವುದೇ ರೀತಿ ದೌರ್ಜನ್ಯವಾದಲ್ಲಿ ಮೂರು ತಿಂಗಳೊಳಗೆ ಆಂತರಿಕ ದೂರು ಸಮಿತಿಗೆ ದೂರು ಸಲ್ಲಿಸಬೇಕು. ಬಳಿಕ ಸಮಿತಿ ಪರಿಶೀಲನಾ ಕ್ರಮ ಕೈಗೊಳ್ಳಲಾಗುತ್ತದೆ. ಇಲ್ಲಿ ಸೌಹಾರ್ದಕ್ಕೆ ರಾಜಿ ಆಗಬಹುದು ಆದರೆ ಹಣಕ್ಕಾಗಿ ಅಲ್ಲ, ಪರಸ್ಪರ ಗೌರವದಿಂದ ಹೊಂದಿಕೊಂಡು ಕೆಲಸ ಮಾಡಬೇಕು ಎಂದರು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದಿಂದ ಬಡ ಜನತೆಗೆ ಇರುವ ಕಾನೂನು ಸೇವೆಗಳ ಮಾಹಿತಿ ಕುರಿತ ವೀಡಿಯೋ ಚಿತ್ರಣ ಪ್ರದರ್ಶಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಸೇರಿದಂತೆ ಜಿಲ್ಲಾ ನ್ಯಾಯಾಲಯದ ಎಲ್ಲಾ ನ್ಯಾಯಾಧೀಶರು ಹಾಗೂ ನ್ಯಾಯಾಲಯದ ಅಧಿಕಾರಿ–ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

## 59 ವರ್ಷದ ವ್ಯಕ್ತಿ ಕಾಣೆ; ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ: ನಗರದ ಬ್ರೂಸ್ ಪೇಟೆ ಪೊಲೀಸ್ ಠಾಣೆ ವ್ಯಾಪ್ತಿಯ ಮಲ್ಲಿಕಾರ್ಜುನ ಎನ್ನುವ 59 ವರ್ಷದ ವ್ಯಕ್ತಿಯು ಕೆಲಸಕ್ಕೆ ಹೋಗುತ್ತೇನೆ ಎಂದು ನ.25 ರಂದು ಹೇಳಿಹೋದವನು ಮನೆಗೆ ಬಾರದೇ ಕಾಣೆಯಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಬ್ರೂಸ್ ಪೇಟೆ ಪೊಲೀಸ್ ಠಾಣೆಯ ಪೊಲೀಸ್ ಠಾಣಾಧಿಕಾರಿ ಮನವಿ ಮಾಡಿದ್ದಾರೆ.

ಕಾಣೆಯಾದ ವ್ಯಕ್ತಿಯ ಚಹರೆ ಗುರುತು: ಎತ್ತರ 6 ಅಡಿ, ಎಣ್ಣೆಗೆಂಪು ಮೈ ಬಣ್ಣ, ಕೋಲುಮುಖ, ತೆಳುವಾದ ಮೈಕಟ್ಟು, ತಲೆಯ ಮೇಲೆ ಕಪ್ಪು ಮತ್ತು ಬಿಳಿ ಬಣ್ಣದ ಕೂದಲು ಹೊಂದಿದ್ದು, ಎಡತೋಳಿನ ರಟ್ಟೆಯ ಮೇಲೆ ಬಳಿ ಸುಟ್ಟ ಗಾಯದ ಗುರುತು ಮತ್ತು ಬಲಗಾಲಿನ ಬೆರಳುಗಳಲ್ಲಿನ ಎರಡನೇ ಬೆರಳು ಕತ್ತರಿಸಿರುತ್ತದೆ.

ಕಾಣೆಯಾದ ಸಂದರ್ಭದಲ್ಲಿ ಬಿಳಿ ಅಂಗಿ ಹಾಗೂ ಕೆಂಪು ಬಣ್ಣ ಲುಂಗಿಯನ್ನು ಧರಿಸಿರುತ್ತಾನೆ. ತೆಲುಗು, ಕನ್ನಡ ಭಾಷೆ ಮಾತನಾಡುತ್ತಾನೆ.

ಮೇಲ್ಕಂಡ ಚಹರೆಯುಳ್ಳ ವ್ಯಕ್ತಿಯ ಬಗ್ಗೆ ಮಾಹಿತಿ ಸಿಕ್ಕಲ್ಲಿ ಬ್ರೂಸ್ ಪೇಟೆ ಪೊಲೀಸ್ ಠಾಣೆಯ ಪಿ.ಎಸ್.ಐ ಮೊ.9480803045, ಪಿ.ಐ ಮೊ.9480803845, ಅಥವಾ ಬಳ್ಳಾರಿ ಕಂಟ್ರೋಲ್ ರೂಂ ದೂ.08392–258100 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂವಿಧಾನ ದಿನಾಚರಣೆ ಸ್ಪರ್ಧಾ ವಿಜೇತರಿಗೆ ಸನ್ಮಾನ
# ಸಂವಿಧಾನ ಗಟ್ಟಿಗೊಳಿಸುವ ಕಾರ್ಯವಾಗಲಿ : ಸಚಿವ ತಿಮ್ಮಾಪೂರ



ಮಲ್ಲಮ್ಮ ನುಡಿ ವಾರ್ತೆಬಾಗಲಕೋಟೆ:

ದೇಶದ ಪ್ರತಿಯೊಬ್ಬ ಪ್ರಜೆಯ ಸ್ವಾಭಿಮಾನದ ಸಂಕೇತವಾಗಿರುವ ನಮ್ಮ ಸಂವಿಧಾನವನ್ನು ಗಟ್ಟಿಗೊಳಿಸುವ ಕಾರ್ಯವಾಗಬೇಕಿದೆ ಎಂದು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಹೇಳಿದರು.

ನವನಗರದ ಡಾ.ಬಿ.ಆರ್.ಅಂಬೇಡ್ಕರ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡ ಸಂವಿಧಾನ ದಿನಾಚರಣೆ ಕಾರ್ಯಕ್ರಮದಲ್ಲಿ ಡಾ.ಬಿ.ಆರ್. ಅಂಬೇಡ್ಕರವರ ಭಾವಚಿತ್ರಕ್ಕೆ ಪುಷ್ಪ ಅರ್ಪಿಸಿ, ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಸಂವಿಧಾನವನ್ನು ಉಳಿಸಿಕೊಳ್ಳೋಣ, ಅದರ ಅಸ್ತಿತ್ವಕ್ಕೆ ಧಕ್ಕೆ ತರಲು ಪ್ರಯತ್ನಿಸುವವರಿಗೆ ಯುವ ಸಮೂಹ ತಕ್ಕ ಉತ್ತರ ನೀಡುವ ಶಕ್ತಿವಂತರಾಗಬೇಕು. ಇಂದಿನ ಪ್ರಜಾಪ್ರಭುತ್ವದಲ್ಲಿ ಪ್ರಜೆಗಳೇ ನಿರ್ಣಾಯಕರಾಗಿದ್ದಾರೆ ಎಂದರು.

ಸಂವಿಧಾನದ ಜಾಗೃತಿ ಪ್ರತಿಯೊಬ್ಬರ ಮನದಲ್ಲೂ ಅಚ್ಚೊತ್ತಬೇಕು. ಸಂವಿಧಾನದ ಅರಿವು ಪ್ರತಿ ಪ್ರಜೆಯ ಕರ್ತವ್ಯವಾಗಬೇಕು. ಆ ಆಶಯವನ್ನು ಸಾಕಾರಗೊಳಿಸುವ ದೃಷ್ಟಿಯಿಂದಲೇ ಸಂವಿಧಾನ ದಿನ ಆಚರಿಸಲಾಗುತ್ತಿದೆ. ಸಂವಿಧಾನದ ಉದ್ದೇಶ ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ನ್ಯಾಯವನ್ನು ಸಮಾನವಾಗಿ ವಿತರಿಸುವುದು ಹಾಗೂ ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ರಕ್ಷಿಸುವುದಾಗಿದೆ. ದೇಶಕ್ಕೆ ಯಾರು ಹಿತವರೋ, ಯಾರು ಶಕ್ತರೋ, ಯಾರು ಸರ್ವರನ್ನೂ ಪ್ರೀತಿಯಿಂದ ಕಾಣುತ್ತಾರೋ ಅಂತವರನ್ನು ಆರಿಸಿಕೊಳ್ಳಿ ಎಂದು ಸಚಿವರು ಹೇಳಿದರು.

ಸಂವಿಧಾನ ಆಶಯದಂತೆ ಬಡವರು ಅನ್ನಕ್ಕಾಗಿ ಯಾರ ಮುಂದೆಯೂ ಕೈಚಾಚಬಾರದು ಎಂದು ಅನ್ನಭಾಗ್ಯ ಯೋಜನೆ ನೀಡಿ ಸರ್ಕಾರ ಅವರಿಗೆ ಸ್ವಾಭಿಮಾನದ ಜೀವನ ಕಟ್ಟಿಕೊಟ್ಟಿದೆ. ಎಲ್ಲರ ಮನೆಯಲ್ಲಿ ಬೆಳಕಿರುವಾಗ ಕತ್ತಲಲ್ಲಿ ಕುಳಿತ ಬಡವನ ಸ್ಥಿತಿ ನೋಡಿ ಗೃಹಜ್ಯೋತಿ ಯೋಜನೆ ನೀಡಲಾಗಿದೆ. ಅಲ್ಲದೇ ನಮ್ಮ ಅಕ್ಕ ತಂಗಿಯರು ಇವತ್ತು ಎಲ್ಲಿ ಬೇಕಾದರು ಮುಕ್ತವಾಗಿ ಸಂಚರಿಸುವಂತೆ ಶಕ್ತಿ ಯೋಜನೆ ಬಲ ನೀಡಿದೆ. ಬಲಿಷ್ಟವಾದ ನಮ್ಮ ಸಂವಿಧಾನವನ್ನು ಉಳಿಸಿ ಬೆಳೆಸುವ ಕೆಲಸವಾಗಬೇಕು ಎಂದು ತಿಮ್ಮಾಪೂರ ಹೇಳಿದರು.

ಉಪನ್ಯಾಸ ನೀಡಿದ ಆಗಮಿಸಿದ್ದ ಪ್ರೊ.ಸಂಪತ್ ಲಮಾಣಿ, ಭಾರತ ಸಂವಿಧಾನ ಆರಂಭವಾಗುವುದೇ ಭಾರತದ ಜನತೆಯಾದ ನಾವು ಎಂದು.

ಈ ಪ್ರಸ್ತಾವನೆ ಕೊನೆಗೊಳ್ಳುವುದು ಈ ಸಂವಿಧಾನವನ್ನು ನಮಗೆ ಅರ್ಪಿಸಿಕೊಂಡು, ಅಂಗೀಕರಿಸಿ, ಅರ್ಪಿಸಿಕೊಂಡಿದ್ದೇವೆ ಎಂದು. ಆದ್ದರಿಂದ ಇನ್ನು ಯಾವ ಹೊರಗಿನ ಶಕ್ತಿಯೂ ನಮ್ಮ ಮೇಲೆ ಹೇರಿಲ್ಲ, ನಾವೇ ಬರೆದುಕೊಂಡಿದ್ದೇವೆ. ಇದು ನಮಗಾಗಿ ಇರುವ ಸಂವಿಧಾನ ಎಂದರು.

ಸಂವಿಧಾನ ಪೀಠಿಕೆಯನ್ನು ಜಿಲ್ಲಾಧಿಕಾರಿ ಸಂಗಪ್ಪ ಬೋಧಿಸಿದರು. ಸಂವಿಧಾನ ದಿನಾಚರಣೆ ಅಂಗವಾಗಿ ಹಮ್ಮಿಕೊಂಡ ಭಾಷಣ, ಚಿತ್ರಕಲಾ ಹಾಗೂ ಛಾಯಾಚಿತ್ರ ಸ್ಪರ್ಧೆಗಳಲ್ಲಿ ವಿಜೇತರನ್ನು ಹಾಗೂ 2025ನೇ ಸಾಲಿನಲ್ಲಿ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಪಡೆದ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ಜಿಲ್ಲಾಧ್ಯಕ್ಷ ಅನಿಕುಮಾರ ದಡ್ಡಿ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ

ಅಧಿಕಾರಿ ಶಶಿಧರ ಕುರೇರ, ಸಮಾಜ ಕಲ್ಯಾಣ ಇಲಖೆಯ ಉಪನಿರ್ದೇಶಕ ರಮೇಶ ಚವ್ಹಾಣ, ತಹಶೀಲ್ದಾರ ವಾಸುದೇವ ಸ್ವಾಮಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

### ಸಂವಿಧಾನ ಜಾಥಾ

ಕಾರ್ಯಕ್ರಮದ ಪೂರ್ವದಲ್ಲಿ ಜಿಲ್ಲಾಡಳಿತ ಭವನದ ಆವರಣದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ ಮೂರ್ತಿಗೆ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಮಾಲಾರ್ಪಣೆ ಮಾಡಿ ಸಂವಿಧಾನ ಜಾಥಾಕ್ಕೆ ಚಾಲನೆ ನೀಡಿದರು. ಜಾಥಾ ಜಿಲ್ಲಾಡಳಿತ ಭವನದಿಂದ ಪ್ರಾರಂಭವಾಗಿ ಎಲ್.ಐ.ಸಿ ಕಚೇರಿ ಮುಖಾಂತರ ಡಾ.ಬಿ.ಆರ್.ಅಂಬೇಡ್ಕರ ಭವನಕ್ಕೆ ಮುಕ್ತಾಯಗೊಂಡಿತು. ಮೆರವಣಿಗೆಯಲ್ಲಿ ವಿವಿಧ ಜಾನಪದ ಕಲಾತಂಡಗಳು ಪಾಲ್ಗೊಂಡಿದ್ದವು. ಸಂಸದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಶಾಸಕ ಪಿ.ಎಚ್.ಪೂಜಾರ, ರಾಜ್ಯ ಕೈಗಾರಿಕಾ ಮತ್ತು ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಸ್.ಜಿ.ನಂಜಯ್ಯನಮಠ, ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ಜಿಲ್ಲಾ ಅಧ್ಯಕ್ಷ ಅನಿಲಕುಮಾರ ದಡ್ಡಿ ಸೇರದಂತೆ ಅಧಿಕಾರಿಗಳು ಪಾಲ್ಗೊಂಡಿದ್ದರು.

# ರೈತ ವಿರೋಧಿ ನೀತಿ ಖಂಡಿಸಿ ಇಂದು ಪ್ರತಿಭಟನೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.26–ರಾಜ್ಯ ಸರ್ಕಾರದ ರೈತ ವಿರೋಧಿ ನೀತಿ ಖಂಡಿಸಿ ನ.27 ರಂದು ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಬಿಜೆಪಿ ರೈತ ಮೋರ್ಚಾ ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ ಗಡಿಯಣ್ಣವರ ಹೇಳಿದರು.

ನಗರದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರ ರೈತರಿಗೆ ಅನ್ಯಾಯ ಮಾಡಿದೆ. ಬಿಜೆಪಿ ರೈತ ಮೋರ್ಚಾ ಘಟಕದಿಂದ ಗುರುವಾರ ಬೆಳಿಗ್ಗೆ 11 ಗಂಟೆಗೆ ನವನಗರದ ಬಿಜೆಪಿ ಕಾರ್ಯಾಲಯದಿಂದ ಜಿಲ್ಲಾಧಿಕಾರಿಗಳ ಕಚೇರಿವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಗುವುದು ಎಂದರು.

2025–26ನೇ ಸಾಲಿನಲ್ಲಿ ಅತಿವೃಷ್ಠಿಯಿಂದ ನಷ್ಟಕ್ಕೊಳಗಾದ ರೈತರು ಬೆಳೆದ ಏಕದಳ, ದ್ವಿದಳ ಹಾಗೂ ತೋಟಗಾರಿಕಾ ಬೆಳೆಗಳಿಗೆ ಎಸ್‌ಡಿಆರ್‌ಎಫ್ ಹಾಗೂ ಎನ್‌ಡಿಆರ್‌ಎಫ್ ನಿಯಮಕ್ಕೆ ಅನುಸಾರವಾಗಿ ಹಾಗೂ ರಾಜ್ಯ ಸರ್ಕಾರದಿಂದ ಹೆಚ್ಚುವರಿಯಾಗಿ ಕೂಡಲೇ ಪರಿಹಾರ ಬಿಡುಗಡೆಗೊಳಿಸಬೇಕು ಎಂದು ಅವರು ಆಗ್ರಹಿಸಿದರು. ಮಾರುಕಟ್ಟೆಯಲ್ಲಿ ಮೆಕ್ಕೆಜೋಳ ಬೆಲೆ ಕುಸಿತಗೊಂಡು ರೈತರು ಕಂಗಾಲಾಗಿದ್ದಾರೆ. ಶ್ರೀಘ್ರ ಬೆಂಬಲ ಬೆಲೆಯ ದರ 2400 ರೂ.ರಂತೆ ಖರೀದಿಸಿ ರೈತರ ಬೆಂಬಲಕ್ಕೆ ಸರ್ಕಾರ ನಿಲ್ಲಬೇಕು. ಹೈನುಗಾರಿಕೆಯಿಂದ ಜೀವನ ನಡೆಸುತ್ತಿರುವ ರಾಜ್ಯದ 24 ಲಕ್ಷ ಹಾಲು ಉತ್ಪಾದಕ ರೈತ ಕುಟುಂಬಗಳು ಪಶು ಆಹಾರದ ಬೆಲೆ ಹೆಚ್ಚಳದಿಂದ ಸಂಕಷ್ಟಕ್ಕೊಳಗಾಗಿದ್ದು, ಕಾಂಗ್ರೆಸ್ ಸರ್ಕಾರ 2023 ರ ತನ್ನ ಪ್ರಣಾಳಿಕೆಯಲ್ಲಿ ಘೋಷಿಸಿದಂತೆ ಪ್ರತಿ ಲೀಟರ್‌ಗೆ ಪ್ರೋತ್ಸಾಹ ಧನವನ್ನು ರೂ.5 ರಿಂದ 7 ರೂ.ವರೆಗೆ ಹೆಚ್ಚಿಸಬೇಕು ಎಂದು ಗಡಿಯನ್ನವರ ಒತ್ತಾಯಿಸಿದರು. ರಾಜ್ಯದಲ್ಲಿ ಕಬ್ಬು ಬೆಳೆಗಾರರಿಗೆ ಸರ್ಕಾರ ನಿಗದಿಪಡಿಸಿರುವ ಪ್ರತಿ ಟನ್‌ಗೆ 3300 ರೂ. ಎಲ್ಲ ಜಿಲ್ಲೆಗಳ ರೈತರಿಗೆ ಅನ್ವಯಿಸುವಂತಾಗಬೇಕು ಎಂದು ಅವರು ಹೇಳಿದರು. ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಜು ನಾಯ್ಕರ, ಶಶಿಕುಮಾರ ಮುತ್ತಣ್ಣವರ, ದೂಳಪ್ಪ ಕೊಪ್ಪದ, ಸತ್ಯನಾರಾಯಣ ಹೇಮಾದ್ರಿ, ಶಿವಾನಂದ ಸುರಪುರ ಇದ್ದರು.

# ಹಕ್ಕು ಮತ್ತು ಕರ್ತವ್ಯಗಳ ಬಗ್ಗೆ ಅರಿವಿರಲಿ



ಮಲ್ಲಮ್ಮ ನುಡಿ ವಾರ್ತೆ

**ಬಾಗಲಕೋಟೆ:** ಎಲ್ಲರೂ ಒಂದೇ ಎಂಬ ಭಾವನೆಯನ್ನು ಬೆಳೆಸಿಕೊಳ್ಳುವುದರ ಜೊತೆಗೆ ಸಂವಿಧಾನ ನೀಡಿರುವ ಹಕ್ಕು ಮತ್ತು ಕರ್ತವ್ಯಗಳ ಬಗ್ಗೆ ತಿಳಿದುಕೊಂಡಾಗ ಮಾತ್ರ ಅದರ ಆಶಯ ಈಡೇರಬಲ್ಲದು ಎಂದು ವಿದ್ಯಾ ಪ್ರಸಾರಕ ಮಂಡಳದ ಗೌರವ ಕಾರ್ಯದರ್ಶಿ ಡಾ. ಗಿರೀಶ ಮಸೂರಕರ ಹೇಳಿದರು.

ವಿದ್ಯಾ ಪ್ರಸಾರಕ ಮಂಡಳದ ಎಸ್.ಆರ್.ನರಸಾಪೂರ ಕಲಾ ಮತ್ತು ಎಂ.ಬಿ.ಶಿರೂರ ವಾಣಿಜ್ಯ ಮಹಾವಿದ್ಯಾಲಯದ ಆಯ್‌ಕ್ಯೂಎಸಿ ಹಾಗೂ ರಾಜ್ಯಶಾಸ್ತ್ರ ವಿಭಾಗ ಸಂವಿಧಾನ ದಿನಾಚರಣೆಯ ಅಂಗವಾಗಿ ಪಿಯುಸಿ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡ ತಾಲೂಕಾ ಮಟ್ಟದ ರಸಪ್ರಶ್ನೆ ಸ್ಪರ್ಧೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಯುವಕರಲ್ಲಿ ಜಾತಿ, ಧರ್ಮ ಮೀರಿ ಒಂದು ಎಂಬ ಭಾವನೆ ಬೆಳೆದು ಬರಬೇಕು. ಡಾ.ಅಂಬೇಡ್ಕರ ಸಹಿತ ಹಲವರ ಶ್ರಮದಿಂದ ರಚನೆಗೊಂಡ ಸಂವಿಧಾನ ಸಮಾಜದಲ್ಲಿ ಏಕತಾ ಭಾವವನ್ನುಂಟು ಮಾಡುವ ಉದ್ದೇಶದಿಂದ ಎಲ್ಲರಿಗೂ ಸಮಾನತೆಯನ್ನು ನೀಡಿದೆ. ಎಲ್ಲರೂ ಸಂವಿಧಾನವನ್ನು ಸ್ವೀಕರಿಸಿದ್ದಾರೆ. ಹೀಗಾಗಿ ಅದಕ್ಕೆ ಮಹತ್ವವಿದೆ. ಅದನ್ನು ಅಧ್ಯಯನ ಮಾಡಿ, ಅದರ ತತ್ವಗಳು ಎಷ್ಟು ಪರಿಣಾಮಕಾರಿಯಾಗಿ ಅನುಷ್ಠಾನಗೊಳ್ಳುತ್ತಿವೆ ಎಂಬುದರ ಬಗ್ಗೆ ಜನತೆ ತಿಳಿದುಕೊಳ್ಳಬೇಕು ಎಂದರು.

ಪ್ರಾಚಾರ್ಯ ಶ್ರೀನಿವಾಸ ನರಗುಂದ ಮಾತನಾಡಿ, ಜನತೆಗೆ ದಾರಿ ದೀಪವಾಗಿರುವ ಸಂವಿಧಾನವು ಜನರರ ಕ್ಷಣೆಗಿರುವ ದೊಡ್ಡ ಕಾನೂನುವಾಗಿದೆ. ದೇಶದ ಪ್ರಜಾಪ್ರಭುತ್ವದ ಭದ್ರ ಬುನಾದಿ ನಮ್ಮ ಸಂವಿಧಾನವಾಗಿದೆ. ಇದರ ಮಹತ್ವವನ್ನು ಜನತೆಗೆ ತಿಳಿಸಿಕೊಡುವ ಉದ್ದೇಶದಿಂದ ಸಂವಿಧಾನ ದಿನಾಚರಣೆ ಆಚರಿಸಲಾಗಿತ್ತಿದ್ದು ವಿದ್ಯಾರ್ಥಿಗಳು ಸಂವಿಧಾನದ ತಿರುಳನ್ನು ಅರಿಯಬೇಕು ಎಂದು ಹೇಳಿದರು. ಡಾ.ಎಸ್.ಎಸ್. ಹಂಗರಗಿ, ಶ್ವೇತಾಕುಲಕರ್ಣಿ ಮತ್ತಿತರರು ಇದ್ದರು.

ರಕ್ಷಿತಾ ಮಸೂತಿ ಪ್ರಾರ್ಥಿಸಿದರು. ಸಂಯೋಜಕಿ ಕೀರ್ತಿ ದಾಸರ ಸ್ವಾಗತಿಸಿದರು. ಉಪನ್ಯಾಸಕಿ ಸವಿತಾ ಜೇವೂರ ಪ್ರತಿಜ್ಞಾವಿಧಿ ಬೋಧಿಸಿದರು. ಎಂ.ಡಿ.ಕೋರವಾರ ನಿರೂಪಿಸಿದರು. ಪ್ರಧಾನ ಕಾರ್ಯದರ್ಶಿ ದಿಲ್‌ಶಾದ ನದಾಫ್ ವಂದಿಸಿದರು.

# ರುದ್ರಪ್ಪ ಲಮಾಣಿಗೆ ಮಂತ್ರಿ ಸ್ಥಾನ ನೀಡಲು ಆಗ್ರಹ



ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:

ಹಾವೇರಿ ಶಾಸಕ ರುದ್ರಪ್ಪ ಲಮಾಣಿ ಅವರಿಗೆ ಸಚಿವ ಸ್ಥಾನ ನೀಡಬೇಕೆಂದು ಬಂಜಾರ ಸಮಾಜದ ಮುಖಂಡರು ಆಗ್ರಹಿಸಿದ್ದಾರೆ.

ನಗರದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಮುಖಂಡ ಆನಂದ ರಾಠೋಡ, 2023ರಲ್ಲಿ ನಡೆದ ವಿಧಾನಸಭೆ ಚುನಾವಣೆಯಲ್ಲಿ ಬಹುಮತದಿಂದ ಕಾಂಗ್ರೆಸ್ ಪಕ್ಷ ಗೆಲುವು ಸಾಧಿಸಲು ನಮ್ಮ ಬಂಜಾರ ಸಮಾಜ ಪ್ರಮುಖ ಪಾತ್ರ ವಹಿಸಿದೆ ಎಂದರು.

ಈಗಾಗಲೇ ಶಾಸಕ ರುದ್ರಪ್ಪ ಲಮಾಣಿ ಅವರು ವಿಧಾನಸಭೆಯ ಉಪ ಸಭಾಪತಿಯಾಗಿ ಕಾರ್ಯನಿರ್ವಹಿಸುತ್ತಿದ್ದು ಇನ್ನೂ ಹೆಚ್ಚಿನ ಸೇವೆ ಸಲ್ಲಿಸಲು ಅವರನ್ನು ಮಂತ್ರಿಯನ್ನಾಗಿ ಮಾಡಲು ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ ಹಾಗೂ ಹೈಕಮಾಂಡ್‌ಗೆ ಮನವಿ ಮಾಡಿಕೊಳ್ಳುತ್ತೇವೆ ಎಂದು ಅವರು ಹೇಳಿದರು.

ಈಗ ರುದ್ರಪ್ಪ ಲಮಾಣಿ ಒಬ್ಬರೇ ಬಂಜಾರ ಸಮಾಜದ ಶಾಸಕರಾಗಿದ್ದು ಅವರನ್ನು ಮಂತ್ರಿಯನ್ನಾಗಿ ಮಾಡಿದರೆ ನಮ್ಮ ಸಮಾಜದ ಬೆಂಬಲ ಹೆಚ್ಚಾಗುತ್ತೆ ಎಂದ ಆನಂದ ರಾಠೋಡ, ಇಲ್ಲದೇ ಹೋದರೆ ಮುಂದಿನ ದಿನಗಳಲ್ಲಿ ಬಂಜಾರ ಸಮಾಜದಿಂದ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದರು.

ಸಮಾಜದ ಮುಖಂಡರಾದ ಬಲರಾಮ ಪವಾರ, ಸಂತೋಷ ಲಮಾಣಿ, ತುಕಾರಾಮ ಲಮಾಣಿ ಇದ್ದರು.



ಬಸವಕಲ್ಯಾಣ :– ಇಲ್ಲಿನ ಶ್ರೀ ಬಸವೇಶ್ವರ ದೇವಸ್ಥಾನ ಶಿಕ್ಷಣ ಸಂಸ್ಥೆ ಅಡಿಯಲ್ಲಿ ನಡೆಯುತ್ತಿರುವ, ಅಕ್ಕಮಹಾದೇವಿ ಮಹಿಳಾ ಪ್ರಥಮ ದರ್ಜೆ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದಲ್ಲಿ ಬುಧವಾರ ಸಂವಿಧಾನ ಸಮರ್ಪಣಾ ದಿನಾಚರಣೆಯನ್ನು ಆಚರಿಸಲಾಯಿತು.ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಚಾರ್ಯರಾದ ಮಾಯಾ ಮುರಾಳೆ, ಎನ್. ಎಸ್. ಎಸ್. ಎ. ಘಟಕದ ಕಾರ್ಯಕ್ರಮದ ಅಧಿಕಾರಿಗಳಾದ ದಶರಥ ಟಿ. ಹಳ್ಳಿಖೆಡೆ. ಹಾಗೂ ಸಿಬ್ಬಂದಿ ವರ್ಗದವರು ಸೆರಿದಂತೆ ಅನೇಕರು ಉಪಸ್ಥಿತಿದ್ದರು. (ಮಲ್ಲಮ್ಮ ನುಡಿ ಚಿತ್ರ).

# 29,30ರಂದು ಐಟಿಸಿ ಮಿನಿ ಸಂಗೀತ ಸಮ್ಮೇಳನ: ಪ್ರೊ.ಎಸ್.ವಿ ಕಲ್ಮಠ

ಮಲ್ಲಮ್ಮ ನುಡಿ ವಾರ್ತೆ ಬೀದರ್: ನ. 26 :– ಈ ತಿಂಗಳ 29 ಹಾಗೂ 30ರಂದು ನಗರದ ಪೂಜ್ಯ ಡಾ.ಚನ್ನಬಸವ ಪಟ್ಟದ್ದೇವರ ರಂಗಮಂದಿರದಲ್ಲಿ ಸಂಜೆ 5 ಗಂಟೆಗೆ ಕರ್ನಾಟಕ ಕಲಾಶ್ರೀ ಪ್ರಶಸ್ತಿ ಪುರಸ್ಕೃತರು, ಸಂಗೀತ ಕಲಾ ಮಂಡಲ ಬೀದರ್ ಹಾಗೂ ಐಟಿಸಿ ಸಂಗೀತ ರಿಸರ್ಚ್ ಅಕಾಡೆಮಿ ಕಲ್ಕತ್ತಾ ಇವರ ಸಹಯೋಗದಲ್ಲಿ ಬೀದರ್ ನಲ್ಲಿ ಇದು ಮೂರನೇ ಐಟಿಸಿ ಮಿನಿ ಸಮ್ಮೇಳನ ಹಮ್ಮಿಕೊಳ್ಳಲಾಗಿದೆ ಎಂದು ಮಂಡಲದ ವಕ್ತಾರರಾದ ಪ್ರೊ. ಎಸ್.ವಿ ಕಲ್ಮಠ ಹೇಳಿದರು.

ಬುಧವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, 1962ರಲ್ಲಿ ಬೀದರನ ಖ್ಯಾತ ಉದ್ಯಮಿ ಹಾಗೂ ಸಂಗೀತ ಪ್ರೇಮಿ ದಿ. ಜಗಪಾಲಸಿಂಗ ಪವಾರ ಅವರು ಸಂಗೀತ ಕಲಾ ಮಂಡಲವನ್ನು ಸ್ಥಾಪಿಸಿದರು. ದಿ. ಮಾಣಿಕರಾವ ಫುಲೇಕರ ಶಾಸಕರು, ದಿ. ನಾಗಣ್ಣ ಜಾಬಶೆಟ್ಟಿ, ದಿ. ಮಡಿವಾಳಪ್ಪ ಮುದ್ದಾ, ದಿ.ಶಂಕರರಾವ ಜಾಗೀರದಾರ



ಸೇರಿದಂತೆ ಬೀದರನ ಖ್ಯಾತ ಗಣ್ಯರು ಜಗಪಾಲಸಿಂಗ ಪವಾರ ಅವರಿಗೆ ಸಕಲ ಸಹಕಾರ ನೀಡಿ ಸಂಗೀತ ಕಲಾ ಮಂಡಲವನ್ನು ಬೆಳೆಸಿದರು. ದಿ. ಜಗಪಾಲಸಿಂಗ ಪವಾರ ಸಂಸ್ಥಾಪಕ ಅಧ್ಯಕ್ಷರಾಗಿ ಸಂಗೀತ ಕಲಾ ಮಂಡಲದ ವತಿಯಿಂದ ರಾಜ್ಯ ಮತ್ತು ರಾಷ್ಟ್ರ ಮಟ್ಟದ ಸಂಗೀತ, ನೃತ್ಯ ಕಲಾವಿದರನ್ನೊಳಗೊಂಡ ಸಂಗೀತ ಸಮ್ಮೇಳನವನ್ನು ಬೀದರ್‌ನಲ್ಲಿ ಆಯೋಜಿಸಿದ್ದರು. ರಾಷ್ಟ್ರ ಮಟ್ಟದ ಸಂಗೀತಗಾರರಾದ ಡಾ. ಪಂ. ಪುಟ್ಟರಾಜ ಕವಿಗವಾಯಿ ಗದಗ, ಭಾರತ ರತ್ನ ಭೀಮಸೇನ ಜೋಶಿ, ಪಂ. ಬಸವರಾಜ ಗುರು, ಪಂ. ಶಿವಕುಮಾರ ಶರ್ಮಾ(ಸಂತೂರ ವಾದಕರು) ಉಸ್ತಾದ ಝಾಕೀರ ಹುಸೇನ (ತಬಲಾ ವಾದಕರು), ವಿದುಷಿ ಪರದೀನ ಸುಲ್ತಾನಾ, ವಿದುಷಿ ಮಾಲಿನಿ ರಾಜುರಕರ್, ಪಂ. ಅಜಯ ಚಕ್ರವರ್ತಿ ಮುಂತಾದವರು ಸಮ್ಮೇಳನದಲ್ಲಿ ಭಾಗವಹಿಸಿ ಬೀದರಿನ ಹೆಸರು ಪ್ರಸಿದ್ಧಿಪಡಿಸಿದ್ದರು. ರಾಷ್ಟ್ರ ಮತ್ತು ರಾಜ್ಯ ಮಟ್ಟದ ಕಲಾವಿದರಿಂದ ಸಂಗೀತ ಹಾಗೂ ನೃತ್ಯ ಕಾರ್ಯಕ್ರಮಗಳು, ಹೈದ್ರಾಬಾದ ಕರ್ನಾಟಕ ಸಂಗೀತ ಸಮ್ಮೇಳನಗಳು 1983, 1984 ರಲ್ಲಿ ಪ್ರಥಮ ಖಿಖಿಅ ಸಂಗೀತ ಸಮ್ಮೇಳನ, 1990ರಲ್ಲಿ ದ್ವಿತೀಯ ಖಿಖಿಅ ಸಂಗೀತ ಸಮ್ಮೇಳನ, 1995ರಲ್ಲಿ ಡಾ. ಪಂ. ಪುಟ್ಟರಾಜ ಕವಿ ಗವಾಯಿ ಅವರ 155ನೇ ತುಲಾಭಾರ ಹಾಗೂ ಸಂಗೀತ ಕಾರ್ಯಕ್ರಮ, ಹಾರ್ಮೋನಿಯಂ ವಾದಕರೆಂದು ಜಗಪಾಲಸಿಂಗ ಪವಾರ ಅವರ ನಿಧನದ ನಂತರ ಅವರ ಜೈಷ್ಠ ಸುಪುತ್ರ ರಾಜೇಂದ್ರಸಿಂಗ ಪವಾರ ಅವರು ಕಲಾಮಂಡಲದ ಅಧ್ಯಕ್ಷರಾದರು. ಪ್ರಖ್ಯಾತ ರಾಷ್ಟ್ರಮಟ್ಟದಲ್ಲಿ ಗುರುತಿಸಿಕೊಂಡಿರುತ್ತಾರೆ. 2017ರಲ್ಲಿ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪಡೆದಿರುತ್ತಾರೆ. ಸುಮಾರು 25 ವರ್ಷಗಳಿಂದ ನಿರಂತರವಗಿ ಇವರು ಹಲವಾರು ಸಂಗೀತ ಕಾರ್ಯಕ್ರಮಗಳನ್ನು ಆಯೋಜಿಸಿರುತ್ತಾರೆ ಎಂದವರು ತಿಳಿಸಿದರು. ದಿ. ಜಗಪಾಲಸಿಂಗ ಪವಾರ ಅವರ ಪುಣ್ಯತಿಥಿ ಅಂಗವಾಗಿ ಜೆಎಸ್‌ಪಿ ಪ್ರಶಸ್ತಿ ಪ್ರದಾನ ಸನ್ಮಾನ ಹಾಗೂ ಸಂಗೀತ ಕಾರ್ಯಕ್ರಮ, ಬಸಂತ ಪಂಚಮಿ, ಸರಸ್ವತಿ ದೇವಿ ಉತ್ಸವಗಳ ಆಚರಣೆಯ ಅಂಗವಾಗಿ ಸಂಗೀತ ಕಾರ್ಯಕ್ರಮಗಳು, ರಾಷ್ಟ್ರ ಖ್ಯಾತ ಹಿನ್ನೆಲೆ ಗಾಯಕಿ ಲತಾ ಮಂಗೇಶಕರ್ ಅವರ ಜನ್ಮದಿನ ಅಂಗವಾಗಿ ಸಂಗೀತ ಕಾರ್ಯಕ್ರಮ ಆಯೋಜಿಸಿದ್ದಾರೆ. ಇತರ ಸ್ಥಳೀಯ ಕಲಾವಿದರ ಸಂಗೀತ ಕಾರ್ಯಕ್ರಮಗಳು, ಸಂಗೀತ ಕಲಾ ಮಂಡಲದ ವತಿಯಿಂದ ಸಂಗೀತ ಕಲಾ ಮಂಡಲ ಭವನದ ಕಟ್ಟಡ ನಿರ್ಮಾಣ ಮಾಡಿರುತ್ತಾರೆ. ಸಂಗೀತ ಪಾಠಶಾಲೆ ನಡೆಸಿಕೊಂಡು ಬಂದಿರುತ್ತಾರೆ. ಕರ್ನಾಟಕ ಕಲಾಶ್ರೀ ಪ್ರಶಸ್ತಿ: 2003, 2003ರಲ್ಲಿ ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ ಬೆಂಗಳೂರು ವತಿಯಿಂದ ಸಂಗೀತ ಕಲಾಮಂಡಲ ಬೀದರಕ್ಕೆ 'ಕಲಾಶ್ರೀ' ಪ್ರಶಸ್ತಿ ನಿಡಲಾಯಿತು ಎಂದು ತಿಳಿಸಿದರು. ದಿನಾಂಕ 29 ಮತ್ತು 30ನೇ ನವೆಂಬರ್ 2025ರಂದು ಬೀದರನ ಡಾ. ಚನ್ನಬಸವ ಪಟ್ಟದೇವರು ರಂಗಮಂದಿರದಲ್ಲಿ ಖಿಖಿಅ ಸಂಗೀತ ಕಲಾವಿದರ ಎರಡು ದಿನಗಳ ಸಂಗೀತ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ. ದಿನಾಂಕ 29.11.2025 ರಂದು ಸಾಯಂಕಾಲ 5 ಗಂಟೆಗೆ ಜರುಗುವ ಸಂಗೀತ ಕಾರ್ಯಕ್ರಮದ ಉದ್ಘಾಟನಾ ಸಮಾರಂಭದ ದಿವ್ಯ ಸಾನಿಧ್ಯವನ್ನು. ಪೂಜ್ಯ ಡಾ. ರಾಜಶೇಖರ ಶಿವಾಚಾರ್ಯರು ವಹಿಸಲಿರುವರು. ಪೂಜ್ಯ ಆನಂದರಾಜ ಮಹಾರಾಜರು ಕಾರ್ಯಕ್ರಮವನ್ನು ಉದ್ಘಾಟಿಸಲಿರುವರು. ಪೂಜ್ಯಶ್ರೀ ಜ್ಯೋತಿರ್ಮಯಾನಂದ ಸ್ವಾಮೀಜಿಯವರು ಅಧ್ಯಕ್ಷತೆ ವಹಿಸಲಿರುವರು. ಮುಖ್ಯ ಅತಿಥಿಗಳಾಗಿ ಶಿವಶರಣಪ್ಪಾ ವಾಲಿ, ಸದಾನಂದ ಜೋಶಿ, ಪಂ. ರಾಮುಲು ಗಾದಗೆಯವರು ಭಾಗವಹಿಸಲಿರುವರು. ಡಿ.. ಎಸ್ ಜೋಶಿ ಹಾಗೂ ಶ್ರೀಮತಿ ವಿದ್ಯಾ ಲದ್ದೆ ಅವರು ಸಂಚಾಲನೆ ಮಾಡಲಿರುವರು. ನ.29ರಂದು ಜರುಗುವ ಸಂಗೀತ ಕಾರ್ಯಕ್ರಮದಲ್ಲಿ ಕು. ಶ್ರೇಯಾ ಬಿಟರ್ಜಿ ಅವರ ಗಾಯನಕ್ಕೆ ಅಶೋಕ ಮುಖರ್ಜಿಯವರು ತಬಲಾ ಸಾಥ ಹಾಗೂ ಕೃಷ್ಣ ಮುಖೇಡಿಕರ್ ಹಾರ್ಮೋನಿಯಂ ಸಾಥ ನೀಡುವರು. ನಂತರ ಜರುಗುವ ಅಬೀರ ಹುಸೇನ್ ಅವರ ಸರೋದ ವಾದ್ಯ ಸಂಗೀತಕ್ಕೆ ವೆಂಕಟೇಶ ಡಿ.ಸಿ. ಅವರು ತಬಲಾ ಸಾಥ ನೀಡುವರು.ನ.30 ರಂದು 5.00 ಗಂಟೆಗೆ ಆಯನಸೇನ್ ಗುಪ್ತಾ ಅವರ ಸಿತಾರವಾದನಕ್ಕೆ ಯಶವಂತ ವೈಷ್ಣವ ಅವರು ತಬಲಾ ಸಾಥ ನೀಡಲಿದ್ದಾರೆ. ನಂತರ ಪದ್ಮಶ್ರೀ ಪಂ. ಉಲ್ಲಾಸ ಕುಶಾಲಕರ ಅವರ ಗಾಯನಕ್ಕೆ ಪದ್ಮಶ್ರೀ ತಾಲಯೋಗಿ ಪಂ. ಸುರೇಶ ತಲವಲಕರ್ ತಬಲಾ ಸಾಥ ಹಾಗೂ ಕೃಷ್ಣ ಮುಬೇಡಕರ ಹಾರ್ಮೋನಿಯಂ ಸಾಥ ನೀಡುವರು.ಈ ಎರಡು ದಿವಸಗಳ ಕಾರ್ಯಕ್ರಮದಲ್ಲಿ ಸಂಗೀತಾಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಪ್ರೊ.ಕಲ್ಮಠ ಕೋರಿದರು. ಸಂಗೀತ ಕಲಾಮಂಡಲದ ಅಧ್ಯಕ್ಷ ಪಂಡಿತ್ ರಾಜೇಂದ್ರ ಸಿಂಗ್ ಪವಾರ್, ಶಿವರಾಜ ಕಲಶೆಟ್ಟಿ ಪತ್ರಿಕಾಗೋಷ್ಠಿಯಲ್ಲಿದ್ದರು.

# ಕಾರ್ಮಿಕ ಕಾಯ್ದೆ ತಿದ್ದುಪಡಿ ವಿರೋಧಿಸಿ ಪ್ರತಿಭಟನೆ




ಮಲ್ಲಮ್ಮ ನುಡಿ ವಾರ್ತೆಬಾಗಲಕೋಟೆ:

ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಕಾರ್ಮಿಕ ಕಾಯ್ದೆಗೆ ತಂದಿರುವ ತಿದ್ದುಪಡಿಗಳನ್ನು ಹಿಂಪಡೆಯಬೇಕು ಎಂದು ಆಗ್ರಹಿಸಿ ಜಿಲ್ಲಾ ಕಾಂಗ್ರೆಸ್ ಕಾರ್ಮಿಕ ವಿಭಾಗ ಹಾಗೂ ಐಎನ್‌ಟಿಯುಸಿ ವಿಭಾಗದಿಂದ ಬುಧವಾರ ಪ್ರತಿಭಟನೆ ನಡೆಸಲಾಯಿತು.

ನವನಗರದ ಜಿಲ್ಲಾಡಳಿತ ಭವನ ಎದುರು ಪ್ರತಿಭಟನೆ ನಡೆಸಿ ಕೇಂದ್ರ ಸರ್ಕಾರ ಜಾರಿಗೊಳಿಸಿರುವ ಕಾರ್ಮಿಕ ಹೊಸ ಕಾಯ್ದೆ ವಿರೋಧಿ ನೀತಿಯನ್ನು ಖಂಡಿಸಲಾಯಿತು.

ಮೋದಿ ಸರ್ಕಾರ ಜಾರಿಗೆ ತಂದಿರುವ ಹೊಸ ಕಾರ್ಮಿಕ ಸಂಹಿತೆಗಳು ದೇಶದ ಕಾರ್ಮಿಕರ ಹಕ್ಕುಗಳನ್ನು ಕೆಡಿಸುತ್ತಿದ್ದು, ಶೋಷಣೆಯನ್ನು ಹೆಚ್ಚಿಸುವಂತಿದೆ. ಕಾರ್ಮಿಕರ ಹಿತದಾಯಕವೆಂದು ಸುಳ್ಳು ಪ್ರಚಾರ ಮಾಡುತ್ತಿದ್ದು ಈ ಕಾನೂನುಗಳು ನೇರವಾಗಿ ಕಾರ್ಮಿಕರ ಜೀವನೋಪಾಯಕ್ಕೆ ಧಕ್ಕೆ ತರಬಲ್ಲ ಅಪಾಯಕಾರಿ ಕ್ರಮವಾಗಿದೆ ಎಂದು ಮನವಿ ಪತ್ರದಲ್ಲಿ ತಿಳಿಸಲಾಗಿದೆ.

ಕಾರ್ಮಿಕರು ದೇಶ ನಿರ್ಮಾಣದ ಕಂಬಗಳು. ಅವರ ಹಕ್ಕುಗಳನ್ನು ಕಿತ್ತುಕೊಂಡು ಕಾರ್ಪೋರೇಟ್‌ಗಳ ಲಾಭಕ್ಕೆ ಸರ್ಕಾರ ಮಣೆ ಹಾಕುತ್ತಿದೆ ಎಂಬುದು ಸ್ಪಷ್ಟ. ಬಾಗಲಕೋಟೆ ಜಿಲ್ಲಾ ಕಾಂಗ್ರೆಸ್ ಕಾರ್ಮಿಕ ವಿಭಾಗ ಈ ಕಾರ್ಮಿಕ ವಿರೋಧಿ ಕಾನೂನುಗಳ ವಿರೋಧಿಸುತ್ತಿದ್ದು, ತಕ್ಷಣ ತಿದ್ದುಪಡಿಯನ್ನು ಹಿಂಪಡೆಯುವಂತೆ ಪ್ರತಿಭಟನಾಕಾರರು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಎಸ್.ಜಿ.ನಂಜಯ್ಯನಮಠ, ಪ್ರಚಾರ ಸಮಿತಿ ಅಧ್ಯಕ್ಷ ನಾಗರಾಜ ಹದ್ಲಿ, ಪ್ರಧಾನ ಕಾರ್ಯದರ್ಶಿ ಶ್ರೀನಿವಾಸ ಬಳ್ಳಾರಿ, ಕಾರ್ಮಿಕ ವಿಭಾಗದ ಜಿಲ್ಲಾಧ್ಯಕ್ಷ ಅಭಿಷೇಕ ತಳ್ಳಿಕೇರಿ, ತೌಫೀಕ್ ಪಾರ್ಥಹಳ್ಳಿ, ಜಿ.ಜಿ.ಮಾಗನೂರ, ಕುಮಾರ ಬಿಂಜವಾಡಗಿ, ಶರಣಪ್ಪ ಮಾಗನೂರ, ನಿಂಗಪ್ಪ ಗಸ್ತಿ, ಕುತುಬುದ್ದೀನ ಖಾಜಿ, ರಾಜು ಮನ್ನಿಕೇರಿ, ಶ್ರೀಧರ ನೀಲನಾಯಕ, ಶ್ರವಣ ಖಾತೇದಾರ, ವೈ. ವೈ.ತಿಮ್ಮಾಪೂರ, ರೇಣುಕಾ ನ್ಯಾಮಗೌಡ, ರೇಣುಕಾ ನಾರಾಯಣಕರ, ಪ್ರಭು ರುದ್ರಾಕ್ಷಿ ಸೇರಿದಂತೆ ಅನೇಕ ಕಾರ್ಯಕರ್ತರು ಭಾಗವಹಿಸಿದ್ದರು.

# ಸಂವಿಧಾನ ಸಮರ್ಪಣಾ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ: ನ. ಇಲ್ಲಿನ ಶ್ರೀ ಬಸವೇಶ್ವರ ಪದವಿ ಕಾಲೇಜಿನಲ್ಲಿ ಬುಧವಾರ ಹಮ್ಮಿಕೊಂಡಿದ್ದ ಸಂವಿಧಾನ ಸಮರ್ಪಣಾ ದಿನಾಚರಣೆ ಸಮಾರಂಭದಲ್ಲಿ ಸಂಸ್ಥೆಯ ಆಡಳಿತಾಧಿಕಾರಿ ಡಾ. ಮಲ್ಲಿಕಾರ್ಜುನ ಲಕಶೆಟ್ಟೆ, ಶ್ರೀ ಬಸವೇಶ್ವರ ಪದವಿ ಕಾಲೇಜು ಪ್ರಾಚಾರ್ಯರಾದ ಡಾ. ಭೀಮಾಶಂಕರ ಬಿರಾದಾರ, ಶ್ರೀ ಬಸವೇಶ್ವರ ಪದವಿ ಪೂರ್ವ ಕಾಲೇಜು ಪ್ರಾಚಾರ್ಯರಾದ ಡಾ. ರುದ್ರಮಣಿ ಮಠಪತಿ, ಶ್ರೀ ಬಸವೇಶ್ವರ ಸ್ನಾತಕೋತ್ತರ ಪದವಿ ಕಾಲೇಜು ಪ್ರಾಚಾರ್ಯರಾದ ಡಾ. ಶಾಂತಲಾ ಪಾಟೀಲ, ಡಾ. ಬಸವರಾಜ ಖಂಡಾಳೆ, ಸಂಗೀತಾ ಮಹಾಗಾಂವೆ, ಚನ್ನಬಸಪ್ಪ ಗೌರ, ವಿವೇಕಾನಂದ ಶಿಂದೆ, ಶ್ರೀನಿವಾಸ ಉಮಾಪುರೆ, ಜಗದೇವಿ ಜಾವಳಗೆ, ಗಂಗಾಧರ ಸಾಲಿಮಠ , ಪ್ರೀಯಾ ಚೌಹಾಣ್, ಪವನ್ ಪಾಟೀಲ, ನಾಗರಾಜ ನಾಸೆ, ಕೃಷ್ಣ ಗೌಳಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಕೆಡಿಪಿ ಸದಸ್ಯರಾದ ಪಿಂಟು ಅವರಿಗೆ ಸನ್ಮಾನ.

ಮಲ್ಲಮ್ಮನುಡಿವಾರ್ತೆ.ಬಸವಕಲ್ಯಾಣ :– ನ. ತಾಲೂಕಿನ ಪ್ರತಾಪೂರ ಗ್ರಾಮದಲ್ಲಿ ಗ್ರಾಮಸ್ಥರ ವತಿಯಿಂದ ಹಾಗೂ ಗ್ರಾಮ ಪಂಚಾಯತ ವತಿಯಿಂದ ಸನ್ಮಾನಿಸಿ ಅಭಿನಂದಿಸಲಾಯಿತು. ಈ ಸಂದರ್ಭದಲ್ಲಿ ಪಂಚಾಯತ ಅಭಿವೃದ್ಧಿ ಅಧಿಕಾರಿಗಳಾದ ಚಂದ್ರಾಮ ಧೂಳಖೇಡ್, ಗ್ರಾಮ ಪಂಚಾಯತ ಅಧ್ಯಕ್ಷೆ ಶೋಭಾ ಆರ್.ಮೇತ್ರೆ, ಬೌದ್ಧಾಚಾರ್ಯ ರವೀಂದ್ರ ಗುರೂಜಿ, ಗ್ರಾಮ ಪಂಚಾಯತ ಸದಸ್ಯರಾದ ಖುರ್ಷಿದ್ ಅಹ್ಮದ್, ಬಾಲಾಜಿ ಕಾಂಬಳೆ, ಸಂತೋಷ ಬಿರಾದಾರ, ವಿದ್ಯಾಸಾಗರ ಉಡ್ಬನ್, ಇಸ್ಮಾಯಿಲ್ ಬಡಾಯಿ, ಮಾಜಿ ಗ್ರಾಮ ಪಂಚಾಯತ ಅಧ್ಯಕ್ಷರಾದ ನಾಗೇಶ ಕಾಂಬಳೆ, ಮಾಜಿ ಗ್ರಾಮ ಪಂಚಾಯತ ಸದಸ್ಯ ಗೌಸೋದ್ದಿನ್, ಡಾ.ಬಿ.ಆರ್. ಅಂಬೇಡ್ಕರ್ ಪಂಚ ಕಮಿಟಿಯ ಗೌರವಾಧ್ಯಕ್ಷ ಮನೋಹರ ಕಾಂಬಳೆ, ಅಧ್ಯಕ್ಷ ಶೇಷೆರಾವ ಗಾಯಕವಾಡ,



ಉಪಾಧ್ಯಕ್ಷ ಬಾಬುರಾವ ಕಾಂಬಳೆ, ಕಾರ್ಯದರ್ಶಿ ಬಾವುರಾವ ಕಾಂಬಳೆ, ಸದಸ್ಯರಾದ ರಮೇಶ ಕಾಂಬಳೆ, ಪ್ರಲ್ಹಾದ ಕಾಂಬಳೆ, ರವಿ ಕಾಂಬಳೆ, ಭಾಗ್ಯವಾನ ಗಾಯಕವಾಡ, ವಾಮನ ಗಾಯಕವಾಡ. ಪ್ರಮುಖರಾದ ವಿಲಾಸ ಗಾಯಕವಾಡ, ಧನರಾಜ ಚೂನೆ, ಗೋವಿಂದ ಕಾಂಬಳೆ, ಗೌತಮ ಖರ್ಗೆ, ಸಂದೇಶ ಕಾಂಬಳೆ, ವಿಶಾಲ ಕಾಂಬಳೆ, ಸಿದ್ಧಾರ್ಥ ಗಾಯಕವಾಡ, ಪ್ರಭಾವತಿ, ವಂದನಾಬಾಯಿ, ಅನುಸಯಾ ಕಾಂಬಳೆ, ಅಹುಬಾಯಿ ಸೂರ್ಯವಂಶಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಕಾರ್ಮಿಕ ಸಂಘಟನೆಗಳೊಂದಿಗೆ ಸಭೆ ಕಾರ್ಮಿಕ ಕಾಯ್ದೆ ಕುರಿತು ಅರಿವು



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಕೇಂದ್ರ ಸರ್ಕಾರದ ಕಾರ್ಮಿಕ ಮತ್ತು ಉದ್ಯೋದ ಸಚಿವಾಲಯದ ಕಾರ್ಮಿಕರ ಭವಿಷ್ಯ ನಿಧಿ ಸಂಘನೆಯ ಪ್ರಾದೇಶಿಕ ಆಯುಕ್ತ ಎಂ.ಸುಬ್ರಮಣ್ಯಮ್ ಅವರ ಅಧ್ಯಕ್ಷತೆಯಲ್ಲಿ ಮಂಗಳವಾರ ಕಲಬುರಗಿಯ ಇ.ಪಿ.ಎಫ್.ಓ ಕಚೇರಿಯಲ್ಲಿ ಕಾರ್ಮಿಕ ಸಂಘಟನೆಗಳೊಂದಿಗೆ ಸಂವಾದ ನಡೆಸಿ ಕಾರ್ಮಿಕರಿಗೆ ವಿವಿಧ ಸವಲತ್ತು ಒದಗಿಸುವ ನಾಲ್ಕು ಕಾರ್ಮಿಕ ಸಂಹಿತೆ ಕುರಿತು ಅರಿವು ಮೂಡಿಸಲಾಯಿತು.

ವೇತನ ಸಂಹಿತೆ-2019, ಕೈಗಾರಿಕಾ ಸಂಬಂಧ ಸಂಹಿತೆ-2020,ಸಾಮಾಜಿಕ ಭದ್ರತೆ ಸಂಹಿತೆ-2020 ಮತ್ತು ಔದ್ಯೋಗಿಕ ಸುರಕ್ಷತೆ, ಆರೋಗ್ಯ ಮತ್ತು ಕೆಲಸದ ಪರಿಸ್ಥಿತಿಗಳ ಸಂಹಿತೆ-2020 ಕುರಿತು ವಿವವರವಾಗಿ ಕಾರ್ಮಿಕ ಸಂಘಟನೆ ಮುಖಂಡರಿಗೆ ತಿಳುವಳಿಕೆ ನೀಡಿದಲ್ಲದೆ ಕರಪತ್ರ ಹಂಚಲಾಯಿತು. ಉದ್ಯೋಗಸ್ಥರು ಮತ್ತು ಉದ್ಯೋಗದಾತರ ಪಾತ್ರಗಳ ಬಗ್ಗೆಯೂ ತಿಳಿ ಹೇಳಿದಲ್ಲದೆ ಈ ಕುರಿತು ಕಾರ್ಮಿಕ ವರ್ಗಕ್ಕೆ ಕಾರ್ಮಿಕ ಸಂಹಿತೆಗಳಿಂದ ಸಿಗುವ ಪ್ರಯೋಜನಗಳ ಕುರಿತು ವಿವರಿಸಲಾಯಿತು. ಟ್ರೇಡ್ ಯೂನಿಯನ್ ಪ್ರತಿನಿಧಿಗಳ ಪ್ರಶ್ನೆಗಳಿಗೂ ಸಭೆಯಲ್ಲಿ ಸ್ಪಷ್ಟನೆ ನೀಡಲಾಯಿತು.

ಸಭೆಯಲ್ಲಿ ಕಲಬುರಗಿ ಇ.ಎಸ್.ಐ.ಸಿ ಯ ಜಂಟಿ ನಿರ್ದೇಶಕ ಯುವರಾಜ್, ಉಪ ನಿರ್ದೇಶಕ ರಮೇಶ್ ರೈ, ಸಹಾಯಕ ಕಾರ್ಮಿಕ ಆಯುಕ್ತ(ಕೇಂದ್ರ) ಅಶ್ವಿನಿ ಕುಮಾರ್ ಯಾದವ್ ಹಾಗೂ ಸಹಾಯಕ ಪಿ.ಎಫ್ ಆಯುಕ್ತ ಭರತ್ ಲಾಲ್ ಮೀನಾ ಸೇರಿದಂತೆ ಸಿ.ಐ.ಟಿ.ಯು, ಐ.ಎನ್.ಟಿ.ಯು.ಸಿ ಹಾಗೂ ಎ.ಐ.ಯು.ಯು.ಸಿಯ ಮುಖಂಡರು ಭಾಗವಹಿಸಿದ್ದರು.

# ರಾಷ್ಟ್ರೀಯ ಕೈಗಾರಿಕಾ ಕಾರಿಡಾರ್ ಅಭಿವೃದ್ಧಿಗೆ ಕೇಂದ್ರದ ಒಲವು



ಮಲ್ಲಮ್ಮ ನುಡಿ ವಾರ್ತೆ ನವದೆಹಲಿ: ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಅವರಿಂದ ಪ್ರಸ್ತಾಪಿತ ಕರ್ನಾಟಕದ 9 ಜಿಲ್ಲೆಗಳನ್ನು ಒಳಗೊಂಡ ರಾಷ್ಟ್ರೀಯ ಕೈಗಾರಿಕಾ ಕಾರಿಡಾರ್ ಅಭಿವೃದ್ಧಿ ಕಾರ್ಯಕ್ರಮಕ್ಕೆ ಕೇಂದ್ರ ಸರ್ಕಾರ ಸಕಾರಾತ್ಮಕವಾಗಿ ಸ್ಪಂದಿಸಿದೆ.

ಕರ್ನಾಟಕದ ಕೈಗಾರಿಕೆ ಹಾಗೂ ಸಾಗಣೆ ಕ್ಷೇತ್ರಗಳಿಗೆ ಪರಿವರ್ತನಾತ್ಮಕ ಕಾಯಕಲ್ಪ ನೀಡುವ ಈ ಯೋಜನೆಗೆ ಕೇಂದ್ರದ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಅವರು ಸಕಾರಾತ್ಮಕವಾಗಿ ಸ್ಪಂದಿಸಿದ್ದು; ರಾಜ್ಯದ ಪ್ರಮುಖ ಜಿಲ್ಲೆಗಳಲ್ಲಿ ಒಂಬತ್ತು ಕೈಗಾರಿಕಾ ಪಾರ್ಕ್ ಗಳನ್ನು ಸ್ಥಾಪಿಸುವ ಬಗ್ಗೆ ಒಲವು ತೋರಿದ್ದು, ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರಿಗೆ ಪತ್ರ ಬರೆದಿದ್ದಾರೆ.2025 ನವೆಂಬರ್ 13ರಂದು ಪಿಯೂಷ್ ಗೋಯಲ್ ಅವರನ್ನು ಭೇಟಿಯಾಗಿದ್ದ ಸಚಿವ ಕುಮಾರಸ್ವಾಮಿ ಅವರು; ಮಂಡ್ಯ, ಮೈಸೂರು, ಚಾಮರಾಜನಗರ, ಕೋಲಾರ, ಹಾಸನ, ಮಂಗಳೂರು, ಹುಬ್ಬಳ್ಳಿ-ಧಾರವಾಡ, ರಾಯಚೂರು ಮತ್ತು ಬೀದರ್ ಜಿಲ್ಲೆಗಳನ್ನು ಒಳಗೊಂಡ ಸುವಿಶಾಲವಾದ ರಾಷ್ಟ್ರೀಯ ಕೈಗಾರಿಕಾ ಕಾರಿಡಾರ್ ಅಭಿವೃದ್ಧಿ ಕಾರ್ಯಕ್ರಮ (ಓಐಅಆಕ) ಅನುಷ್ಠಾನ ಮಾಡಬೇಕೆಂದು ಕೋರಿ ಮನವಿಯನ್ನು ಸಲ್ಲಿಸಿ ಮಾತುಕತೆ ನಡೆಸಿದ್ದರು.

ಕುಮಾರಸ್ವಾಮಿ ಅವರ ಪ್ರಸ್ತಾವನೆಯನ್ನು ರಾಜ್ಯದ ಅಭಿವೃದ್ಧಿಗೆ ಪರಿವರ್ತನಾತ್ಮಕ ಪರಿಕಲ್ಪನೆ ಎಂದು ಶ್ಲಾಘಿಸಿದ್ದ ಗೋಯೆಲ್ ಅವರು, ಈ ಬಗ್ಗೆ ಉತ್ತರವನ್ನು ಬರೆದಿದ್ದಾರೆ. ಕರ್ನಾಟಕದ ಪ್ರಾದೇಶಿಕ ಸಮತೋಲಿತ ಕೈಗಾರಿಕಾ ಅಭಿವೃದ್ಧಿಗೆ ಇದು ಪೂರಕವಾಗಿದೆ. ಇಂಥ ಆಕಾಂಕ್ಷೆಗಳನ್ನು ಈಡೇರಿಸುವ ಕೇಂದ್ರದ ರಚನಾತ್ಮಕ ಕೇಂದ್ರನೀತಿಯನ್ನು ಕಾರ್ಯರೂಪಕ್ಕೆ ತರುವಲ್ಲಿ ಈ ಕ್ರಮವು ಒಂದು ಪ್ರಮುಖ ಆರಂಭಿಕ ಹೆಜ್ಜೆಯಾಗಿದೆ ಎಂದು ಸಚಿವ ಗೋಯೆಲ್ ಅವರು ತಿಳಿಸಿದ್ದಾರೆ.

ಕೈಗಾರಿಕೆ ಕ್ಷೇತ್ರದಲ್ಲಿ ಮುಂಚೂಣಿ ರಾಜ್ಯವಾಗಿರುವ ಕರ್ನಾಟಕದಾದ್ಯಂತ ಸೂಕ್ತ ಕೈಗಾರಿಕಾ ಕಾರಿಡಾರ್ ಯೋಜನೆಯ ಚೌಕಟ್ಟಿನಡಿಯಲ್ಲಿ ಕೈಗಾರಿಕಾ ಪಾರ್ಕುಗಳನ್ನು ಸ್ಥಾಪಿಸುವ ಕುರಿತಂತೆ ಗೋಯೆಲ್ ಅವರನ್ನು ಕುಮಾರಸ್ವಾಮಿ ಅವರು ಮನವೊಲಿಸಿದ್ದರು.

# ಮಗುವಿನ ದತ್ತು ಪ್ರಕ್ರಿಯೆ

## ಕಾನೂನಾತ್ಮಕವಾಗಿರಲಿ: ಡಾ ಗಣೇಶ್




ಮಲ್ಲಮ್ಮ ನುಡಿ ವಾರ್ತೆ ರಾಯಚೂರು: ಜನ್ಮವೆತ್ತುವ ಪ್ರತಿಯೊಂದು ಮಗುವಿನ ಜೀವನದ ಭವಿಷ್ಯಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕಿದ್ದು, ಅದರಲ್ಲೂ ಅನಾಥ, ನಿರ್ಗತಿಕ ಹಾಗೂ ಪರಿತ್ಯಕ್ತ ಮಕ್ಕಳಿಗೂ ಕೂಡ ಪ್ರೀತಿ, ವಾತ್ಸಲ್ಯ, ಮಮತೆ ಹಾಗೂ ಬಾಂಧವ್ಯವನ್ನು ಕಾನೂನಾತ್ಮಕವಾಗಿ ದತ್ತು ತೆಗೆದುಕೊಳ್ಳುವ ಕುರಿತು ಮಾಹಿತಿ ನೀಡಬೇಕು ಎಂದು ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ ಗಣೇಶ್ ಕೆ ಅವರು ತಿಳಿಸಿದರು.ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ಮಕ್ಕಳ ರಕ್ಷಣಾ ಘಟಕ ರವರ ಸಹಯೋಗದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕೃಷ್ಣಾ ಸಭಾಂಗಣದಲ್ಲಿ ದತ್ತು ಮಾಸಾಚರಣೆ ಪ್ರಯುಕ್ತ ವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿಯವರಿಗೆ ನವೆಂಬರ್ 26ರಂದು ಜರುಗಿದ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿ, ಪ್ರಸ್ತುತ ವರ್ಷ ವಿಶೇಷ ಅಗತ್ಯತೆಯುಳ್ಳ ಮಕ್ಕಳನ್ನು ಸಹ ದತ್ತು ತೆಗೆದುಕೊಂಡು ಹೊಸ ಬದುಕಿಗೆ ಅವಕಾಶ ಮಾಡಿಕೊಡಲು ಜನತೆಯು ಮುಂದೆ ಬರಲು ಜನಜಾಗೃತಿ ನೀಡಬೇಕು ಎಂದು ತಿಳಿಸಿದರು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ರಕ್ಷಣಾಧಿಕಾರಿ ಕಿರಲಿಂಗಪ್ಪ ಮಾತನಾಡಿ, ಯಾವುದೋ ಕಾರಣ, ಸಂದಿಗ್ಧ ಸನ್ನಿವೇಶಗಳಿಂದ ಕಂದಮ್ಮಗಳನ್ನು ಬೀದಿ, ತಿಪ್ಪೆ, ಕಾಲುವೆ ಬದಿ ಬಿಟ್ಟುಹೋಗುವ ಹಲವಾರ ಉದಾಹರಣೆಗಳಿವೆ. ಈ ಸಂದರ್ಭದಲ್ಲಿ ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಎಮ್ ಶಾಕೀರ್ ಮೊಹಿಯುದ್ದೀನ್, ಜಿಲ್ಲಾ ಕುಟುಂಬ ಕಲ್ಯಾಣ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ಶಿವಕುಮಾರ್, ಡಾ.ಶೀತಲ್, ಬಾಯಿ ಆರೋಗ್ಯ ನೋಡಲ್ ಅಧಿಕಾರಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಡಿವೈಹೆಚ್‌ಓ ಬಸಯ್ಯ, ಆಪ್ತ ಸಹಾಯಕರಾದ ಲೇಪಾಕ್ಷಯ್ಯ, ಮಕ್ಕಳ ರಕ್ಷಣಾ ಘಟಕದ ತಿಕ್ಕಯ್ಯ, ದಿನೇಶ್, ಶೋಭಾ, ಎಲ್ಲ ಕಾರ್ಯಕ್ರಮ ಅಧಿಕಾರಿಗಳು ಹಾಗೂ ಟಿಬಿ ವಿಭಾಗದ ಅಧಿಕಾರಿಗಳು, ವೈದ್ಯಾಧಿಕಾರಿಗಳು ಮತ್ತು ಸಿಬ್ಬಂದಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಸಂವಿಧಾನ ಪ್ರಜಾಪ್ರಭುತ್ವದ ಅಡಿಪಾಯ ಆಡಳಿತಾಧಿಕಾರಿ ಮೋಹನ ರೆಡ್ಡಿ ಹೇಳಿಕೆ



ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ: ಸಂವಿಧಾನ ದೇಶದ ಪ್ರಜಾಪ್ರಭುತ್ವದ ಭದ್ರ ಅಡಿಪಾಯವಾಗಿದೆ. ನಾಗರಿಕರ ಹಕ್ಕುಗಳು ಹಾಗೂ ಕರ್ತವ್ಯಗಳನ್ನು ಎತ್ತಿ ಹಿಡಿಯುವಲ್ಲಿ ಸಂವಿಧಾನದ ಪಾತ್ರ ದೊಡ್ಡದಿದೆ ಎಂದು ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ನ ಆಡಳಿತಾಧಿಕಾರಿ ಮೋಹನ ರೆಡ್ಡಿ ಹೇಳಿದರು. ತಾಲೂಕಿನ ಕರಡ್ಯಾಳ ಚನ್ನಬಸವೇಶ್ವರ ಗುರುಕುಲ ವಿಜ್ಞಾನ ಪದವಿ ಪೂರ್ವ ಕಾಲೇಜಿನಲ್ಲಿ ಬುಧವಾರ ಆಯೋಜಿಸಿದ್ದ ಸಂವಿಧಾನ ದಿನಾಚರಣೆ ನಿಮಿತ್ತ ಡಾ.ಬಿ.ಆರ್. ಅಂಬೇಡ್ಕರ್ ಭಾವಚಿತ್ರಕ್ಕೆ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ಜಗತ್ತಿನಲ್ಲೇ ಅತ್ಯಂತ ವಿಶಿಷ್ಟವಾದ ಗುಣಲಕ್ಷಣ ಹೊಂದಿರುವ ಸಂವಿಧಾನ ನಮ್ಮದಾಗಿದೆ. ಇಂತಹ ಅಪರೂಪದ ಸಂವಿಧಾನವನ್ನು ದೇಶಕ್ಕೆ ನೀಡಿದ ಶ್ರೇಯಸ್ಸು ಡಾ.ಬಿ.ಆರ್.ಅಂಬೇಡ್ಕರ್ ಅವರಿಗೆ ಸಲ್ಲುತ್ತದೆ ಎಂದರು. ವಿದ್ಯಾರ್ಥಿಗಳು ಓದಿನ ಜತೆಗೆ ಸಂವಿಧಾನದ ಹಕ್ಕು ಮತ್ತು ಕರ್ತವ್ಯಗಳನ್ನು ತಿಳಿದುಕೊಂಡು ಚಾಚು ತಪ್ಪದೇ ಪಾಲಿಸಿ ಬದುಕು ಸಾರ್ಥಕ ಪಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಪ್ರಾಚಾರ್ಯ ಬಸವರಾಜ ಮೊಳಕೀರೆ ಮಾತನಾಡಿ ಡಾ.ಬಿ.ಆರ್.ಅಂಬೇಡ್ಕರು ನೀಡಿರುವ ಸಂವಿಧಾನ ವಿಶ್ವಕ್ಕೆ ಮಾದರಿಯಾಗಿದೆ. ಇಂತಹ ಶ್ರೇಷ್ಠ ಸಂವಿಧಾನವನ್ನು ವಿದ್ಯಾರ್ಥಿಗಳು ಸದಾಕಾಲ ಗೌರವಿಸಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಉಪಪ್ರಾಚಾರ್ಯ ಸಿದ್ರಾಮ ಗೊಗ್ಗಾ, ಉಪನ್ಯಾಸಕರಾದ ಲಚಮಾ ರೆಡ್ಡಿ, ರವಿ ಬಿರಾದಾರ್, ಹಣಮಂತ ಜ್ಯಾಂತಿ-ಕರ್, ಕಚೇರಿ ವ್ಯವಸ್ಥಾಪಕ ಆದರ್ಶ ಗಂದಿಗುಡೆ ಸೇರಿದಂತೆ ಹಲವರು ಇದ್ದರು

# 29ರಂದು ತಾಲ್ಲೂಕು ಕೃಷಿ ಇಲಾಖೆ ಕಛೇರಿಗೆ ಮುತ್ತಿಗೆ: ಶಾಸಕ ಪ್ರಭು ಚವ್ಹಾಣ

ಮಲ್ಲಮ್ಮ ನುಡಿ ವಾರ್ತೆ ಔರಾದ: ಬೆಳೆಹಾನಿ ಪರಿಹಾರ ವಿತರಣೆಯಲ್ಲಿ ತಾರತಮ್ಯ, ಕಬ್ಬು ಬೆಳೆಗಾರರಿಗೆ ಸೂಕ್ತ ಬೆಲೆ ನೀಡದಿರುವುದು ಸೇರಿದಂತೆ ರೈತರ ಸಮಸ್ಯೆಗಳಿಗೆ ಸ್ಪಂದಿಸದ ರಾಜ್ಯ ಸರ್ಕಾರದ ರೈತ ವಿರೋಧಿ ನೀತಿಯನ್ನು ಖಂಡಿಸಿ ನ.29ರಂದು ಔರಾದ(ಬಿ) ಪಟ್ಟಣದಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ತಿಳಿಸಿದ್ದಾರೆ.ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಭಾರತೀಯ ಜನತಾ ಪಾರ್ಟಿ ಔರಾದ(ಬಾ) ಮಂಡಲ ಹಾಗೂ ರೈತ ಮೋರ್ಚಾ ವತಿಯಿಂದ ಪ್ರತಿಭಟನೆ ನಡೆಯುತ್ತಿದ್ದು,

ಅಂದು ಬೆಳಗ್ಗೆ 10 ಗಂಟೆಗೆ ಪಟ್ಟಣದ ಬಸವೇಶ್ವರ ವೃತ್ತದಿಂದ ಪ್ರತಿಭಟನಾ ಮೆರವಣಿಗೆ ಆರಂಭಗೊಂಡು ಬಸ್ ನಿಲ್ದಾಣ, ತಾಲ್ಲೂಕು ಪಂಚಾಯತ ಕಛೇರಿ, ಕನ್ನಡಾಂಬೆ ವೃತ್ತ, ಎಪಿಎಂಸಿ ವೃತ್ತದಿಂದ ತಾಲ್ಲೂಕು ಕೃಷಿ ಇಲಾಖೆ ಕಛೇರಿಗೆ ತೆರಳಿ ನಂತರ ಕಛೇರಿಗೆ ಮುತ್ತಿಗೆ ಹಾಕಲಾಗುತ್ತದೆ ಎಂದಿದ್ದಾರೆ.

ಮುಂಗಾರು ಹಂಗಾಮಿನಲ್ಲಿ ಧಾರಾಕಾರ ಮಳೆಯಾಗಿ ನಮ್ಮ ರೈತರು ಬೆಳೆದಿದ್ದ ಉದ್ದು, ಹೆಸರು, ಸೋಯಾ,

ಹತ್ತಿ ಸೇರಿದಂತೆ ಎಲ್ಲ ಬೆಳೆಗಳು ನೀರು ಪಾಲಾಗಿವೆ. ಸರ್ಕಾರ ರೈತರಿಗೆ ಪರಿಹಾರ ಘೋಷಿಸಿದೆ ಆದರೆ ಪರಿಹಾರ ಮೊತ್ತ ಕೆಲವು ರೈತರಿಗೆ ಮಾತ್ರ ನೀಡಿ ತಾರತಮ್ಯ ಮಾಡಲಾಗಿದೆ.



ಕಬ್ಬಿನ ಬೆಲೆ ನಿಗದಿಯಲ್ಲಿಯೂ ಜಿಲ್ಲೆಯ ರೈತರಿಗೆ ಅನ್ಯಾಯವಾಗಿದೆ.

ಬೆಂಬಲ ಬೆಲೆ ಯೋಜನೆಯಡಿ ಮೆಕ್ಕೆಜೋಳ ಖರೀದಿ ಕೇಂದ್ರ ಆರಂಭಿಸಿಲ್ಲ. ಸರ್ಕಾರ ಪ್ರತಿ ಹಂತದಲ್ಲಿ ರೈತರನ್ನು ಕಡೆಗಣಿಸುತ್ತಾ ಬರುತ್ತಿದೆ.

ಬೆಳೆ ಹಾನಿ ಪರಿಹಾರವೂ ಸಿಗದೇ, ಬೆಳೆ ವಿಮೆಯ ಸೌಲಭ್ಯವೂ ಸಮರ್ಪಕವಾಗಿ ಸಿಗದಿರುವುದರಿಂದ ರೈತರು ಕಂಗಾಲಾಗಿದ್ದಾರೆ. ಕೆಲ ರೈತರು ದಾರಿ ತೋಚದೆ ಆತ್ಮಹತ್ಯೆಯ ದಾರಿ ಹಿಡಿಯುತ್ತಿದ್ದಾರೆ.

ಹಾಗಾಗಿ ಬಿಜೆಪಿಯಿಂದ ಇಡೀ ರಾಜ್ಯದಲ್ಲಿ ಪ್ರತಿಭಟನೆ ನಡೆ-ಯುತ್ತಿದೆ. ಎಲ್ಲ ವಿಧಾನಸಭಾ ಕ್ಷೇತ್ರಗಳಲ್ಲಿ ಕೃಷಿ ಇಲಾಖೆಗೆ ಮುತ್ತಿಗೆ ಹಾಕಲಾಗುತ್ತಿದೆ. ಅದರಂತೆ ಔರಾದನಲ್ಲಿಯೂ ಪ್ರತಿಭಟನೆ ನಡೆಸಲಾಗುತ್ತಿದೆ.

ಇದು ರೈತರ ಹಿತದೃಷ್ಟಿಯಿಂದ ನಡೆಯುತ್ತಿರುವ ಪ್ರತಿಭಟನೆಯಾಗಿದ್ದು, ರಾಜ್ಯ ಸರ್ಕಾರದಿಂದ ಬೆಳೆಹಾನಿ ಪರಿಹಾರ ಸಿಗದ ಮತ್ತು ರಾಜ್ಯ ಸರ್ಕಾರದಿಂದ ಅನ್ಯಾಯಕ್ಕೆ ಒಳಗಾದ ರೈತರು ಆಗಮಿಸಬೇಕು.

ಸಾರ್ವಜನಿಕರು ಮತ್ತು ರೈತರು ಪಕ್ಷಾತೀತವಾಗಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಶಾಸಕರು ಮನವಿ ಮಾಡಿದ್ದಾರೆ.

# ಸ್ಪಂದನೆ ಕೇಂದ್ರಕ್ಕೆ ಸಚಿವ ತಿಮ್ಮಾಪೂರ ಚಾಲನೆ

## ಸಾರ್ವಜನಿಕರ ಅಹವಾಲು ಸ್ಪಂದನೆಗೆ ಜಿಲ್ಲಾಡಳಿತದಿಂದ ವಿನೂತನ ಪ್ರಯೋಗ

ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ: ನ, ಸರಕಾರಿ ಕಚೇರಿಗಳಿಗೆ ಸಾರ್ವಜನಿಕರು ಅಲೆದಾಡುವದನ್ನು ತಪ್ಪಿಸುವ ನಿಟ್ಟಿನಲ್ಲಿ ತಂತ್ರಜ್ಞಾನ ಬಳಸಿಕೊಂಡು ಜಿಲ್ಲಾಡಳಿತ ಬಾಗಲಕೋಟೆ ಸ್ಪಂದನೆ ಎಂಬ ಹೆಸರಿನಲ್ಲಿ ವಿನೂತನ ಪ್ರಯೋಗ ಕೈಗೊಂಡಿದೆ ಎಂದು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಹೇಳಿದರು.

ಜಿಲ್ಲಾಡಳಿತ ಭವನದಲ್ಲಿ ನೂತನವಾಗಿ ಪ್ರಾರಂಭಿಸಲಾದ ಬಾಗಲಕೋಟೆ ಸ್ಪಂದನೆ ಕೇಂದ್ರಕ್ಕೆ ಬುಧವಾರ ಚಾಲನೆ ನೀಡಿ ಮಾತನಾಡಿದ ಅವರು ಭಾರತ ಸಂವಿಧಾನವು ಸಾರಿರುವ ನ್ಯಾಯ, ಸಮಾನತೆ ಮತ್ತು ಪಾರದರ್ಶಕತೆಯ ಮೌಲ್ಯಗಳನ್ನು ಆಡಳಿತದಲ್ಲಿ ಜಾರಿಗೊಳಿಸುವ ದೃಷ್ಟಿಯಿಂದ ಸಂವಿಧಾನ ದಿನದ ಶುಭಸಂದರ್ಭದಲ್ಲಿ ಬಾಗಲಕೋಟೆ ಸ್ಪಂದನೆ ಎಂಬ ನಾಗರಿಕ-ಸ್ನೇಹಿ ಡಿಜಿಟಲ್ ವೇದಿಕೆಯನ್ನು ಜಿಲ್ಲಾಡಳಿತವು ಸಾರ್ವಜನಿಕರ ಸೇವೆಗೆ ಪ್ರಾರಂಬಿಸಿದೆ ಎಂದರು.

ಸಾರ್ವಜನಿಕರು ಕಚೇರಿಗೆ ಬಂದು ಅರ್ಜಿ ಸಲ್ಲಿಸುವದನ್ನು ತಡೆಗಟ್ಟುವ ಸಲುವಾಗಿ ತಂತ್ರಜ್ಞಾನ ಬಳಸಿಕೊಂಡು ತ್ವರಿತ ಮತ್ತು ಪರಿಣಾಮಕಾರಿ ಸ್ಪಂದನೆ ನೀಡುವ ನಿಟ್ಟಿನಲ್ಲಿ ಜಿಲ್ಲಾಡಳಿತವು ಕೆನರಾ ಬ್ಯಾಂಕ್ ಸಿಎಸ್ಆರ್ ಅನುದಾನದಲ್ಲಿವೀ ಕೇಂದ್ರವನ್ನು ಸ್ಥಾಪಿಸಲಾಗಿದೆ. ಇದೊಂದು ವಿನೂತನ ಪ್ರಯೋಗವಾಗಿದ್ದು, ಸಾರ್ವಜನಿಕರಿಗೆ ಸಹಕಾರಿಯಾಗಲಿದೆ ಎಂದು ತಿಳಿಸಿದರು.

ಸಾರ್ವಜನಿಕರು ತಮ್ಮ ಯಾವುದೇ ಅಹವಾಲುಗಳು ಇದ್ದಲ್ಲಿ ತಾವು ಇದ್ದ ಸ್ಥಳದಿಂದಲೇ ಟೋಲ್ ಫ್ರೀ ನಂಬರ 08354-252100, ಸ್ಕ್ಯಾನ್ ಕ್ಯೂಆರ್ ಕೋಡ್ ಹಾಗೂ ವೆಬ್‌ಸೈಟ್ http://www.bagalkotespandane.in ಮೂಲಕ ಸಲ್ಲಿಸಬಹುದಾಗಿದೆ. ತಾವು ಸಲ್ಲಿಸಿದ ಅಹವಾಲುಗಳು ಸಂಬಂಧಪಟ್ಟ ಅಧಿಕಾರಿಗಳಿಗೆ ಎಸ್‌ಎಂ.ಎಸ್ ಮೂಲಕ ರವಾನೆಯಾಗಿ ಅಹವಾಲಿಗೆ ಅಧಿಕಾರಿಗಳು ಸ್ಪಂದಿಸಿದ ಮಾಹಿತಿ ಸಹ ಅಹವಾಲುದಾರರ ಮೊಬೈಲ್‌ಗೆ ಮೇಸೆಜ್ ಕೂಡ ಬರುವಂತ ಕೆಲಸ ಮಾಡಲಾಗುತ್ತಿದೆ ಎಂದರು.



ಕಾರ್ಯಕ್ರಮದಲ್ಲಿ ಬೀಳಗಿ ಶಾಸಕ ಹಾಗೂ ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷ ಜೆ.ಟಿ.ಪಾಟೀಲ, ಬಾದಾಮಿ ಶಾಸಕ ಬಿ.ಬಿ.ಚಿಮ್ಮನಕಟ್ಟಿ, ಜಿಲ್ಲಾಧಿಕಾರಿ ಸಂಗಪ್ಪ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ,

ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರಸನ್ನ ದೇಸಾಯಿ, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಕೆನರಾ ಬ್ಯಾಂಕ್‌ನ ರಿಜನಲ್ ಕಚೇರಿಯ ಎಜಿಎಂ ಸತ್ಯನ್, ಬ್ಯಾಂಕ್‌ನ ಜಿಲ್ಲಾ ವ್ಯವಸ್ಥಾಪಕ ರಾಜಕುಮಾರ ಹೂಗಾರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಭಾಗಿರಥಿ ಪಬ್ಲಿಕ್ ಶಾಲೆಯಲ್ಲಿ ಸಂವಿಧಾನ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ: ಮನುಜ ಪಥದ ದಿಕ್ಸೂಚಿ ಸಂವಿಧಾನ ಎಲ್ಲ ಕಾನೂನುಗಳಿಗೆ ತಾಯಿ ಬೇರು ಎಂದು ಶಾಲೆ ಮುಖ್ಯಶಿಕ್ಷಕ ಮನೋಜಕುಮಾರ ಹಿರೇಮಠ ತಿಳಿಸಿದರು.ಪಟ್ಟಣದ ಭಾಗಿರಥಿ ಪಬ್ಲಿಕ್ ಶಾಲೆಯಲ್ಲಿ ಬುಧವಾರ ನಡೆದ ಸಂವಿಧಾನ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು. ಪ್ರತಿ ವಿದ್ಯಾರ್ಥಿ ಸಂವಿಧಾನದ ಮಹತ್ವವನ್ನು ಅರಿಯಬೇಕು. ಶಾಲಾ ಹಂತದಲ್ಲೇ ಸಂವಿಧಾನದ ಬಗ್ಗೆ ಜಾಗೃತಿ ಮೂಡಿಸುತ್ತಿರುವುದು ಉತ್ತಮ ಬೆಳವಣಿಗೆ ಎಂದರು.

ಶಿಕ್ಷಕಿ ಅಂಜಲಿ ಕಾಂಬಳೆ ಮಾತನಾಡಿ, ದೇಶದಲ್ಲಿ ಮಹಿಳೆಯರ ಸಂರಕ್ಷಣೆಗೆ ಹಲವು ಕಾನೂನುಗಳು ರಕ್ಷಾ ಕವಚದಂತೆ ಇವೆ. ಮಹಿಳೆಯರ ಮೇಲೆ ಆಗುವ ದೌರ್ಜನ್ಯವನ್ನು ತಡೆಯಬೇಕಾದರೆ ಶಾಲಾ ಹಂತದಲ್ಲಿಯೇ ಮಕ್ಕಳಿಗೆ ಹಕ್ಕು ಹಾಗೂ ಸಂರಕ್ಷಣೆ ಬಗ್ಗೆ ಅರಿವು ಮೂಡಿಸಬೇಕು ಎಂದರು. ನಂತರ ಎಲ್ಲರೂ ಸಂವಿಧಾನ ರಕ್ಷಣೆ ಪ್ರತಿಜ್ಞೆ ಭೋದಿಸಲಾಯಿತು. ಈ ಸಂದರ್ಭದಲ್ಲಿ ಸಂಗೀತಾ ಕಾಂಬಳೆ, ದೀಪಮಾಲಾ ಸೂರ್ಯವಂಶಿ, ರಾಜಶ್ರೀ ಸಿರಗಿರೆ, ಅಂಬಿಕಾ ಗಾಯಕವಾಡ್, ಮಲ್ಲಕಾರ್ಜುನ, ಸಂಗಮೇಶ, ಪಂಚಫುಲಾ, ಅಶ್ವಿನಿ ಮನೋಜ ಹಾಗೂ ಶಾಲೆ ಮಕ್ಕಳು ಇದ್ದರು.

# ಸಂವಿಧಾನದ ಆಶಯಗಳಂತೆ ನಾವೆಲ್ಲರೂ ಬದುಕೋಣ- ಸಚಿವ ಈಶ್ವರ ಖಂಡ್ರೆ

ಮಲ್ಲಮ್ಮ ನುಡಿ ವಾರ್ತೆ,

ಬೀದರ: ಸಂವಿಧಾನದ ಆಶಯಗಳಂತೆ ನಾವೆಲ್ಲರೂ ಬದುಕೋಣ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ ತಿಳಿಸಿದರು.

ಅವರು ಬುಧವಾರ ನಗರದ ಪೂಜ್ಯ ಚನ್ನಬಸವ ಪಟ್ಟದೇವರು ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಸಮಾಜ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಸಂವಿಧಾನ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ, ಸಂವಿಧಾನ ಪೀಠಿಕೆ ಪ್ರತಿಯನುಬೋಧಿಸಿ ಮಾತನಾಡಿದರು.

ನಮ್ಮ ಸಂವಿಧಾನ ನಮಗೆ ಎಲ್ಲಾ ರೀತಿಯ ಸ್ವಾತಂತ್ರ್ಯ, ಹಕ್ಕುಗಳು ನೀಡುವುದರ ಮೂಲಕ ಪ್ರತಿಯೊಬ್ಬರು ಸಮಾಜದಲ್ಲಿ ಸಮಾನರಾಗಿ ಬಾಳುವಂತೆ ಹಾಗೂ ವ್ಯಕ್ತಿಗೌರವ, ಸಾಮಾಜಿಕ, ಆರ್ಥಿಕ, ಶೈಕ್ಷಣಿಕ, ರಾಜಕೀಯ, ಧಾರ್ಮಿಕ ಸೇರಿದಂತೆ ಇತರೆ ಎಲ್ಲಾ ರೀತಿಯ ಸಮಾನ ಅವಕಾಶ ಹಾಗೂ ಮತದಾನದ ಹಕ್ಕು, ಮಹಿಳೆಯರಿಗೆ ವಿಶೇಷ ಸ್ಥಾನಮಾನ ನಮ್ಮ ಸಂವಿಧಾನ ಕಲ್ಪಿಸಿದೆ ಎಂದರು.

ನಮ್ಮ ದೇಶಕ್ಕೆ ಸ್ವಾತಂತ್ರ್ಯ ಸಿಕ್ಕ ಮೇಲೆ ನಮ್ಮದೇ ಆದ ಕಾನೂನು ರೂಪಿಸುವ ಸಂವಿಧಾನ ಇರಲಿಲ್ಲ. 1950 ಜನವರಿ.26 ರಂದು ಸಂವಿಧಾನ ಜಾರಿಗೆ ಬಂದ ಮೇಲೆ ಒಂದು ಪರಿಪೂರ್ಣ ರಾಷ್ಟ್ರವಾಗಿ ಹೊರಹೊಮ್ಮಿತು. 1946ರಲ್ಲಿ ಮೊದಲ ರಚನಾ ಸಭೆ ನಡೆಯಿತು. ನಂತರ 1947 ಆಗಸ್ಟ್ 29 ರಂದು ಸಂವಿಧಾನ ಕರಡು ಸಮಿತಿ ರಚಿಸಿ ಅದರ ಅಧ್ಯಕ್ಷರಾಗಿ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರನ್ನು ಆಯ್ಕೆ ಮಾಡಲಾಯಿತು. ವಿವಿಧ ದೇಶಗಳ ಸಂವಿಧಾನವನ್ನು ಅಧ್ಯಾಯನ ಮಾಡಿ, ಜಗತ್ತಿನ ಶ್ರೇಷ್ಠ ಮತ್ತು ಅತಿ ದೊಡ್ಡ ಲಿಖಿತ ಸಂವಿಧಾನವನ್ನು ಮಹಾ ಮಾನವತಾವಾದಿ ಡಾ.ಬಾಬಾ ಸಾಹೇಬ್ ಅಂಬೇಡ್ಕರ ಅವರು ನಮಗೆ ನೀಡಿದ್ದಾರೆ. ಪ್ರತಿಯೊಬ್ಬರಿಗೂ ಸಾಮಾಜಿಕ ನ್ಯಾಯ ನೀಡುವಲ್ಲಿ ಮತ್ತು ಯಾರು ಮೇಲೆ ಕೀಳು ಎನ್ನದೇ ಹಾಗೂ ವಿವಿಧ ಜಾತಿ, ಧರ್ಮ, ಭಾಷೆ, ಸಂಸ್ಕೃತಿ, ಆಚಾರ ವಿಚಾರ ಹೊಂದಿದರು ಕೂಡ ಎಲ್ಲರೂ ಒಂದೇ ಎಂದು ಐಕ್ಯತೆ ಸಾರುವ ಸಂವಿಧಾನ ನಮ್ಮದಾಗಿದೆ ಎಂದರು.




ನಮ್ಮ ದೇಶಕ್ಕೆ ಸ್ವಾತಂತ್ರ್ಯ ಬಂದಾಗ ಬಹಳ ಬಡತನ ಹಾಗೂ ಆರ್ಥಿಕ ವ್ಯವಸ್ಥೆ ದುಸ್ಥಿತಿಯಲ್ಲಿತ್ತು. ಕೇಂದ್ರದಲ್ಲಿ ನಮ್ಮ ಸರ್ಕಾರ ಸತತವಾಗಿ ಬಂದು ಕೈಗಾರಿಕೆ ಕ್ರಾಂತಿ, ಹಸಿರು ಕ್ರಾಂತಿ, ಸಂಪರ್ಕ ಕ್ರಾಂತಿ, ಉದ್ಯೋಗ ಸೃಷ್ಟಿ, ವಿಜ್ಞಾನ ತಂತ್ರಜ್ಞಾನ ಬೆಳವಣಿಗೆ, ಬಡತನ ನಿರ್ಮೂಲನೆ ಅಂತಹ ಹಲವು ಕ್ರಮಗಳನ್ನು ಕೈಗೊಂಡು ಪ್ರಗತಿ ಮತ್ತು ಅಭಿವೃದ್ಧಿಗಾಗಿ ಶ್ರಮಿಸಲಾಗಿದೆ. ನಮ್ಮ ರಾಜ್ಯದಲ್ಲಿ ನಮ್ಮ ಸರ್ಕಾರ ಪಂಚ ಗ್ಯಾರಂಟಿಗಳನ್ನು ಜಾರಿಗೆ ತರುವುದರ ಮೂಲಕ ಜನರ ಜೀವನ ಮಟ್ಟ ಸುಧಾರಣೆ ಮಾಡಲಾಗುತ್ತದೆ ಎಂದರು.

ಜಿಲ್ಲೆಯಲ್ಲಿ ಎಸ್.ಸಿ/ಎಸ್.ಟಿ ಮಕ್ಕಳಿಗೆ 31 ಕೆ.ಪಿ.ಎಸ್ ಶಾಲೆ ಆರಂಭಿಸಲಾಗುತ್ತಿದೆ ಮತ್ತು ಕಾರ್ಮಿಕರ ಮಕ್ಕಳಿಗೆ ವಿಶೇಷವಾಗಿ ವಸತಿ ಶಾಲೆ ನಿರ್ಮಾಣ ಮಾಡಲಾಗುತ್ತಿದೆ ಹಾಗೂ ಬೀದರ ವಿಶ್ವವಿದ್ಯಾಲಯಕ್ಕೆ ಹೆಚ್ಚಿನ ಅನುದಾನ ನೀಡುವಂತೆ ಮುಖ್ಯಮಂತ್ರಿಗಳ ಬಳಿ ಮನವಿ ಮಾಡಲಾಗಿದೆ ಎಂದರು.

ಬೀದರ ವಿಶ್ವವಿದ್ಯಾಲಯದ ಸಿಂಡಿ-ಕೇಟ್ ಸದಸ್ಯರಾದ ವಿಠಲದಾಸ ಪ್ಯಾಗೆ ಅವರು ಈ ಕಾರ್ಯಕ್ರಮದಲ್ಲಿ ಅತಿಥಿ ಉಪನ್ಯಾಸ ನೀಡಿದರು.

ಇದಕ್ಕೂ ಮುನ್ನ ಸಚಿವರು ಅಂಬೇಡ್ಕರ್ ವೃತ್ತದಲ್ಲಿ ಅಂಬೇಡ್ಕರ ಪ್ರತಿಮೆಗೆ ಪುಷ್ಪನಮನ ಸಲ್ಲಿಸಿ, ರಥ ಮೆರವಣಿಗೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ ಹಾಗೂ ಕೃಷ್ಣ ಮೇಲ್ದಂಡೆ ಯೋಜನೆ ಅಧ್ಯಕ್ಷರಾದ ಬಾಬು ಹೊನ್ನನಾಯ್ಕ, ಬೀದರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಅಮೃತರಾವ ಚಿಮಕೋಡೆ, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ವಾಹಣಾಧಿಕಾರಿ ಡಾ.ಗಿರೀಶ್ ಬದೋಲೆ, ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಚಂದ್ರಕಾಂತ ಪೂಜಾರಿ, ಗೋವಿಂದ ಸ್ವಾಮಿಗಳು, ಭಂತೆ ಜ್ಞಾನಸಾಗರ, ದಮ್ಮ ಕಿರ್ತ, ಅನಿಲ ಬೆಲ್ದಾರ , ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳು, ಮಕ್ಕಳು ಮತ್ತು ಇತರರು ಉಪಸ್ಥಿತರಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)